ಸಂಪುಟ: 04 ಸಂಚಿಕೆ: 218 ಪುಟಗಳು: 08 ಸೋಮವಾರ 21 ಅಕ್ಟೋಬರ್ 2023 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಸಾಧಿಸೆ ಸಾಧಿಸುತ್ತೇನೆ
ಎಂಬ ಕಿಚ್ಚಿನ ಮನಸ್ಸಿನ
ಮುಂದೆ ಯಾವುದೇ
ಅಡೆತಡೆ ನಿಲ್ಲಲಾರದು

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಚನ್ನಪಟ್ಟಣ ಉಪಚುನಾವಣೆ: ಇಂದು ಎನ್‌ಡಿಎ ಅಭ್ಯರ್ಥಿ ಘೋಷಣೆ


• ಉದಯವಾಹಿನಿ, ಬೆಂಗಳೂರು

ಚನ್ನಪಟ್ಟಣ ಉಪಚುನಾವಣೆಗೆ ಎನ್‌ಡಿಎ ಮೈತ್ರಿ ಅಭ್ಯರ್ಥಿ ಯಾರಾಗಲಿದ್ದಾರೆ ಎಂಬ ತೀವ್ರ ಕುತೂಹಲ ಹೆಚ್ಚುತ್ತಿದೆ. ಈ ನಡುವೆ ಬಿಜೆಪಿ ನಾಯಕ ಸಿ.ಪಿ.ಯೋಗೇಶ್ವರ್ ಅವರನ್ನು ಎನ್ ಡಿಎ ಅಭ್ಯರ್ಥಿಯಾಗಿ ಕಣಕ್ಕಿಳಿಸುವ ಸಾಧ್ಯತೆ ಇದೆ ಎನ್ನಲಾಗಿದೆ. ಮತ್ತೊಂದೆಡೆ ಜೆಡಿಎಸ್ ನಾಯಕ ನಿಖಿಲ್‌ಗೆ ಟಿಕೆಟ್ ನೀಡಬೇಕು ಎಂಬ ಚರ್ಚೆಯೂ ನಡೆಯುತ್ತಿದೆ.ಈ ಗೊಂದಲಗಳ ನಡುವೆಯೇ ವಿಪಕ್ಷ ನಾಯಕ ಆರ್.ಅಶೋಕ್ ಚನ್ನಪಟ್ಟಣ ಅಭ್ಯರ್ಥಿ ಬಗ್ಗೆ ಪ್ರತಿಕ್ರಿಯೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಿಪಕ್ಷ ನಾಯಕ ಆರ್.ಅಶೋಕ್, ಈಗಗಾಲೇ ಸಂಡೂರು ಹಾಗೂ ಶಿಗ್ಗಾಂವಿಗೆ ಬಿಜೆಪಿ ನಾಯಕರನ್ನು ಅಭ್ಯರ್ಥಿಯನ್ನಾಗಿ ಘೋಷಿಸಲಾಗಿದೆ. ಚನ್ನಪಟ್ಟಣ ಕ್ಷೇತ್ರಕ್ಕೆ ಅಭ್ಯರ್ಥಿ ಘೋಷಣೆ ಬಾಕಿ ಇದೆ. ಹೆಚ್.ಡಿ. ಕುಮಾರಸ್ವಾಮಿ ಹಾಗೂ ಬಿಜೆಪಿ ನಾಯಕರ ಜೊತೆ ಚರ್ಚೆ ನಡೆದಿದೆ. ಬಹುತೇಕ ಅಭ್ಯರ್ಥಿ ಫೈನಲ್ ಆಗಿದೆ ಎಂದರು.

**ಜೆಡಿಎಸ್ ಚಿಹ್ನೆಯಿಂದ ಕಣಕ್ಕಿಳಿಯಲು ಆಫರ್!**

ಚನ್ನಪಟ್ಟಣ ವಿಚಾರವಾಗಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮುಕ್ತಮನಸ್ಸು ಹೊಂದಿದ್ದಾರೆ. ಯಾರೇ ಅಭ್ಯರ್ಥಿಯಾಗಿ ಕಣಕ್ಕಿಳಿದರೂ ಎನ್ ಡಿಎ ಗೆಲುವು ಸಾಧಿಸಬೇಕು ಎಂದಿದ್ದಾರೆ. ಹಾಗಾಗಿ ಇಂದು ಸಂಜೆ ಅಥವಾ ನಾಳೆ ಬೆಳಿಗ್ಗೆಯೊಳಗೆ ಚನ್ನಪಟ್ಟಣಕ್ಕೆ ಎನ್ ಡಿಎ ಅಭ್ಯರ್ಥಿ ಘೋಷಿಸಲಾಗುವುದು. ಯಾರೇ ಅಭ್ಯರ್ಥಿಯಾದರೂ ರೆಬಲ್ ಆಗುವ ಪ್ರಶ್ನೆಯೇ ಇಲ್ಲ ಎಂದು ಹೇಳಿದರು.



> ಜೆಡಿಎಸ್ ನವರು ಅವರಿಗೆ ಬೇಕಾದವರಿಗೆ ಟಿಕೆಟ್ ಘೋಷಿಸಬಹುದು.ಬಿಜೆಪಿ ಜೆಡಿಎಸ್ ಒಟ್ಟಾಗಿ ಮೂರೂ ಕ್ಷೇತ್ರಗಳಲ್ಲಿ ಗೆಲ್ಲಲು ಶ್ರಮ ವಹಿಸುತ್ತೇವೆ. ಸಿಪಿ ಯೋಗೇಶ್ವರ್ ಸ್ಪರ್ಧೆಯ ಬಗ್ಗೆ ದೆಹಲಿಯವರು ನಿರ್ಧಾರ ಮಾಡುತ್ತಾರೆ.
>
> -ಬಿಎಸ್ ಯಡಿಯೂರಪ್ಪ
> ಬಿಜೆಪಿ ಸಂಸದೀಯ ಮಂಡಳಿಯ ಸದಸ್ಯ

**ಚನ್ನಪಟ್ಟಣ ಟಿಕೆಟ್ ನಮಗೇ ಸಿಗಬೇಕು:** ಚನ್ನಪಟ್ಟಣ ಉಪಚುನಾವಣಾ ಟಿಕೆಟ್ ವಿಚಾರವಾಗಿ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಚನ್ನಪಟ್ಟಣ ಟಿಕೆಟ್ ವಿಚಾರದಲ್ಲಿ ಗೊಂದಲವೇನಿಲ್ಲ. ನ್ಯಾಯಯುತವಾಗಿ ಟಿಕೆಟ್ ನಮಗೇ ಸಿಗಬೇಕು ಎಂದಿದ್ದಾರೆ. ಮಂಡ್ಯ ಜಿಲ್ಲೆಯ ಪಾಂಡವಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಹೆಚ್.ಡಿ.ಕುಮಾರಸ್ವಾಮಿ, ಈಗಾಗಲೇ ಶಿಗ್ಗಾಂವಿ ಹಾಗೂ ಸಂಡೂರು ಎರಡೂ ಕ್ಷೇತ್ರಕ್ಕೆ ಬಿಜೆಪಿ ನಾಯಕರನ್ನು ಅಭ್ಯರ್ಥಿಯನ್ನಾಗಿ ಮಾಡಲಾಗಿದೆ. ನ್ಯಾಯಯುತವಾಗಿ ಚನ್ನಪಟ್ಟಣ ಟಿಕೆಟ್ ನಮಗೆ ಕೊಡ್ಬೇಕು ಎಂದು ಹೇಳಿದರು.

ಸಿ.ಪಿ.ಯೋಗೇಶ್ವರ್ ಕೂಡ ಚನ್ನಪಟ್ಟಣದಿಂದ ಸ್ಪರ್ಧೆ ಮಾಡಬೇಕು ಅಂತಿದ್ದಾರೆ. ಎನ್ ಡಿಎ ಅಭ್ಯರ್ಥಿ ಯಾರಾಗಲಿದ್ದಾರೆ ನೋಡೋಣ. ಇಂದು ಸಂಜೆ ವೇಳೆಗೆ ಅಭ್ಯರ್ಥಿ ಘೋಷಣೆಯಾಗಲಿದೆ ಎಂದು ಹೇಳಿದರು.

### ಚನ್ನಪಟ್ಟಣ ಕ್ಷೇತ್ರದಿಂದ 'ಸಿ.ಪಿ. ಯೋಗೇಶ್ವರ್' ಸ್ಪರ್ಧೆ ಫಿಕ್ಸ್

ಈಗಾಗಲೇ ಬಿಜೆಪಿ ಶಿಗ್ಗಾಂವಿ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಹೆಸರು ಘೋಷಣೆ ಮಾಡಿದ್ದು, ಇಂದು ಸಂಜೆ ವೇಳೆಗೆ ಚನ್ನಪಟ್ಟಣ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಘೋಷಣೆ ಮಾಡುವ ಸಾಧ್ಯತೆ ಇದೆ. ಚನ್ನಪಟ್ಟಣ ಕ್ಷೇತ್ರದಲ್ಲಿ ಮೈತ್ರಿ ಅಭ್ಯರ್ಥಿಯಾಗಿ ಸಿ.ಪಿ. ಯೋಗೇಶ್ವರ್ ಸ್ಪರ್ಧೆ ಬಹುತೇಕ ಫೈನಲ್ ಆಗಿದೆ ಎನ್ನಲಾಗಿದ್ದು, ಜೆಡಿಎಸ್ ಚಿಹ್ನೆಯಿಂದ ಸ್ಪರ್ಧಿಸುವ ಕುರಿತು ಜೆಡಿಎಸ್ ಆಫರ್ ನೀಡಿದೆ ಎಂದು ಹೇಳಲಾಗಿದೆ. ಚನ್ನಪಟ್ಟಣ ಅಭ್ಯರ್ಥಿ ಹೆಸರು ಘೋಷಣೆ ಆಗಲಿದೆ. ಚನ್ನಪಟ್ಟಣ ಕ್ಷೇತ್ರದ ಟಿಕೆಟ್ ವಿಚಾರದಲ್ಲಿ ಗೊಂದಲ ಇಲ್ಲ. ನ್ಯಾಯಯುತವಾಗಿ ಚನ್ನಪಟ್ಟಣ ಟಿಕೆಟ್ ನಮಗೆ ಬೇಕು ಎಂದು ಹೇಳಿದ್ದಾರೆ.

## ಕೆಂಪೇಗೌಡ ಏರ್ಪೋರ್ಟ್‌ಗೆ ಹುಸಿ ಬಾಂಬ್ ಬೆದರಿಕೆ ಕರೆ

• ಉದಯವಾಹಿನಿ, ಬೆಂಗಳೂರು

ದೇಶದಾದ್ಯಂತ ಹಲವು ವಿಮಾನ ನಿಲ್ದಾಣಗಳಿಗೆ, ವಿಮಾನಯಾನ ಸಂಸ್ಥೆಗಳಿಗೆ ಹುಸಿ ಬಾಂಬ್ ಕರೆ ಬರುತ್ತಿರುವ ಬೆಳವಣಿಗೆಗಳ ನಡುವೆ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಬಾಂಬ್ ಬೆದರಿಕೆ ಹಾಕಲಾಗಿದೆ. ಇದರ ಮಧ್ಯ ಇದೀಗ ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಕೂಡ ಬಾಂಬ್ ಬೆದರಿಕೆ ಕರೆ ಬಂದಿದೆ. ಆದರೆ ಅದು ಹುಸಿ ಬಾಂಬ್ ಬೆದರಿಕೆ ಸಂದೇಶ ಹಿನ್ನೆಲೆಯಲ್ಲಿ ಟ್ವೀಟ್ ಮಾಡಿದವರ ವಿರುದ್ಧ ಕೆಂಪೇಗೌಡ ವಿಮಾನ ನಿಲ್ದಾಣ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ದಾಖಲಾಗಿದೆ. ಹೌದು ಟ್ವೀಟ್ ಮೂಲಕ ಕೆಂಪೇಗೌಡ ಏರ್ಪೋರ್ಟ್‌ಗ್ ಬೆದರಿಕೆ ಹಾಕಿದ ಸಂದೇಶ ಬಂದಿದೆ. ಕಮಾಂಡ ಸೆಂಟರ್ ಸ್ಫೋಟಿಸುವುದಾಗಿ ಬೆದರಿಕೆ ಸಂದೇಶ ಬಂದಿದೆ. ಆರು ವಿಮಾನಗಳಲ್ಲಿ 12 ಡಾಂಬರ್‌ಗಳಿದ್ದಾರೆಂದು ಟ್ವೀಟ್ ಮಾಡಲಾಗಿದೆ. ಪ್ರತಿಯೊಂದು ವಿಮಾನದಲ್ಲಿ ಇಬ್ಬರು ಬಾಂಬರ್ ಗಳಿದ್ದಾರೆ ಎಂದು ಟ್ವೀಟ್ ಮಾಡಲಾಗಿದೆ.

## ಬಿಎಸ್‌ವೈ ಪತ್ನಿ ಸಾವಿನಲ್ಲಿ ಶೋಭಾ ಕರಂದ್ಲಾಜೆ ಪಾತ್ರವಿದೆ

• ಉದಯವಾಹಿನಿ, ಬೆಂಗಳೂರು

ಸದ್ಯ ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಮುಡಾ ಹಗರಣ ಭಾರಿ ಸದ್ದು ಮಾಡುತ್ತಿದೆ. ಇದರಿಂದ ಸಿಎಂ ಸಿದ್ದರಾಮಯ್ಯ ಅವರು ಕೂಡ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇದೀಗ ಮತ್ತೊಂದು ಸುದ್ದಿ ಭಾರಿ ಸದ್ದು ಮಾಡುತ್ತಿದ್ದು ಸಚಿವ ಭೈರತಿ ಸುರೇಶ್ ಅವರು ಬಿಎಸ್ ಯಡಿಯೂರಪ್ಪ ಪತ್ನಿ ಮೈತ್ರಾದೇವಿ ಸಾವಿನಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪಾತ್ರವಿದೆ ಎಂದು ಹೊಸ ಬಾಂಬ್ ನಡೆಸಿದ್ದಾರೆ. ಬಿಎಸ್ ಯಡಿಯೂರಪ್ಪ ಪತ್ನಿ ಮೈತ್ರಾದೇವಿ ಸಾವಿನಲ್ಲಿ ಶೋಭಾ ಕರಂದ್ಲಾಜೆ ಪಾತ್ರವಿದೆ. ಬಿಎಸ್ ಯಡಿಯೂರಪ್ಪ ಪಾಪ ಒಳ್ಳೆಯವರು. ಆದರೆ ಮೈತ್ರಾದೇವಿ ಸಾವು ಹೇಗಾಯಿತು?ಮೈತ್ರಾದೇವಿ ಸಾವು ತನಿಖೆಯಾಗಿ ಶೋಭಾ ಕರಂದ್ಲಾಜೆ ಅವರನ್ನು ಬಂಧಿಸಬೇಕು ಈ ಬಗ್ಗೆ ತನಿಖೆ ಆಗಲಿ ಅಂತ ಹೇಳುತ್ತಿದ್ದೇನೆ ಇದನ್ನು ಅವರು ಒಪ್ಪಿಕೊಳ್ಳುತ್ತಾರಾ ಎಂದು ಪ್ರಶ್ನಿಸಿದ್ದಾರೆ.

## ವೋಟರ್ ಐಡಿ ಪ್ರಕರಣ: ಲೋಪ ಎಸಗಿದ ಅಧಿಕಾರಿಗಳ ವಿರುದ್ಧ ದೂರು

• ಉದಯವಾಹಿನಿ, ಬೆಂಗಳೂರು

ಆರ್.ಆರ್.ನಗರ ಶಾಸಕ ಮುನಿರತ್ನ ವಿರುದ್ಧದ ನಕಲಿ ವೋಟರ್ ಐಡಿ ಪ್ರಕರಣದ ತನಿಖೆ ವೇಳೆ ಹೈಕೋರ್ಟ್ ಆದೇಶ ಉಲ್ಲಂಘಿಸಿ ಕರ್ತವ್ಯಲೋಪ ಎಸಗಿದ ತನಿಖಾಧಿಕಾರಿಗಳು ಹಾಗೂ ಅಂದಿನ ಡಿಸಿಪಿ ವಿರುದ್ಧ ಕಠಿಣ ಕ್ರಮಕ್ಕೈಗೊಳ್ಳುವಂತೆ ಮಾಜಿ ವಿಧಾನ ಪರಿಷತ್ ಸದಸ್ಯ ಪಿ.ಎಂ.ಮುನಿರಾಜುಗೌಡ ನಗರ ಪೊಲೀಸ್ ಆಯುಕ್ತ ಬಿ.ದಯಾನಂದಗೆ ದೂರು ನೀಡಿದ್ದಾರೆ. ಶನಿವಾರ ತಮ್ಮ ವಕೀಲರ ಜತೆಗೆ ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಅವರನ್ನು ಭೇಟಿಯಾಗಿ ದೂರು ನೀಡಿದ ಮುನಿರಾಜುಗೌಡ, ದೂರಿನ ಜತೆಗೆ ಕೆಲವು ದಾಖಲೆಗಳನ್ನು ನೀಡಿದರು. ನಕಲಿ ವೋಟರ್ ಐಟಿ ಹಗರಣ ಸಂಬಂಧ ಜಾಲಹಳ್ಳಿ ಪೊಲೀಸ್ ಠಾಣೆಯಲ್ಲಿ 2018ರಲ್ಲಿ 2 ಪ್ರಕರಣಗಳು ದಾಖಲಾಗಿವೆ. ಅಪರಾಧ ಸಂಖ್ಯೆ 55ರ ಪ್ರಕರಣದ ಕಡತ 42ನೇ ಎಸಿಎಂಎಂ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದೆ. ಅದಕ್ಕೆ ಜೋಡಣೆಯಾಗಿರುವ ಅಪರಾಧ ಸಂಖ್ಯೆ 54ರ ಪ್ರಕರಣದ ಕಡತವನ್ನು ಜಾಲಹಳ್ಳಿ ಠಾಣೆ ಇನ್‌ಸ್ಪೆಕ್ಟರ್‌ಗಳು ಮತ್ತು ಪೂರ್ವ ವಿಭಾಗದ ಡಿಸಿಪಿಗಳು ಸೇರಿ ಮುನಿರತ್ನ ಅವರನ್ನು ಬಂಧನದಿಂದ ಪಾರು ಮಾಡಲು ನ್ಯಾಯಾಲಯವನ್ನು ಯಾಮಾರಿಸಿ ಪ್ರಕರಣವನ್ನು ಅಂತ್ಯಗೊಳಿಸಿದ್ದಾರೆ. ಜತೆಗೆ ಆರೋಪಿಗಳನ್ನು ಬಚಾವ್ ಮಾಡಲು ಅಪರಾಧ ಸಂಖ್ಯೆ 54ರ ಪ್ರಕರಣದ ಕಡತವನ್ನು ವಿಚಾರಣಾಧಿಕಾರದ ವ್ಯಾಪ್ತಿಯೇ ಇರದ 8ನೇ ಎಸಿಎಂಎಂ ನ್ಯಾಯಾಲಯದಲ್ಲಿ ಉಳಿಸಿದ್ದಾರೆ ಎಂದು ದೂರಿನಲ್ಲಿ ಆರೋಪಿಸಿದ್ದಾರೆ.



**ರಾಜ್ಯದಲ್ಲಿ ಹಿಂಗಾರು ಚುರುಕುಗೊಂಡಿದೆ. ರಾಜ್ಯದ ಬಹುತೇಕ ಕಡೆ ಮಳೆಯಾಗುತ್ತಿದೆ.ಬೆಂಗಳೂರು ಸೇರಿದಂತೆ ಬಾರಿ ಮಳೆಯಾಗಿದ್ದು , ಮನೆ, ರಸ್ತೆಗಳಿಗೆ ಮಳೆ ನೀರು ನುಗ್ಗಿದೆ. ಇದರಿಂದ ಜನಜೀವನ ಅಸ್ತವ್ಯಸ್ತವಾಗಿದೆ.**

# ರಣ ರಣ ವರುಣ ಜನ ಹೈರಾಣ

● ರಾಜ್ಯದಲ್ಲಿ ವರುಣನ ಅಬ್ಬರ ● ಮುಂದುವರೆದ ವರುಣನ ಆರ್ಭಟ
● ಇನ್ನೂ 3 ದಿನ ಮಳೆ ಸಾಧ್ಯತೆ ● ಬೆಂಗಳೂರಿನಲ್ಲಿ ಜೋರಾದ ವರುಣಾರ್ಭಟ

• ಉದಯವಾಹಿನಿ, ಬೆಂಗಳೂರು

ಮಳೆಯ ಅಬ್ಬರಕ್ಕೆ ಶಿವಮೊಗ್ಗದ 18ನೇ ವಾರ್ಡ್ ಏಳನೇ ಕ್ರಾಸ್ ಚಾನಲ್ ಏರಿಯಾದಲ್ಲಿ ಪರ್ವಿನ್ ತಾಜ್ ಎಂಬವರಿಗೆ ಸೇರಿದ ಮನೆ ಕುಸಿದಿದೆ. ರಾತ್ರಿ ಸುರಿದ ಮಳೆಯಿಂದಾಗಿ ಮನೆ ಗೋಡೆಗಳು ಕುಸಿದು ಬಿದ್ದಿದೆ. ಯಾವುದೇ ಜೀವ ಹಾನಿ ಸಂಭವಿಸಿಲ್ಲ.

ಕಳೆದೆರಡು ದಿನಗಳಿಂದ ಬೆಂಗಳೂರು ನಗರದಲ್ಲಿ ಬಿಡುವು ಕೊಟ್ಟಿದ್ದ ಮಳೆರಾಯ ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಮಳೆ ಸುರಿದಿದೆ. ತುಂತುರು ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತವಾಗಿದ್ದು, ಜನರು ಪರದಾಡುವಂತಾಗಿದೆ. ಹಲವು ಜಿಲ್ಲೆಗಳಲ್ಲಿ ಅಪಾರ ಪ್ರಮಾಣದಲ್ಲಿ ಬೆಳೆ ನಷ್ಟವಾಗಿದ್ದು, ರೈತರು ಕಂಗಾಲಾಗಿದ್ದಾರೆ.

ಮಳೆಯ ಸಿಂಚನವಾಗಿದ್ದು, ಬಹುತೇಕ ಭಾಗಗಳಲ್ಲಿ ಮಳೆ ಸುರಿದಿದ್ದರಿಂದ ಅವಾಂತರ ಸೃಷ್ಟಿಯಾಗಿದೆ. ಸುರಿದ ಮಳೆಯಿಂದಾಗಿ ಕುಮಾರಸ್ವಾಮಿ ಲೇಔಟ್ ರಸ್ತೆ ಜಲಾವೃತಗೊಂಡಿದೆ. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ಜನರು ಪರದಾಡುವಂತಾಗಿದೆ.

ವರ್ಷಧಾರೆಯಿಂದಾಗಿ ಎಲೆಕ್ಟ್ರಾನಿಕ್ ಸಿಟಿ, ಸಿಲ್ಕ್‌ಬೋರ್ಡ್ ರಸ್ತೆ ಜಲಾವೃತಗೊಂಡಿದ್ದು, ವಾಹನ ಸವಾರರು ನೀರಿನಲ್ಲೇ ಸಂಚರಿಸಲು ಹರಸಾಹಸ ಪಡಬೇಕಾಯಿತು. ಇದರ ಜತೆಗೆ ಟ್ರಾಫಿಕ್‌ಜಾಮ್‌ನಿಂದಾಗಿ ವಾಹನ ಸವಾರರು ಹೈರಾಣರಾಗಿದ್ದಾರೆ. ಸರ್ಜಾಪುರದಲ್ಲಿ ಸುರಿದ ಮಳೆಯಿಂದಾಗಿ ಪರಪ್ಪನ ಅಗ್ರಹಾರ ಮತ್ತು ಸರ್ಜಾಪುರ ಸಂಪರ್ಕ ಕಲ್ಪಿಸುವ ರಸ್ತೆ ಜಲಾವೃತಗೊಂಡಿದೆ.

ನಾಗನಾಥಪುರ ಬಳಿಯ ರಸ್ತೆಯಲ್ಲಿ ನೀರು ತುಂಬಿಕೊಂಡಿದೆ. ಇದರಿಂದಾಗಿ ಜನರು ಭವಣೆಗೆ ಸಿಲುಕಿದ್ದಾರೆ. ಪ್ರತಿಬಾರಿ ಮಳೆ ಬಂದಾಗಲೂ ಇದೇ ಪರಿಸ್ಥಿತಿ ನಿರ್ಮಾಣವಾಗುತ್ತದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಗರದ ಸಾಯಿ ಲೇಔಟ್ ಧಾರಾಕಾರ ಮಳೆಗೆ ಜಲಾವೃತಗೊಂಡಿದೆ. ಪ್ರತಿ ಬಾರಿ ಮಳೆ ಬಂದಾಗಲ್ಲೆಲ್ಲ ಇದೇ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಆದರೆ, ಪಾಲಿಕೆ ಮಳೆ ಅವಾಂತರಗಳಿಗೆ ಶಾಶ್ವತ ಪರಿಹಾರ ಕಂಡುಕೊಂಡಿಲ್ಲ ಎಂದು ಈ ಬಡಾವಣೆಯ ನಾಗರಿಕರು ಪಾಲಿಕೆಗೆ ಹಿಡಿಶಾಪ ಹಾಕುತ್ತಿದ್ದಾರೆ.

500 ಮನೆಗಳಿರುವ ಸಾಯಿ ಬಡಾವಣೆಯಲ್ಲಿ ಮಳೆ ಬಂದರೆ ಸರಾಗವಾಗಿ ನೀರು ಹರಿಯಲು ಸೂಕ್ತ ವ್ಯವಸ್ಥೆಯಿಲ್ಲ. ಹೀಗಾಗಿ ರಸ್ತೆಗಳಲ್ಲಿ ಚರಂಡಿ ನೀರು ನಿಂತಿದೆ. ಮೊನ್ನೆ ಮಳೆ ಬಂದಾಗಲು ಇದೇ ಪರಿಸ್ಥಿತಿ ನಿರ್ಮಾಣವಾಗಿತ್ತು. ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ನೀರು ಹೊರ ಹಾಕಿತು. ಮನೆಗಳಿಗೆ ನೀರು ನುಗ್ಗಿ ಕುರ್ಚಿ, ಮೇಜು ಇನ್ನಿತರ ವಸ್ತುಗಳು ಹಾಳಾಗಿವೆ. ರಾತ್ರಿ ಸುರಿದ ಮಳೆಗೆ ಕಾರು ಶೋ ರೂಂಗೂ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದೆ.

ಮೈಸೂರು ರಸ್ತೆಯ ಜಯರಾಮ ವೃತ್ತದ ಬಳಿ ಕಾರು ಶೋ ರೂಂಗೆ ನೀರು ನುಗ್ಗಿದೆ. ರಸ್ತೆ ತುಂಬೆಲ್ಲ ನೀರು ನಿಂತಿದ್ದು, ಕಾರುಗಳು ನೀರಿನಲ್ಲಿ ಮುಳುಗಿವೆ.

ಕೆಂಗೇರಿ, ಆರ್‌ಆರ್ ನಗರ ಸುತ್ತಮುತ್ತ ಧಾರಾಕಾರ ಮಳೆಯಾಗಿದ್ದು, ಜನಜೀವನ ಏರುಪೇರಾಗಿದೆ. ಉತ್ತರಳ್ಳಿಯಲ್ಲೂ ವರುಣನ ಅಬ್ಬರ ಮುಂದುವರೆದಿದ್ದು, ಮನೆಗಳಿಗೆ ನೀರು ನುಗ್ಗಿ ರಸ್ತೆಗಳು ಕೆರೆಯಂತಾಗಿವೆ. ನಾಗರಿಕರು ಸಂಚರಿಸಲು ಪರದಾಡುವಂತಾಗಿದ್ದು, ನಾಗರಿಕರು ಆಕ್ರೋಶ ಹೊರ ಹಾಕಿದ್ದಾರೆ. ಇನ್ನೊಂದೆಡೆ ಸಿಲ್ಕ್‌ಬೋರ್ಡ್ ಜಂಕ್ಷನ್ ಜಲಾವೃತಗೊಂಡಿದ್ದು, ವಾಹನ ಸಂಚಾರಕ್ಕೆ ಅಡ್ಡಿಯುಂಟಾಗಿದೆ.

1 ಕರ್ನಾಟಕದ ನಾನಾ ಜಿಲ್ಲೆಗಳಲ್ಲಿ ಭಾರೀ ಮಳೆ
2 ಹಲವಾರು ಜಿಲ್ಲೆಗಳಲ್ಲಿ ಹಿಂಗಾರು ಮಳೆಯ ಆರ್ಭಟ
3 ದಕ್ಷಿಣ ಒಳನಾಡಿನಲ್ಲಿ ಹಾಗೂ ಉತ್ತರ ಒಳನಾಡಿನಲ್ಲಿ ಹೆಚ್ಚು ಮಳೆ







**ಶಿವಮೊಗ್ಗದಲ್ಲೂ ಭಾರೀ ಮಳೆ**

ಶಿವಮೊಗ್ಗ ನಗರದಲ್ಲಿ ವರ್ಷಧಾರೆ ಮುಂದುವರೆದಿದ್ದು, ಜನ ವಸತಿ ಪ್ರದೇಶಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದೆ. ಶನಿವಾರ ರಾತ್ರಿಯಿಂದ ಬೀಳುತ್ತಿರುವ ಭಾರೀ ಮಳೆ, ಭಾನುವಾರ ಬೆಳಿಗ್ಗೆಯು ಮುಂದುವರಿದಿದೆ. ಇದರಿಂದ ನಗರದ ಸಾಕಷ್ಟು ಜನವಸತಿ ಪ್ರದೇಶಗಳಲ್ಲಿ ಜಲಾವೃತ ಸಮಸ್ಯೆ ಸೃಷ್ಟಿಯಾಗಿದೆ. ಜನಜೀವನ ಅಸ್ತವ್ಯಸ್ತವಾಗಿದೆ!ಹಲವೆಡೆ ಚರಂಡಿ, ರಾಜಕಾಲುವೆಗಳ ನೀರು ಉಕ್ಕಿ ಹರಿದು ರಸ್ತೆ ಹಾಗೂ ಮನೆಗಳಿಗೆ ನುಗ್ಗಿದೆ. ಎಲ್ಲೆಲ್ಲೂ ಜಲಾವೃತ ಸಮಸ್ಯೆ ಕಂಡುಬರಲಾರಂಭಿಸಿದೆ. ತಮ್ಮ ಪ್ರದೇಶಗಳಲ್ಲಿನ ಜಲಾವೃತ ಸಮಸ್ಯೆಗಳ ಫೋಟೊ, ವೀಡಿಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ನಾಗರೀಕರು ಅಪ್'ಲೋಡ್ ಮಾಡುವ ಮೂಲಕ ಸಂಕಷ್ಟವನ್ನು ಆಡಳಿತದ ಗಮನ ಸೆಳೆಯುವ ಕೆಲಸ ಮಾಡಿದ್ದಾರೆ. 'ಭಾರೀ ಮಳೆಯಾದ ವೇಳೆ ಕೆಲ ಪ್ರದೇಶಗಳು ಮಾತ್ರ ಜಲಾವೃತವಾಗುತ್ತಿದ್ದವು. ತುಂಗಾ ನದಿ ಉಕ್ಕಿ ಹರಿದ ವೇಳೆ, ಹಲವೆಡೆ ಪ್ರವಾಹ ಸ್ಥಿತಿ ಎದುರಾಗುತ್ತಿತ್ತು. ಆದರೆ ಕಳೆದ ಕೆಲ ವರ್ಷಗಳಿಂದ ಪ್ರತಿಷ್ಠಿತ ಬಡಾವಣೆಗಳು ಜಲಾವೃತವಾಗುತ್ತಿವೆ.

**ಎಚ್ಚೆತ್ತುಕೊಳ್ಳಲಿ**

ಶಿವಮೊಗ್ಗ ಜಿಲ್ಲಾಡಳಿತ, ಮಹಾನಗರ ಪಾಲಿಕೆ ಆಡಳಿತ ಎಚ್ಚೆತ್ತುಕೊಳ್ಳಬೇಕಾಗಿದೆ. ನಗರದಲ್ಲಿ ಕೆರೆಗಳ ಸಂರಕ್ಷಣೆಗೆ ಒತ್ತು ನೀಡಬೇಕಾಗಿದೆ. ರಾಜಕಾಲುವೆ, ಚರಂಡಿಗಳ ಒತ್ತುವರಿ ತೆರವುಗೊಳಿಸಬೇಕಾಗಿದೆ. ಜಲಾವೃತವಾಗುವ ಪ್ರದೇಶಗಳನ್ನು ಗುರುತಿಸಿ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ ಎಂದು ನಾಗರೀಕರು ಆಗ್ರಹಿಸುತ್ತಾರೆ.

**ವಿಮಾನ ಹಾರಾಟ ವ್ಯತ್ಯಯ**

ದೇವನಹಳ್ಳಿ ಸುತ್ತಮುತ್ತ ವರುಣನ ಆರ್ಭಟ ಜೋರಾಗಿದೆ. ಇದರಿಂದಾಗಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅರ್ಧ ತಾಸಿಗೂ ಹೆಚ್ಚು ಕಾಲ 30ಕ್ಕೂ ಹೆಚ್ಚು ವಿಮಾನಗಳ ಹಾರಾಟದಲ್ಲಿ ವ್ಯತ್ಯಯ ಉಂಟಾಯಿತು. ದೆಹಲಿ, ಕೊಲ್ಕತ್ತ, ಮುಂಬೈ ಸೇರಿದಂತೆ ದೇಶದ ವಿವಿಧ ಭಾಗಗಳಿಗೆ ತೆರಳಬೇಕಾಗಿದ್ದ ವಿಮಾನಗಳು ವಿಳಂಬವಾಯಿತು. ಮಳೆಯಿಂದಾಗಿ ಟೇಕಾಫ್ ಮತ್ತು ಲ್ಯಾಂಡಿಂಗ್‌ನಲ್ಲಿ ವ್ಯತ್ಯಯವಾಗಿದೆ. ತಾಂತ್ರಿಕ ಕಾರಣದಿಂದಾಗಿ ವಾರಣಸಿ-ಬೆಂಗಳೂರು ನಡುವಿನ ವಿಮಾನ ಹಾರಾಟ ರದ್ದುಗೊಂಡಿದೆ.

# ಅಧಿಕಾರ ಕಳೆದುಕೊಳ್ಳುವ ಭಯದಿಂದ ಸಿಎಂ ಜಾತಿ ಗಣತಿ ವರದಿ ಬಿಡುಗಡೆ ಪ್ರಸ್ತಾಪ

■ ಇದು ಜಾತಿ ಗಣತಿಯಲ್ಲ ■ ರಾಜ್ಯ ಸರ್ಕಾರಕ್ಕೆ ಜಾತಿ ಗಣತಿ ಮಾಡುವ ಅಧಿಕಾರ ಇಲ್ಲ ■ ಕೇಂದ್ರ ಸರ್ಕಾರಕ್ಕೆ ಮಾತ್ರ ಜಾತಿ ಗಣತಿ ಮಾಡುವ ಅಧಿಕಾರವಿದೆ.


• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರ ಕಳೆದುಕೊಳ್ಳುವ ಭಯದಿಂದ ಜಾತಿ ಗಣತಿ ಬಿಡುಗಡೆ ಮಾಡುವುದಾಗಿ ಹೇಳುತ್ತಿದ್ದಾರೆ. ಮೊದಲು ಅದನ್ನು ಬಹಿರಂಗ ಪಡಿಸಲಿ, ಸಾರ್ವಜನಿಕ ಚರ್ಚೆಯಾಗಲಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯ ಪಟ್ಟಿದ್ದಾರೆ.

ಭಾನುವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಜಾತಿ ಜನಗಣತಿ ಕುರಿತು ಅಖಿಲ ಭಾರತ ವೀರಶೈವ ಮಹಾಸಭೆ ರಾಷ್ಟ್ರೀಯ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ತಮ್ಮನ್ನು ಭೇಟಿ ಮಾಡಿರುವ ಕುರಿತು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಜಾತಿ ಗಣತಿ ವಿಚಾರದಲ್ಲಿ ನಮ್ಮ ನಿಲುವು ಸ್ಪಷ್ಟವಾಗಿದೆ. ಇದು ಜಾತಿ ಗಣತಿಯಲ್ಲ. ಸಾಮಾಜಿಕ ಆರ್ಥಿಕ ಸಮೀಕ್ಷೆ, ರಾಜ್ಯ ಸರ್ಕಾರಕ್ಕೆ ಜಾತಿ ಗಣತಿ ಮಾಡುವ ಅಧಿಕಾರ ಇಲ್ಲ. ಕೇಂದ್ರ ಸರ್ಕಾರಕ್ಕೆ ಮಾತ್ರ ಜಾತಿ ಗಣತಿ ಮಾಡುವ ಅಧಿಕಾರವಿದೆ. ಬಿಹಾರ ಸರ್ಕಾರದ ಜಾತಿ ಗಣತಿಗೂ ಸುಪ್ರೀಂ ಕೋರ್ಟ್ ತಡೆ ನೀಡಿದೆ. ಇವರು ಯಾವುದೋ ಸಮೀಕ್ಷೆ ಮಾಡಿ ಅದಕ್ಕೆ ಜಾತಿ ಗಣತಿಯ ಲೇಪನ ಮಾಡುತ್ತಿದ್ದಾರೆ ಎಂದು ಹೇಳಿದರು.

ಇನ್ನು ಈ ವರದಿ ವೈಜ್ಞಾನಿಕವಾಗಿಯೂ ಇಲ್ಲ, ಅಂಕಿ ಅಂಶ ಸಮರ್ಪಕವಾಗಿಲ್ಲ. ಹಲವು ಸಮುದಾಯಗಳಿಂದ ಆಕ್ಷೇಪಣೆ ಬಂದಿದೆ. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದ ಕಾಂತರಾಜ್ ಅವರು ಸಿದ್ದಪಡಿಸಿದ್ದ ವರದಿ ಸಮರ್ಪಕವಾಗಿಲ್ಲ ಎಂದು ಅಂದಿನ ಆಯೋಗದ ಕಾರ್ಯದರ್ಶಿ ಹಾಗೂ ಸದಸ್ಯರು ಸಹಿ ಹಾಕಿರಲಿಲ್ಲ. ನಂತರ ಬಂದ ಆಯೋಗದ ಅಧ್ಯಕ್ಷರಾದ ಜಯಪ್ರಕಾಶ್ ಹೆಗಡೆ ಅವರು, ಯಾವುದೇ ಸಮೀಕ್ಷೆ ನಡೆಸದೇ ಹಿಂದಿನ ಆಯೋಗದ ಅಧ್ಯಕ್ಷರು ಸಿದ್ದಪಡಿಸಿದ್ದ ವರದಿಯನ್ನೇ ಪರಿಷ್ಕರಿಸಿ ಸರ್ಕಾರಕ್ಕೆ ಸಲ್ಲಿಕೆ ಮಾಡಿದ್ದಾರೆ. ಈ ವರದಿಯನ್ನು ಒಕ್ಕಲಿಗ ಸಮುದಾಯದವರು ವಿರೋಧಿಸಿದ್ದಾರೆ. ಸ್ವತ ಡಿಸಿಎಂ ಡಿಕೆ ಶಿವಕುಮಾರ್ ಸೇರಿದಂತೆ ಅನೇಕ ಕಾಂಗ್ರೇಸ್ ಮುಖಂಡರು ಇದನ್ನು ವಿರೋಧಿಸಿದ್ದಾರೆ. ಅಖಿಲ ಭಾರತ ವೀರಶೈವ ಮಹಾಸಭೆ ಕೂಡ ವಿರೋಧಿಸಿದೆ. ಎಲ್ಲಾ ಸಮುದಾಯಗಳ ಅನುಮಾನ ದೂರ ಮಾಡುವ ಕೆಲಸ ಸಿಎಂ ಸಿದ್ದರಾಮಯ್ಯ ಮಾಡುತ್ತಿಲ್ಲ. ಎಲ್ಲಾರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಚರ್ಚಿಸಲಿ. ಇಷ್ಟೆಲ್ಲ ವಿರೋಧ ಇದ್ದರೂ ಜಾರಿ ಮಾಡುತ್ತೇವೆ ಅಂತಿದ್ದಾರೆ. ಮೊದಲು ವರದಿ ಬಹಿರಂಗಪಡಿಸಲಿ, ಸಾರ್ವಜನಿಕವಾಗಿ ಚರ್ಚೆ ಆಗಲಿ. ಸಿದ್ದರಾಮಯ್ಯನವರು ವರದಿಯಲ್ಲಿ ಏನಿದೆ ಅಂತ ನೋಡಿಲ್ಲ ಅಂತಿದ್ದಾರೆ, ಆದರೆ ವರದಿ ರೆಡಿ ಮಾಡಿಸಿದವರೇ ಸಿದ್ದರಾಮಯ್ಯ. ದಿವಂಗತ ವಿ.ಪಿ. ಸಿಂಗ್ ಅವರು ಪ್ರಧಾನಿಯಾಗಿದ್ದಾಗ ಅಧಿಕಾರ ಹೋಗುವ ಸಂದರ್ಭದಲ್ಲಿ ಮಂಡಲ್ ವರದಿ ಜಾರಿ ಮಾಡಿದ್ದರು. ಅದೇ ರೀತಿ ಇವರು ಈಗ ಜಾತಿ ಗಣತಿ ಜಾರಿ ಮಾಡುವುದಾಗಿ ಹೇಳುತ್ತಿದ್ದಾರೆ ಎಂದು ಹೇಳಿದರು.

ಪರಿಶಿಷ್ಟ ಜಾತಿ, ಪಂಗಡಗಳ ಮೀಸಲು ಪ್ರಮಾಣ ಹೆಚ್ಚಳ, ಎಸ್ ಸಿ ಮೀಸಲು ವರ್ಗೀಕರಣ, ಪಂಚಮಸಾಲಿ ಸಮುದಾಯದವರಿಗೆ ಪ್ರವರ್ಗ 2ಡಿಗೆ ಸೇರ್ಪಡೆ, ಮುಸ್ಲಿಮರಿಗೆ ಪ್ರತ್ಯೇಕ ಮೀಸಲು ರದ್ದು ಸೇರಿ ಎಲ್ಲಾವನ್ನು ನನ್ನ ಅವಧಿಯಲ್ಲಿ ಸಂವಿಧಾನಬದ್ಧವಾಗಿ ತೀರ್ಮಾನ ಮಾಡಲಾಗಿತ್ತು. ಬಿಜೆಪಿ ಸರ್ಕಾರ ಕೈಗೊಂಡ ಈ ನಿರ್ಧಾರಗಳನ್ನು ಪ್ರಶ್ನಿಸಿ ಕಾಂಗ್ರೇಸ್‌ನ ಕೆಲವರು ಸುಪ್ರೀಂ ಕೋರ್ಟ್‌ಗೆ ಮೊರೆ ಹೋದರು.



> ವಿಧಾನಸಭೆ ಚುನಾವಣೆ ಹತ್ತಿರವಾಗಿದ್ದರಿಂದ ಮುಂದಿನ ವಿಚಾರಣೆವರೆಗೆ ಜಾರಿಗೊಳಿಸುವುದಿಲ್ಲ ಎಂದು ರಾಜ್ಯ ಸರ್ಕಾರ ತಿಳಿಸಿದ್ದನ್ನು ಸುಪ್ರೀಂ ಕೋರ್ಟ್ ಒಪ್ಪಿದೆಯೇ ಹೊರತು ತಡೆಯಾಜ್ಞೆ ನೀಡಿಲ್ಲ. ಎಸ್ ಸಿ, ಎಸ್ ಟಿ ಮೀಸಲು ಹೆಚ್ಚಳ, ಎಸ್ ಸಿ ಒಳಮೀಸಲು, ಪಂಚಮಸಾಲಿ ಸಮುದಾಯಕ್ಕೆ ಪ್ರತ್ಯೇಕ ಮೀಸಲು ಕೊಡುವ ಬಗ್ಗೆ ಕಾಂಗ್ರೇಸ್ ಸರ್ಕಾರಕ್ಕೆ ನೈಜ ಕಾಳಜಿಯಿದ್ದರೆ ಈ ನಿಟ್ಟಿನಲ್ಲಿ ಮುಂದುವರಿಯಬೇಕು. ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ ಎಂಬ ತಪ್ಪು ಮಾಹಿತಿ ನೀಡಿ ವಿವಿಧ ಸಮುದಾಯಗಳಿಗೆ ದಾರಿ ತಪ್ಪಿಸುವ ಕೆಲಸ ಮಾಡಬಾರದು.
>
> -ಬೊಮ್ಮಾಯಿ, ಸಂಸದ

### ಕಾಂಗ್ರೇಸ್‌ನವರು ಸೇಡಿನ ರಾಜಕೀಯ ಮಾಡುತ್ತಿದ್ದಾರೆ

ಇನ್ನು ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ ಅವರ ಸಹೋದರ ಗೋಪಾಲ್ ಜೋಷಿ ಬಂಧನವಾಗಿರುವ ಹಿನ್ನೆಲೆಯಲ್ಲಿ ಪ್ರತಿಪಕ್ಷದವರು ಪ್ರಲ್ಹಾದ್ ಜೋಷಿಯವರ ರಾಜೀನಾಮೆ ಕೇಳುತ್ತಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಪ್ರಹ್ಲಾದ್ ಜೋಷಿಯವರು ಅವರ ಸೋದರನ ಜತೆ ಯಾವುದೇ ವ್ಯವಹಾರಿಕ ಹಾಗೂ ಕೌಟಂಬಿಕ ಸಂಬಂಧ ಇಟ್ಟುಕೊಂಡಿಲ್ಲ ನನಗೆ ಅವರ ಕುಟುಂಬದ ಬಗ್ಗೆ ಚೆನ್ನಾಗಿ ಗೊತ್ತಿದೆ. ಕಾಂಗ್ರೇಸ್‌ನವರು ಸೇಡಿನ ರಾಜಕೀಯ ಮಾಡುತ್ತಿದ್ದಾರೆ. ಅವರ ವಿರುದ್ಧ ಯಾರು ಮಾತನಾಡುತ್ತಾರೆ ಅವರ ವಿರುದ್ಧ ಸೇಡಿಗಾಗಿ ಕಾಂಗ್ರೇಸ್ ನವರು ಎಫ್‌ಐಆರ್ ಹಾಕಿಸುತ್ತಿದ್ದಾರೆ ಎಂದು ಹೇಳಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,942/Gram24ct ₹7,280/Gram22ct ಬೆಳ್ಳಿ: ₹99.50/Gram



## ಸಿದ್ದಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಅಧ್ಯಾಪನಮಧ್ಯಯನಂ ಯಜನಂ ಯಾಜನಂ ತಥಾ

ದಾನಂ ಪ್ರತಿಗ್ರಹಂ ಚೈವ ಬ್ರಾಹ್ಮಣಾನಾಮಕಲ್ಪಯತ್. ಮನುಸ್ಮೃತಿಯ ಪ್ರಥಮಾಧ್ಯಾಯದ ಎಂಭತ್ತೆಂಟನೆಯ ಶ್ಲೋಕ. ಬ್ರಾಹ್ಮಣನ ಕರ್ತವ್ಯ ವಿವರಣೆ. ವಿದ್ಯಾಸಂಪಾದನೆ ಪಾಠ ಪ್ರವಚನ ಯಜ್ಞ ಮಾಡುವುದು ಹಾಗೂ ಮಾಡಿಸುವುದು ದಾನ ಧರ್ಮಗಳನ್ನು ಮಾಡುವುದು ಮತ್ತು ದಾನಧರ್ಮಗಳನ್ನು ಪಡೆಯುವುದು ಇವು ಬ್ರಾಹ್ಮಣನ ಕರ್ತವ್ಯ ಎಂದು ಬ್ರಹ್ಮ ವ್ಯವಸ್ಥೆ ಮಾಡಿದನು. ಇವುಗಳ ಪೈಕಿ ಓದುವುದು ಯಜ್ಞ ಮಾಡುವುದು ಹಾಗೂ ದಾನ ಮಾಡುವುದು ಧರ್ಮ = ಶ್ರೇಷ್ಠ ಕರ್ತವ್ಯಗಳು. ಓದಿಸುವುದು ಯಜ್ಞ ಮಾಡಿಸುವುದು ಮತ್ತು ದಾನ ತೆಗೆದುಕೊಳ್ಳುವುದು ಬದುಕಿಗಾಗಿ ಮಾಡುವ ಕರ್ತವ್ಯಗಳಾಗಿವೆ. ಆದರೆ ಈ ಪೈಕಿ ದಾನ ತೆಗೆದುಕೊಳ್ಳುವುದು ನೀಚ ಕರ್ತವ್ಯ, ಓದಿಸಿ ಯಜ್ಞವನ್ನು ಮಾಡಿಸಿ ಜೀವನ ನಡೆಸುವುದು ಶ್ರೇಷ್ಠ ಕರ್ತವ್ಯ ಎಂದು ಹೇಳಲಾಗಿದೆ.

# ಪ್ರವಾಹ ಬಗ್ಗೆ ಉಡಾಫೆ ಮಾತು ಬಿಟ್ಟು ಕ್ರಮ ಕೈಗೊಳ್ಳಿ

## ವಿಪಕ್ಷಗಳ ಟೀಕೆ, ಶಾಸಕರೇ ಅನುದಾನ ಬಂದಿಲ್ಲ ಎಂದು ಬೇಸರ: ಆರ್.ಅಶೋಕ್ ಟ್ವೀಟ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಎನ್. ಚಲುವರಾಯ ಸ್ವಾಮಿಗೆ ತಿರುಗೇಟು**

ಒಂದೆಡೆ ಕಾಂಗ್ರೆಸ್ ಸರ್ಕಾರ ಬಂದರೆ ಮಳೆ ಆಗಲ್ಲ ಎಂಬುದನ್ನು ವಿಪಕ್ಷಗಳು ನೆನಪಿಸುತ್ತವೆ. ಇದೀಗ ಅತೀ ಮಳೆಯಿಂದ ಉತ್ತರ ಕರ್ನಾಟಕದಲ್ಲಿ ರೈತರು ಬೆಳೆ ಹಾನಿ, ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಇದನ್ನು ವಿಪಕ್ಷಗಳ ಟೀಕೆ ಮಾಡಿದ ಮೇಲಾದರೂ ಎಚ್ಚೆತ್ತುಕೊಳ್ಳಬೇಕಿದೆ. ಮತ್ತೊಂದೆಡೆ ಶಾಸಕರೇ ಅನುದಾನ ಬಂದಿಲ್ಲ ಎಂದು ಬೇಸರ ವ್ಯಕ್ತಪಡಿಸುತ್ತಿದ್ದಾರೆ. ಈ ಕುರಿತು ಟ್ವೀಟ್ ಮೂಲಕ ಆರ್.ಅಶೋಕ್ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಹೌದು, ಭಾನುವಾರ ಟ್ವೀಟ್ ಮಾಡಿರುವ ವಿಪಕ್ಷ ನಾಯಕ ಆರ್.ಅಶೋಕ ಅವರು, ಕೃಷಿ ಸಚಿವ ಎನ್. ಚಲುವರಾಯ ಸ್ವಾಮಿ ಅವರಿಗೆ ತಿರುಗೇಟು ನೀಡಿದ್ದಾರೆ. ವಿಪಕ್ಷಗಳ ಟೀಕೆ ಮಾಡಿದ ಮೇಲಾದರೂ ಎಚ್ಚೆತ್ತುಕೊಳ್ಳಂಡು ಕಾರ್ಯೋನ್ಮುಖವಾಗುವ ಬದಲು ವಿಪಕ್ಷಗಳ ಮೇಲೆಯೇ ಹರಿಹಾಯುವುದೂ ಯಾವ ಸೀಮೆ ನ್ಯಾಯ ಸ್ವಾಮಿ ಎಂದು ಅವರು ಗುಡುಗಿದ್ದಾರೆ.

ಸರ್ಕಾರದ ತಪ್ಪುಗಳನ್ನು, ಆಡಳಿತದಲ್ಲಿರುವ ನ್ಯೂನ್ಯತೆಗಳನ್ನು ಎತ್ತಿ ತೋರಿಸಿ, ಜನರ ದನಿಯನ್ನು ಸರ್ಕಾರಕ್ಕೆ ತಲುಪಿಸುವುದೇ ವಿರೋಧ ಪಕ್ಷದ ಕೆಲಸ. ವಿರೋಧ ಪಕ್ಷದ ನಾಯಕನಾಗಿ ನಾನು ನನ್ನ ಕರ್ತವ್ಯ ನಿರ್ವಹಿಸುತ್ತಿದ್ದೇನೆ. ಅದನ್ನು ಸಕಾರಾತ್ಮಕವಾಗಿ ತೆಗೆದುಕೊಳ್ಳದೇ ನಮ್ಮ ಮೇಲೆ ಸರ್ಕಾರ ಕಿಡಿ ಕಾರುತ್ತಿರುತ್ತಿರುವುದು ಸರಿಯಲ್ಲ ಎಂದರು.

ನಿಮ್ಮ ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ಧೋರಣೆ ಬಗ್ಗೆ ವಿರೋಧ ಪಕ್ಷಗಳು ಟೀಕೆ ಮಾಡುವುದಿರಲಿ. ಸ್ವತಃ ಕಾಂಗ್ರೆಸ್ ಶಾಸಕರೇ ಅನೇಕ ಸಂದರ್ಭಗಳಲ್ಲಿ ಸರ್ಕಾರದ ಬಗ್ಗೆ ಬೇಸರ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರ ರೈತರ ಪರ ಯಾವುದೇ ವಿಶೇಷ ಕಾರ್ಯಗಳನ್ನು ಕೈಗೊಳ್ಳುತ್ತಿಲ್ಲ. ಸರಕಾರದ ಧೋರಣೆ ನೋಡಿದರೆ ನನ್ನ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು ಎನಿಸುವಷ್ಟು ಬೇಸರವಾಗಿದೆ'' ಎಂದು ಕಾಗವಾಡದ ಕಾಂಗ್ರೆಸ್ ಶಾಸಕ ರಾಜು ಕಾಗೆ ತಿಳಿಸಿದ್ದರು. ನಿಮ್ಮ ಸರ್ಕಾರದ ರೈತ ವಿರೋಧಿ ನೀತಿಗಳನ್ನು ಹಾಗೂ ಲೋಡ್ ಶೆಡ್ಡಿಂಗ್ ಕಣ್ಣಾಮುಚ್ಚಾಲೆಯನ್ನು ಸಹ ನಿಮ್ಮದೇ ಪಕ್ಷದ ಶಾಸಕ ಕಾಗವಾಡದ ರಾಜು ಕಾಗೆಯವರು ಈ ಹಿಂದೆ ಎಳೆ ಎಳೆಯಾಗಿ ಬಿಚ್ಚಿಟ್ಟಿದ್ದಾರೆ.

ಶಾಸಕರಿಗೆ ಕನಿಷ್ಠ ಅನುದಾನ ಸಹ ಸರ್ಕಾರದಿಂದ ಲಭಿಸುತ್ತಿಲ್ಲ, ಕಾಂಗ್ರೆಸ್ ಸರ್ಕಾರ ಗ್ರಾಮೀಣ ಭಾಗದಲ್ಲಿ ವಿದ್ಯುತ್ ನೀಡಿದ್ದಕ್ಕಿಂತ ತೆಗೆದದ್ದೇ ಹೆಚ್ಚು ಎಂಬುದನ್ನು ಸಹ ಒಪ್ಪಿಕೊಂಡಿದ್ದಾರೆ ಎಂದು ತಿರುಗೇಟು ಕೊಟ್ಟರು. ಧಾರವಾಡ ಜಿಲ್ಲೆಯ ನವಲಗುಂದದ ಶಾಸಕರಾದ ಎನ್.ಎಚ್.ಕೋನರೆಡ್ಡಿ ಅವರು ತಮ್ಮ ಕ್ಷೇತ್ರದಲ್ಲಿ ಬಹುತೇಕ ರೈತರಿಗೆ ಮುಂಗಾರು ಬರ ಪರಿಹಾರವೇ ವಿತರಣೆ ಆಗಿಲ್ಲ ಎಂದು ಅಳಲು ತೋಡಿಕೊಂಡಿದ್ದನ್ನು ಉಲ್ಲೇಖಿಸಿ ಸರ್ಕಾರ ನಡೆ ಮೇಲೆ ಕಿಡಿ ಕಾರಿದ್ದಾರೆ.

ಈ ಹಿಂದೆ ಅನೇಕ ಮುತ್ಸದ್ದಿಗಳು, ಹಿರಿಯರು ನಿರ್ವಹಿಸಿದ ಕೃಷಿ ಇಲಾಖೆ ಸಚಿವ ಸ್ಥಾನದಲ್ಲಿ ನೀವಿದ್ದೀರಿ. ಇಲಾಖೆಯ ಗಂಭೀರತೆ ಅರಿತು ಸ್ವಲ್ಪ ಜವಾಬ್ದಾರಿಯಿಂದ ನಡೆದುಕೊಳ್ಳಿ ಎಂದು ಅವರು ಸಲಹೆ ನೀಡಿದರು.

> **ಉತ್ತರ ಕರ್ನಾಟಕದಲ್ಲಿ ಅಕಾಲಿಕ ಮಳೆಯಿಂದ ಆಗಿರುವ ಬೆಳೆ ಹಾನಿ ಬಗ್ಗೆ ತಮ್ಮ ಸರ್ಕಾರಕ್ಕೆ ಅರಿವಿದೆ. ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂಬ ಉಡಾಫೆ ಮಾತುಗಳು, ಹಾರಿಕೆ ಉತ್ತರಗಳು ರೈತರ ಸಮಸ್ಯೆ ಬಗೆಹರಿಸುವುದಿಲ್ಲ. ಕೃಷಿ ಸಚಿವರಾಗಿ ತಾವು ಎಷ್ಟು ಜಿಲ್ಲೆಗಳಿಗೆ ಭೇಟಿ ನೀಡಿದ್ದೀರಿ? ಯಾವ್ಯಾವ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಜೊತೆ ವಿಡಿಯೋ ಕಾನ್ಫರೆನ್ಸ್ ನಡೆಸಿದ್ದೀರಿ?, ಬೆಳೆ ಹಾನಿ ಸಮೀಕ್ಷೆ ನಡೆಸಲು ಯಾವ ಕ್ರಮ ಕೈಗೊಂಡಿದ್ದೀರಿ? ಎಂದು ಆರ್.ಅಶೋಕ ಪ್ರಶ್ನಿಸಿದರು.**
> **-ಆರ್.ಅಶೋಕ**

> **ಅಭದ್ರವಾಗಿರುವ ಸರ್ಕಾರದಲ್ಲಿ ಸಿಎಂ ಸಿದ್ದರಾಮಯ್ಯನವರ ಜೊತೆ ಇರಬೇಕೋ ಅಥವಾ ಡಿಸಿಎಂ ಡಿಕೆ ಶಿವಕುಮಾರ್ ಅವರ ಜೊತೆ ಇರಬೇಕೋ ಎನ್ನುವ ತಳಮಳ, ಗೊಂದಲ ತಮ್ಮನ್ನು ಕಾಡುತ್ತಿದೆ ಎಂದು ಗೊತ್ತಿದೆ. ತಮಗೆ ನನ್ನ ಕಿವಿಮಾತು ಏನೆಂದರೆ ತಾವು ನಾಡಿನ ರೈತರ ಜೊತೆಗೆ ಇರಿ. ಆಗ ಎಲ್ಲವೂ ತಾನಾಗಿಯೇ ಸರಿಹೋಗುತ್ತದೆ. ತಮ್ಮ ಕರ್ತವ್ಯ ನಿರ್ವಹಣೆ ಮಾಡಿ ರೈತರಿಗೆ ನೆರವಾಗಿ. ಅದೇ ನಿಮ್ಮನ್ನು ಕಾಪಾಡುತ್ತದೆ ಎಂದು ಲೇವಡಿ ಮಾಡಿದರು.**

## ಬಸ್‌ನಲ್ಲಿ ಸಂಚರಿಸುವಾಗ 2 ಲಕ್ಷ ಮೌಲ್ಯದ ಚಿನ್ನದ ಸರ ಕಳೆದುಕೊಂಡ ಮಹಿಳೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಲ್ಲಿ ಬಿಎಂಟಿಸಿ ಬಸ್‌ನಲ್ಲಿ ಸಂಚರಿಸುವಾಗ ಮಹಿಳೆಯೊಬ್ಬರ ಚಿನ್ನದ ಸರ ಕಳ್ಳತನವಾಗಿದೆ. ಬೆಂಗಳೂರಿನ ಹೇಸರಘಟ್ಟ ರಸ್ತೆಯ ಬೋನ್ ಮಿಲ್ ಬಳಿ ಈ ಒಂದು ಘಟನೆ ನಡೆದಿದೆ. ಬಸ್‌ನಲ್ಲಿ ಸುಮಾರು 2, ಮೌಲ್ಯದ 25 ಗ್ರಾಂ ಚಿನ್ನವನ್ನು ಪ್ರೇಮಮ್ಮ ಎನ್ನುವವರು ಕಳೆದುಕೊಂಡಿದ್ದಾರೆ. ಕೆ ಎ 57 ಎಫ್ 4760 ಸಂಖ್ಯೆಯ ಬಿಎಂಟಿಸಿ ಬಸ್‌ನಲ್ಲಿ ಈ ಒಂದು ಘಟನೆ ನಡೆದಿದೆ.ಸಂಬಂಧಿ ನಿಖಿಲ್ ಮನೆಗೆ ಬಸ್‌ನಲ್ಲಿ ಬರುತ್ತಿದ್ದಾಗ ಈ ಒಂದು ಕೃತ್ಯ ನಡೆದಿದೆ. ಬಾಗಲಕುಂಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಾಳೆ ಪ್ರಜ್ವಲ್ ರೇವಣ್ಣ ಜಾಮೀನು ಅರ್ಜಿ ಆದೇಶ ಪ್ರಕಟ



• ಉದಯವಾಹಿನಿ, ಬೆಂಗಳೂರು

ಅತ್ಯಾಚಾರ ಆರೋಪದಲ್ಲಿ ಬಂಧನಕ್ಕೆ ಒಳಗಾದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಜಾಮೀನು ಕೋರಿ ಸಲ್ಲಿಸಿದ ಅರ್ಜಿಗಳ ಮೇಲಿನ ಆದೇಶವನ್ನು ಅ. 21 ರಂದು ಹೈಕೋರ್ಟ್ ಪ್ರಕಟಿಸಲಿದೆ. ಒಂದು ಪ್ರಕರಣದಲ್ಲಿ ಜಾಮೀನು, ಇನ್ನೆರಡು ಪ್ರಕರಣಗಳಲ್ಲಿ ನಿರೀಕ್ಷಣಾ ಜಾಮೀನು ಕೋರಿದ ಅರ್ಜಿಗಳ ವಿಚಾರಣೆ ನಡೆಸಿ ಕಾಯ್ದಿರಿಸಲಾಗಿದ್ದ ಆದೇಶವನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕ ಸದಸ್ಯ ಪೀಠ ಸೋಮವಾರ ಪ್ರಕಟಿಸಲಿದೆ. ನಾಲ್ಕು ತಿಂಗಳಿಂದ ನ್ಯಾಯಾಂಗ ಬಂಧನದಲ್ಲಿರುವ ಪ್ರಜ್ವಲ್ ರೇವಣ್ಣ ವಿರುದ್ಧ ಹೊಳೆನರಸೀಪುರ ಠಾಣೆಯಲ್ಲಿ ದಾಖಲಾದ ಪ್ರಕರಣದಲ್ಲಿ ಜಾಮೀನು ಕೋರಲಾಗಿದೆ. ಸಿಐಡಿ ಸೈಬರ್ ಸೆಲ್‌ನಲ್ಲಿ ದಾಖಲಾಗಿದ್ದ ಮತ್ತೆರಡು ಪ್ರಕರಣಗಳಲ್ಲಿ ನಿರೀಕ್ಷಣಾ ಜಾಮೀನು ಕೋರಿದ್ದಾರೆ.

## ಯುಜಿ ವೈದ್ಯಕೀಯ ಪ್ರವೇಶ ಅಭ್ಯರ್ಥಿಗಳಿಗೆ ಮಾಪ್ ಆಪ್ ಸುತ್ತಿನ ಬಗ್ಗೆ ನವೀಕೃತ ಮಾಹಿತಿ

• ಉದಯವಾಹಿನಿ, ಬೆಂಗಳೂರು

ಯುಜಿನೀಟ್ 2024ರ ವೈದ್ಯಕೀಯ ಮಾಪ್ ಅಪ್ ಸುತ್ತಿನಲ್ಲಿ ವೈದ್ಯಕೀಯ ಸೀಟು ಹಂಚಿಕೆಯಾದ ಅಭ್ಯರ್ಥಿಗಳು ಶುಲ್ಕ ಪಾವತಿಯ ನಂತರ ನೇರವಾಗಿ ಸಂಬಂಧಿಸಿದ ಕಾಲೇಜಿನಲ್ಲಿ ಪ್ರವೇಶ ಪಡೆಯುವುದು. ಮೂಲ ದಾಖಲೆಗಳನ್ನು ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ಆಯಾ ಕಾಲೇಜಿನಲ್ಲಿಯೇ ಸಲ್ಲಿಸತಕ್ಕದ್ದು. ಈ ಮೊದಲು ತಿಳಿಸಿದಂತೆ 21-10-2024 ರಂದು ಮೂಲ ದಾಖಲೆಗಳನ್ನು ಸಲ್ಲಿಸಲು ಕೆಇಎ ಇಲ್ಲಿಗೆ ಬರುವಂತಿಲ್ಲ. ಅಭ್ಯರ್ಥಿಗಳು ದಿನಾಂಕ 22-10-2024 ರ ವರೆಗೆ ಶುಲ್ಕ ಪಾವತಿಸಿ ಕಾಲೇಜಿನಲ್ಲಿ ಪ್ರವೇಶ ಪಡೆಯಬಹುದಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ(ಕೆಇಎ) ಕಾರ್ಯನಿರ್ವಾಹಕ ನಿರ್ದೇಶಕರು ತಿಳಿಸಿದ್ದಾರೆ. ಸಹಾಯವಾಣಿ: 080-23 460 460, ದೂರವಾಣಿ: 080-23 564 583, ವೆಬ್‌ಸೈಟ್: https://kea.kar.nic.in

## ಭಾರೀ ಮಳೆಗೆ ಹಲವೆಡೆ ಅವಾಂತರ ಸೃಷ್ಟಿ

• ಉದಯವಾಹಿನಿ, ಬೆಂಗಳೂರು

ಬೆಳಗಿನ ಜಾವದಿಂದಲೇ ಗುಡುಗು ಸಹಿತ ಮಳೆಯ ಅಬ್ಬರ ಜೋರಾಗಿದೆ, ಅಕ್ಟೋಬರ್ 26ರವರೆಗೂ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ನಡುವೆ ಇಂದು ಸುರಿದ ಮಳೆಗೆ ಸಿಲಿಕಾನ್ ಸಿಟಿ ಅಕ್ಷರಶಃ ಕಂಗಾಲಾಗಿದೆ. ಮೆಜೆಸ್ಟಿಕ್, ಶಾಂತಿನಗರ, ತ್ಯಾಗರಾಜನಗರ, ಜಯನಗರ, ಜೆಪಿನಗರ, ಶ್ರೀನಗರ, ಕೆಆರ್ ಮಾರುಕಟ್ಟೆ, ಟೌನ್ ಹಾಲ್, ಕಾರ್ಪೊರೇಷನ್, ಮೈಸೂರು ರಸ್ತೆ, ವಿಜಯನಗರ, ಮಾಗಡಿ ರಸ್ತೆ, ರಾಜಾಜಿನಗರ, ಮಲ್ಲೇಶ್ವರಂ, ಯಶವಂತಪುರ, ಜಾಲಹಳ್ಳಿ, ಪೀಣ್ಯ, ಹೆಬ್ಬಾಳ ಸೇರಿದಂತೆ ನಗರದ ಹಲವಾರು ಕಡೆ ಗುಡುಗು ಸಹಿತ ಮಳೆಯಾಗಿದೆ ನಗರದಲ್ಲಿ ಬಿಟ್ಟು ಬಿಡದೆ ಸುರಿಯುತ್ತಿರುವ ಮಳೆಗೆ ರಾಜಕಾಲುವೆಗಳು ಉಕ್ಕಿ ಹರಿದಿದೆ. ಇನ್ನು ಮಳೆಗೆ ಸಿಲ್ಕ್ ಬೋರ್ಡ್, ಬೊಮ್ಮನಹಳ್ಳಿ ರಸ್ತೆ ಸಂಪೂರ್ಣ ಜಲಾವೃತವಾಗಿದ್ದು, ದ್ವಿಚಕ್ರವಾಹನ ಸವಾರರು ಪಾದಚಾರಿಗಳು ಪರದಾಡುತ್ತಿದ್ದಾರೆ. ರಸ್ತೆಯಲ್ಲಿ ಸುಮಾರು ಒಂದು ಅಡಿಯಷ್ಟು ನೀರು ನಿಂತ ಹಿನ್ನಲೆ ಕಿಮೀನಷ್ಟು ದೂರ ಟ್ರಾಫಿಕ್ ಜಾಮ್ ಉಂಟಾಗಿದ್ದು, ನಡು ರಸ್ತೆಯಲ್ಲಿ ಆಂಬುಲೆನ್ಸ್ ಸಿಕ್ಕಿಕೊಂಡಿರುವ ಘಟನೆ ನಡೆದಿದೆ. ಸದ್ಯ ಬಿಬಿಎಂಪಿ ನಿರ್ಲಕ್ಷ್ಯವೇ ಇದಕ್ಕೆಲ್ಲ ಕಾರಣ ಎಂದು ವಾಹನ ಸವಾರರು ಆಕ್ರೋಶ ಹೊರಹಾಕಿದ್ದಾರೆ.


ಉದಯವಾಹಿನಿ ಚಿತ್ರ


## 47 ಲಕ್ಷ ರೂ. ಚಿನ್ನಾಭರಣಕ್ಕೆ ಪಂಗನಾಮ ಹಾಕಿದ ಹೆಡ್ ಕಾನ್ಸ್‌ಟೇಬಲ್

• ಉದಯವಾಹಿನಿ, ಬೆಂಗಳೂರು

ಮಕ್ಕಳಿಗೆ ಸರ್ಕಾರ ಹುದ್ದೆ ಕೊಡಿಸುವುದಾಗಿ ಮಹಿಳೆಯೊಬ್ಬರಿಂದ 47 ಲಕ್ಷ ರೂ. 857 ಗ್ರಾಂ ಚಿನ್ನಾಭರಣವನ್ನು ಪಡೆದು ವಂಚಿಸಿ ಜೀವ ಬೆದರಿಕೆ ಹಾಕಿ ಪರಾರಿಯಾಗಿರುವ ಸಿ ಎ ಆರ್ ಹೆಡ್ ಕಾನ್ಸ್‌ಟೇಬಲ್, ಆತನ ಇಬ್ಬರು ಸಹಚರರ ಪತ್ತೆಗೆ ನಂದಿನಿ ಲೇಔಟ್ ಠಾಣೆ ಪೊಲೀಸರು ಶೋಧ ನಡೆಸುತ್ತಿದ್ದಾರೆ. ಚಾಮರಾಜಪೇಟೆಯಲ್ಲಿರುವ ಸಿಎಆರ್ ಪೊಲೀಸ್ ವಿಭಾಗದ ಹೆಡ್ ಕಾನ್ಸ್‌ಟೇಬಲ್‌ಆಗಿರುವ ಎಚ್.ಆರ್. ಪ್ರಶಾಂತ್ ಕುಮಾರ್ ಅವರ ಇಬ್ಬರು ಸಹಚರರಾದ ಪ್ರಶಾಂತ್, ಅವರ ಪತ್ನಿ ದೀಪಾ ವಿರುದ್ಧ ವಂಚನೆಗೆ ಒಳಗಾಗಿರುವ ಭಾಗ್ಯ ಎಂಬುವವರು ಪೊಲೀಸರಿಗೆ ದೂರು ನೀಡಿದ್ದು, ಈ ಸಂಬಂಧ ಪ್ರಕರಣ ದಾಖಲಾಗಿದೆ. **ಘಟನೆ ವಿವರ:** ಮಹಾಲಕ್ಷ್ಮೀ ಲೇಔಟನಲ್ಲಿ ವಾಸವಾಗಿದ್ದ ಭಾಗ್ಯ ಎಂಬುವವರು ಕಳೆದ 2021ರಲ್ಲಿ ತಮ ಊರಿನವರೇ ಆದ ಹೆಡ್ ಕಾನ್ಸ್‌ಟೇಬಲ್ ಪ್ರಶಾಂತ್‌ಕುಮಾರ್ ಅವರ ಪರಿಚಯವಾಗಿದ್ದು, ಆತ ನಾನು ಎಡಿಜಿಪಿ ಅವರ ಬಳಿ ಕಾರು ಚಾಲಕನಾಗಿ ಕೆಲಸ ಮಾಡುತ್ತಿದ್ದು, ನನಗೆ ಹಲವಾರು ಸರ್ಕಾರಿ ಅಧಿಕಾರಿಗಳು, ಕೆಪಿಎಸ್ಸಿ ಯಲ್ಲಿ ಪರಿಚಯವಿದ್ದು, ತಮ ಇಬ್ಬರು ಮಕ್ಕಳಿಗೆ ಕೆಲಸ ಕೊಡಿಸುವುದಾಗಿ ಹೇಳಿದ್ದರು.

## ಸ್ಯಾಂಡಲ್‌ವುಡ್ ಖ್ಯಾತ ನಿರ್ದೇಶಕ ಗುರುಪ್ರಸಾದ್ ವಿರುದ್ಧ ವಂಚನೆ ಆರೋಪ : ದೂರು ದಾಖಲು!

• ಉದಯವಾಹಿನಿ, ಬೆಂಗಳೂರು



ಕನ್ನಡ ಚಿತ್ರರಂಗದ ಖ್ಯಾತ ನಿರ್ದೇಶಕ, ನಟರಾಗಿ ಗುರುತಿಸಿಕೊಂಡಿರುವ ಗುರುಪ್ರಸಾದ ಅವರ ವಿರುದ್ಧ ವಂಚನೆ ಆರೋಪ ಕೇಳಿ ಬಂದಿದ್ದು, ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಜಯನಗರ ಪೊಲೀಸ್ ಠಾಣೆಯಲ್ಲಿ ಅವರ ವಿರುದ್ಧ ದೂರು ದಾಖಲಾಗಿದೆ.ಹೌದು ನಿರ್ದೇಶಕ ಗುರುಪ್ರಸಾದ್ ವಿರುದ್ಧ ಪುಸ್ತಕ ಮತ್ತು ಸಿಡಿಗಳನ್ನು ಖರೀದಿಸಿ ಹಣ ನೀಡದಿರುವ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಜಯನಗರದ ಟೋಟಲ್ ಕನ್ನಡ ಮಳಿಗೆ ಮಾಲೀಕ ಲಕ್ಷ್ಮೀಕಾಂತ್ ಅವರು ಗುರುಪ್ರಸಾದ್ ವಿರುದ್ಧ ಜಯನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

2019ರಲ್ಲಿ ಟೋಟಲ್ ಕನ್ನಡ ಮಳಿಗೆಯಲ್ಲಿ ಕನ್ನಡ ಸಾಹಿತ್ಯ, ಸಿನಿಮಾ ಸಂಬಂಧಿತ ಪುಸ್ತಕಗಳನ್ನು ಖರೀದಿ ಮಾಡಿದ್ದರು. ಇದರೊಂದಿಗೆ ಅವರು ಸಾಹಿತ್ಯ ಕ್ಕೆ ಸಂಬಂಧಿಸಿದ್ದ ಸಿಡಿಗಳನ್ನು ಖರೀದಿ ಮಾಡಿದ್ದರು.75 ಪುಸ್ತಕಗಳ ಐದು ಸೆಟ್? ಖರೀದಿಸಿದ್ದರಂತೆ. ಒಂದು ಸೆಟ್?ಗೆ 13 ಸಾವಿರದಂತೆ ಐದು ಸೆಟ್ ಪುಸ್ತಕಗಳಿಗೆ 65 ಸಾವಿರ ನೀಡಬೇಕು ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಇದಾದ ಬಳಿಕ ಕನ್ನಡ ಮಳಿಗೆ ಮಾಲೀಕ ಲಕ್ಷ್ಮೀಕಾಂತ್ ಅವರು ಗುರುಪ್ರಸಾದ್ ಅವರಿಗೆ ಈ ಒಂದು ವಿಚಾರವಾಗಿ ಹಣ ನೀಡುವಂತೆ ಹಲವಾರು ಬಾರಿ ಕರೆ ಮಾಡಿದ್ದರು ಕೂಡ ಕರೆ ಸ್ವೀಕರಿಸುತ್ತಿರಲಿಲ್ಲ. ಅಲ್ಲದೆ ಮನೆಯ ಬಳಿ ಹೋದರೆ ಮನೆಯ ವಿಳಾಸವನ್ನು ಕೂಡ ಬದಲಾಯಿಸಿದ್ದಾರೆ ಎಂದು ಲಕ್ಷ್ಮೀಕಾಂತ್ ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಕನ್ನಡದಲ್ಲಿ ಮಠ, ಎದ್ದೇಳು ಮಂಜುನಾಥ ಸೇರಿದಂತೆ ಹಲವು ಸಿನಿಮಾಗಳನ್ನು ನಿರ್ದೇಶಿಸಿದ್ದಾರೆ.

## ಸುದೀಪ್ ತಾಯಿ ನಿಧನಕ್ಕೆ ಸಂಸದ ಬೊಮ್ಮಾಯಿ ಸಂತಾಪ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಇಂದು ಸ್ಯಾಂಡಲ್ ವುಡ್ ಬಾದ್ ಷಾ, ನಟ ಕಿಚ್ಚ ಸುದೀಪ್ ಅವರ ತಾಯಿ ಸರೋಜಾ ಅವರು ಅನಾರೋಗ್ಯ ಹಿನ್ನೆಲೆಯಲ್ಲಿ ಸಾವನಪ್ಪಿದ್ದಾರೆ.

ಈ ಹಿನ್ನೆಲೆಯಲ್ಲಿ ನಟ ಕಿಚ್ಚ ಸುದೀಪ್ ಅವರ ಕುಟುಂಬಕ್ಕೆ ಬಹಳ ಆತ್ಮೀಯರಾಗಿರುವಂತಹ ಸಂಸದ ಬಸವರಾಜ್ ಬೊಮ್ಮಾಯಿ ಅವರು ಅವರ ಮನೆಗೆ ಭೇಟಿ ನೀಡಿ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದರು.

ಬಳಿಕ ಬಸವರಾಜ ಬೊಮ್ಮಾಯಿ ಅವರು ಮಾಧ್ಯಮಗಳೊಂದಿಗೆ ಮಾತನಾಡಿ,ಸರೋಜಕ್ಕ ನನಗೆ ಅತ್ಯಂತ ಪ್ರೀತಿ, ವಿಶ್ವಾಸ ಇದ್ದಂತಹ ವ್ಯಕ್ತಿ. ಮನೆಗೆ ಬಂದಾಗೆಲ್ಲ ಒಮ್ಮೆಯೂ ಹಾಗೆ ಕಳುಹಿಸದೆ ನಮಗೆ ಊಟ ಹಾಕಿದ್ದರು. ಅವರು ಅನ್ನಪೂರ್ಣೇಶ್ವರಿ. ಕುಟುಂಬಕ್ಕೆ ಅವರು ಆಧಾರಸ್ಥಂಭ ಆಗಿದ್ದರು. ಸುದೀಪ್ ಅವರನ್ನು ತುಂಬ ಪ್ರೀತಿಯಿಂದ ಬೆಳೆಸಿದ್ದರು ಎಂದು ಬೊಮ್ಮಾಯಿ ಹೇಳಿದ್ದಾರೆ.

ನಟ ಸುದೀಪ್ ಅವರನ್ನು ಸರೋಜಕ್ಕ ಅವರು ಬಹಳ ಪ್ರೀತಿಯಿಂದ ಬೆಳೆಸಿದ್ದಾರೆ. ಪ್ರತಿಯೊಂದು ಹೆಜ್ಜೆಯಲ್ಲೂ ಸುದೀಪ್ ಅವರಿಗೆ ಅವರು ಬೆಂಬಲ ನೀಡಿದ್ದಾರೆ. ಶಾಲೆ ಕಾಲೇಜಿಗೆ ಹೋಗಬೇಕಾದರೆ ಕ್ರಿಕೆಟ್ ಬೇಕಾದರೆ ಸಿನಿಮಾ ರಂಗಕ್ಕೆ ಕಾಲಿಟ್ಟಾಗ, ಆರಂಭದ ದಿನಗಳಲ್ಲಿ ಹೋರಾಟ ಮಾಡುವ ಸಂದರ್ಭದಲ್ಲಿ, ಎಲ್ಲದರಲ್ಲೂ ಸುದೀಪ್ ಮೇಲೆ ಅವರ ತಾಯಿಯ ಆಶೀರ್ವಾದ ಹಾಗೂ ಸಹಕಾರ ಇತ್ತು.

> **ಇಂದು ನಾವು ಅವರನ್ನು ಕಳೆದುಕೊಂಡಿದ್ದೇವೆ. ಈ ಒಂದು ಸಂದರ್ಭದಲ್ಲಿ ಅವರ ಕುಟುಂಬಸ್ಥರು ತುಂಬಾ ದುಃಖ ತಪ್ತರಾಗಿದ್ದಾರೆ. ನಮಗೂ ಕೂಡ ತುಂಬಾ ದುಃಖವಾಗಿದೆ ನೋವಾಗಿದೆ. ದೇವರು ಅವರ ಆತ್ಮಕ್ಕೆ ಶಾಂತಿ ನೀಡಲಿ ಹಾಗೂ ಸುದೀಪ್ ಸೇರಿದಂತೆ ಅವರ ಕುಟುಂಬಸ್ಥರಿಗೆ ದೇವರು ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ತಿಳಿಸಿದರು.**

## ಬೆಂಗಳೂರಿನಲ್ಲಿ ವಿದೇಶಿ ಪೋಸ್ಟ್ ಆಫೀಸ್ ಮೇಲೆ ಸಿಸಿಬಿ ದಾಳಿ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಸಿಸಿಬಿ ಪೊಲೀಸರು ಭರ್ಜರಿ ಭೇಟೆಯಾಡಿದ್ದಾರೆ. ವಿವಿಧ ದೇಶಗಳಿಂದ ಇಂಡಿಯನ್ ಪೋಸ್ಟ್ ಮುಖಾಂತರ ತರಿಸಿಕೊಂಡಿದ್ದ 21,17,34,000 ಕೋಟಿ ಮೌಲ್ಯದ ವಿವಿಧ ರೀತಿಯ ನಿಷೇಧಿತ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದು, ಇದೀಗ ತನಿಖೆ ವೇಳೆ ಸ್ಫೋಟಕ ಮಾಹಿತಿ ಬಹಿರಂಗವಾಗಿದೆ. ಸೆಪ್ಟೆಂಬರ್ 9 ರಂದು ಚಾಮರಾಜಪೇಟೆ ಬಳಿ ವಿದೇಶಿ ಪೋಸ್ಟ್ ಆಫೀಸ್ ಕಚೇರಿ ಮೇಲೆ ದಾಳಿ ನಡೆಸಲಾಗಿದ್ದು, ದಾಳಿ ವೇಳೆ ಸ್ಫೋಟಕ ಮಾಹಿತಿ ಬಹಿರಂಗವಾಗಿದ್ದು, ಕಾನೂನು ಬದ್ದವಾಗಿಯೇ ಬೆಂಗಳೂರಿಗೆ ಹೈಎಂಡ್ ಡ್ರಗ್ಸ್ ಪೂರೈಕೆ ಮಾಡಲಾಗುತ್ತಿತ್ತು. ಥಯಲ್ಯಾಂಡ್, ಅಮೇರಿಕ, ಯುಕೆಯಿಂದ ಡ್ರಗ್ಸ್ ಸಪ್ಲೈ ಆಗುತ್ತಿತ್ತು ಎನ್ನಲಾಗಿದೆ.




ಭಾರತೀಯ ಅಂಚೆ ಮೂಲಕ ವಿವಿಧ ವಿದೇಶಗಳಿಂದ ನಿಷೇಧಿತ ಮಾದಕ ವಸ್ತುಗಳನ್ನು ತರಿಸಿಕೊಳ್ಳುತ್ತಿದ್ದ ವ್ಯಕ್ತಿಗಳ ಮೇಲೆ ನಿಗಾ ಇಟ್ಟಿದ್ದ ಬೆಂಗಳೂರು ಸಿಸಿಬಿಯ ಮಾದಕ ದ್ರವ್ಯ ನಿಗ್ರಹ ದಳದ ಅಧಿಕಾರಿ ಮತ್ತು ಸಿಬ್ಬಂದಿಗಳ ತಂಡವು ಈ ವರ್ಷದಲ್ಲಿ 12 ಪ್ರಕರಣಗಳನ್ನು ದಾಖಲು ಮಾಡಿ, ಆರೋಪಿಗಳನ್ನು ದಸ್ತಗಿರಿ ಮಾಡಿ ವಿವಿಧ ರೀತಿಯ ನಿಷೇಧಿತ ಮಾಧಕ ವಸ್ತುಗಳನ್ನು ವಶಪಡಿಸಿಕೊಂಡು ಸಂಬಂಧಪಟ್ಟ ವ್ಯಕ್ತಿಗಳ ವಿರುದ್ಧ ನಗರದ ವಿವಿಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳನ್ನು ದಾಖಲು ಮಾಡಿರುತ್ತಾರೆ ಎಂದಿದೆ.

> **ಸೆಪ್ಟೆಂಬರ್ ಮಾಹೆಯಲ್ಲಿ ನಗರದ ಹೆಚ್.ಎಸ್.ಆರ್ ಲೇಔಟ್ ಪೊಲೀಸ್ ಠಾಣೆಯಲ್ಲಿ ಇಂತಹದೇ 2 ಪ್ರಕರಣಗಳು ಮತ್ತು ಸಿಸಿಬಿ ಠಾಣೆಯಲ್ಲಿ 1 ಪ್ರಕರಣ ದಾಖಲಿಸಿದ್ದು, ಈ ಪ್ರಕರಣಗಳಲ್ಲಿ ಮೂವರು ವ್ಯಕ್ತಿಗಳನ್ನು ಬಂಧಿಸಿ ಕ್ರಮ ಕೈಗೊಳ್ಳಲಾಗಿತ್ತು ಎಂದು ತಿಳಿಸಿದೆ.**

## ಸಂಚಾರ ಜೀವನಾಡಿ ನಮ್ಮ ಮೆಟ್ರೋಗೆ 13 ವರ್ಷ : ಸಿಬ್ಬಂದಿಗಳಿಗೆ ಸಿಎಂ ಧನ್ಯವಾದ!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ದೈನಂದಿನ ಒಡನಾಡಿಯಾಗಿರುವ 'ನಮ್ಮ ಮೆಟ್ರೋದ ಮೊದಲ ಕಾರ್ಯಾಚರಣೆ ಆರಂಭವಾಗಿ ಇಂದಿಗೆ 13 ವರ್ಷಗಳು ಪೂರೈಸಿದೆ. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಮೆಟ್ರೊ ಸಿಬ್ಬಂದಿಗೆ ಧನ್ಯವಾದ ಅರ್ಪಿಸಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಸಿಎಂ ಟ್ರಾಫಿಕ್ ಸಮಸ್ಯೆಗೆ ಪರಿಹಾರವಾಗಿ, ಇಂಧನ ಉಳಿಕೆಗೆ ಉತ್ತಮ ಮಾರ್ಗವಾಗಿ, ಎಲ್ಲಾ ರೀತಿಯ ಮಾಲಿನ್ಯ ತಡೆಗಟ್ಟುವಲ್ಲಿ ಮೆಟ್ರೋದ ಕೊಡುಗೆ ಪ್ರಮುಖವಾದದ್ದು.

'ನಮ್ಮ ಮೆಟ್ರೋ'ದ 13ನೇ ವಾರ್ಷಿಕೋತ್ಸವದ ಈ ಸಂದರ್ಭದಲ್ಲಿ ಬೆಂಗಳೂರಿನ ಜನತೆಗೆ ಹಾಗೂ ನಮ್ಮ ಮೆಟ್ರೋದ ಅನನ್ಯ ಸೇವೆಯ ಹಿಂದಿರುವ ಎಲ್ಲಾ ಸಿಬ್ಬಂದಿಗಳಿಗೆ ಧನ್ಯವಾದಗಳನ್ನು ಅರ್ಪಿಸುತ್ತೇವೆ ಎಂದು ಹೇಳಿದ್ದಾರೆ. ಬೆಂಗಳೂರಿಗರ ಸಂಚಾರ ಜೀವನಾಡಿ, ತನ್ನ ಉತ್ಕೃಷ್ಟ ದರ್ಜೆಯ ಸೇವೆ ಮತ್ತು ಸೌಲಭ್ಯಕ್ಕೆ ಹೆಸರುವಾಸಿಯಾಗಿರುವ ನಮ್ಮ ಹೆಮ್ಮೆಯ ನಮ್ಮ ಮೆಟ್ರೋ 13 ಯಶಸ್ವಿ ವಸಂತಗಳನ್ನು ಪೂರೈಸಿದೆ.

ನಗರದ ಕೊನೆಯ ಮೈಲಿವರೆಗೂ ಸಂಪರ್ಕ ಕಲ್ಪಿಸುವುದು ನಮ್ಮ ಗುರಿ, ಈ ನಿಟ್ಟಿನಲ್ಲಿ ಮೆಟ್ರೋ ಜಾಲ ವಿಸ್ತರಣೆಗೆ ನಮ್ಮ ಸರ್ಕಾರ ಪೂರ್ಣ ಬೆಂಬಲ ನೀಡಲಿದೆ. ನಗರದ ಸಂಚಾರ ದಟ್ಟಣೆ ಹೆಚ್ಚುತ್ತಿರುವ ಈ ದಿನಮಾನದಲ್ಲಿ ನಮ್ಮ ಮೆಟ್ರೋ ಸೇವೆ ಎಂದಿಗಿಂತ ಇಂದು ಹೆಚ್ಚು ಪ್ರಸ್ತುತ. ಸಾರ್ವಜನಿಕರು ಕೂಡ ತಮ್ಮ ಓಡಾಟಗಳಿಗೆ ಸಮೂಹ ಸಾರಿಗೆಯಾದ ಮೆಟ್ರೋವನ್ನು ಹೆಚ್ಚು ಬಳಸಬೇಕು ಎಂದು ಇದೇ ವೇಳೆ ಮನವಿ ಮಾಡಿದ್ದಾರೆ.

## ಪೊಲೀಸರು ತನಿಖೆ ವೇಳೆ ಬ್ಯಾಂಕ್ ಖಾತೆ ಫ್ರೀಜ್ ಮಾಡಲು ಮಾರ್ಗಸೂಚಿ

• ಉದಯವಾಹಿನಿ, ಬೆಂಗಳೂರು

ವಿವಿಧ ಪ್ರಕರಣಗಳ ತನಿಖೆ ನಡೆಸುವಾಗ ಪೊಲೀಸರು ಬ್ಯಾಂಕ್ ಖಾತೆಗಳನ್ನು ಫ್ರೀಜ್ ಮಾಡುತ್ತಾರೆ. ಆರ್ಥಿಕ ಅಪರಾಧಗಳ ತನಿಖೆ ವೇಳೆಯಂತೂ ಆರೋಪಿಗಳಖಾತೆಯಿಂದ ಹಣದ ವಹಿವಾಟಿಗೆ ನಿರ್ಬಂಧ ಹೇರಲಾಗುತ್ತದೆ. ಹಾಗಾದರೆ ಪೊಲೀಸರು ಬ್ಯಾಂಕ್ ಖಾತೆ ಫ್ರೀಜ್ ಮಾಡಲು ಮಾರ್ಗಸೂಚಿಗಳಿವೆಯೇ?. ಈ ಕುರಿತು ಪೊಲೀಸರು ಹೇಳುವುದೇನು?, ಯಾವಾಗ ಬ್ಯಾಂಕ್ ಖಾತೆ ಫ್ರೀಜ್ ಮಾಡಬಹುದು? ಎಂಬ ಮಾಹಿತಿ ಇಲ್ಲಿದೆ. ಈ ಕುರಿತು ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಬಿ. ದಯಾನಂದ ಮಾರ್ಗಸೂಚಿ ಹೊರಡಿಸಿದ್ದಾರೆ. ಈ ಮಾರ್ಗಸೂಚಿ ಪ್ರಕರಣಗಳ ತನಿಖಾ ಕಾಲದಲ್ಲಿ ಬ್ಯಾಂಕ್ ಖಾತೆಗಳ ಫ್ರೀಜ್ ಮಾಡಲು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಎಂಬ ವಿಷಯವನ್ನು ಒಳಗೊಂಡಿದೆ. ಇದನ್ನು ಬೆಂಗಳೂರು ನಗರದ ಎಲ್ಲಾ ಪೊಲೀಸ್ ಇನ್ಸ್‌ಪೆಕ್ಟರ್ (ಕಾ ಸು), ಮಹಿಳಾ ಪೊಲೀಸ್ ಠಾಣೆ, ಸೈಬರ್ ಕ್ರೈಂ ಪೊಲೀಸ್ ಠಾಣೆ, ಸಿಇಎನ್ ಪೊಲೀಸ್ ಠಾಣೆ, ಸಂಚಾರ ಪೊಲೀಸ್ ಠಾಣೆಗಳಿಗೆ ಸೂಕ್ತ ಕ್ರಮಕ್ಕಾಗಿ ಕಳಿಸಲಾಗಿದೆ. ಅಲ್ಲದೇ ಉಪ ಪೊಲೀಸ್ ಆಯುಕ್ತರು ಪೂರ್ವ, ಪಶ್ಚಿಮ, ಉತ್ತರ, ದಕ್ಷಿಣ, ಕೇಂದ್ರ, ಆಗ್ನೇಯ, ಈಶಾನ್ಯ, ವೈಟ್‌ಫೀಲ್ಡ್ ವಿಭಾಗ, ಸಂಚಾರ ಪೂರ್ವ, ಪಶ್ಚಿಮ, ಉತ್ತರ, ದಕ್ಷಿಣ, ಅಪರಾಧ ಅಪರಾಧ-1 ಬೆಂಗಳೂರು ನಗರ ಇವರಿಗೆ ಪ್ರತಿಯನ್ನು ಕಳಿಸಲಾಗಿದೆ.

## ಬೆಂಗಳೂರಲ್ಲಿ ಹಾಡ ಹಗಲೇ ಬಾಲಕಿಯ ಮೇಲೆ ಅತ್ಯಾಚಾರ

• ಉದಯವಾಹಿನಿ, ಬೆಂಗಳೂರು



ಮತ್ತೊಂದು ಪೈಶಾಚಿಕ ಕೃತ್ಯ ನಡೆದಿದ್ದು, ಹಾಡು ಹಗಲೇ 17 ವರ್ಷದ ಬಾಲಕಿಯ ಮೇಲೆ ದುರುಳನೊಬ್ಬ ಅತ್ಯಾಚಾರ ಎಸಗಿರುವ ಘಟನೆ ಬೆಂಗಳೂರು ಉತ್ತರ ತಾಲ್ಲೂಕಿನ ಮಾದನಾಯ ಕನಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ಈ ಒಂದು ದುರ್ಘಟನೆ ಸಂಭವಿಸಿದೆ. ಸದ್ಯ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ್ದ ಆರೋಪಿ ರವಿಕುಮಾರ್ (39) ನನ್ನು ಬಂಧಿಸಲಾಗಿದೆ. ಸಂತ್ರಸ್ತ ಬಾಲಕಿಯ ತಂದೆ ಆರೋಪಿಯ ಬಳಿ 70,000 ಹಣ ಪಡೆದಿದ್ದ ಎನ್ನಲಾಗಿದೆ. ಈ ಹಿಂದೆ 30 ಸಾವಿರ ರೂಪಾಯಿಯನ್ನು ಬಾಲಕಿಯ ತಂದೆ ಸಾಲವನ್ನು ತೀರಿಸಿದ್ದ. ಇನ್ನುಳಿದ 40,000 ಜೊತೆಗೆ ಬಡ್ಡಿ ಹಣ ನೀಡದಿದ್ದಕ್ಕೆ ಪೀಡಿಸುತ್ತಿದ್ದ ಎನ್ನಲಾಗಿದೆ. ಬಾಲಕಿಯ ತಂದೆ ಹಣ ವಾಪಸ್ ನೀಡಲು ವಿಳಂಬವಾಗಿದ್ದಕ್ಕೆ ಆರೋಪಿ ರವಿಕುಮಾರ್ ಪಿಡಿಸುತ್ತಿದ್ದ.ಹಿಂದೆ ಬಲವಂತವಾಗಿ ಬಾಲಕಿಗೆ ರವಿಕುಮಾರ್ ಕಿಸ್ ಕೊಟ್ಟಿದ್ದ. ಕಿಸ್ ಕೊಟ್ಟಿರುವುದನ್ನು ರವಿಕುಮಾರ್ ಫೋಟೋ ತೆಗೆದುಕೊಂಡಿದ್ದ ಫೋಟೋ ಸಾಮಾಜಿಕ ಜಾಲತಾಣದಲ್ಲಿ ಹರಿಬಿಡುವುದಾಗಿ ಬೆದರಿಕೆ ಕೂಡ ಹಾಕಿದ್ದ. ಯಾರು ಇಲ್ಲದ ವೇಳೆ ಮನೆಗೆ ನುಗ್ಗಿ ಬಾಲಕಿಯ ಮೇಲೆ ಅತ್ಯಾಚಾರ ಎಸೆಗಿದ್ದಾನೆ. ಬಾಲಕಿ ನೀಡಿದ ದೂರಿನ ಮೇರೆಗೆ ಆರೋಪಿ ರವಿ ಕುಮಾರನನ್ನು ಬಂಧಿಸಲಾಗಿದೆ.ಸದ್ಯ ಮಾದನಾಯಕನಹಳ್ಳಿ ಠಾಣೆ ಪೋಲೀಸರು ರವಿಕುಮಾರ್ ನನ್ನು ಜೈಲಿಗಟ್ಟಿದ್ದಾರೆ. ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಪ್ರಕರಣ ದಾಖಲಾಗಿದೆ.

# ಕೆಪಿಟಿಸಿಎಲ್ ನೇಮಕಾತಿಯಲ್ಲಿ ಆಗಲಿದೆ ಬದಲಾವಣೆ?

## ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಮನವಿ ಸಲ್ಲಿಕೆ ಮಾಡಿ**

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ 411 ಕಿರಿಯ ಸ್ಟೇಷನ್ ಪರಿಚಾರಕ ಮತ್ತು 81 ಕಿರಿಯ ಪವರ್‌ಮ್ಯಾನ್ ಹುದ್ದೆ, ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿನ 2,268 ಕಿರಿಯ ಪವರ್‌ಮ್ಯಾನ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

20/11/2024ರ ತನಕ ಅರ್ಜಿಗಳನ್ನು ಸಲ್ಲಿಕೆ ಮಾಡಲು ಅವಕಾಶ ನೀಡಲಾಗಿದೆ. ಈ ನೇಮಕಾರಿಗೆ ವಿದ್ಯಾರ್ಹತೆ 10ನೇ ತರಗತಿ ಉತ್ತೀರ್ಣರಾಗಿರಬೇಕು. ಕೆಪಿಟಿಸಿಎಲ್‌ನ ಈ ನೇಮಕಾತಿ ಕುರಿತು ಈಗ ಸರ್ಕಾರ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಕಾರ್ಯದರ್ಶಿ ಸತ್ಯವತಿ ಅವರಿಗೆ ಮನವಿಯೊಂದು ಸಲ್ಲಿಕೆಯಾಗಿದೆ. ಆಲ್ ಕರ್ನಾಟಕ ಸ್ಟೇಟ್ ಸ್ಟುಡೆಂಟ್ಸ್ ಅಸೋಶಿಯೇಷನ್ (ಆರ್) ಈ ಮನವಿ ಸಲ್ಲಿಕೆ ಮಾಡಿದೆ.

ಮನವಿಯಲ್ಲಿ ಏನಿದೆ?; ಈ ಮನವಿಯು ಕೆಪಿಟಿಸಿಎಲ್ ಮತ್ತು ರಾಜ್ಯದ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಿರಿಯ ಸ್ಟೇಷನ್ ಪರಿಚಾರಕ ಮತ್ತು ಕಿರಿಯ ಪವರ್ ಮ್ಯಾನ್ 2,975 ಹುದ್ದೆಗಳಿಗೆ ಎಸ್‌ಎಸ್‌ಎಲ್‌ಸಿ ಅಂಕಗಳು ಮತ್ತು ದೈಹಿಕ ಪರೀಕ್ಷೆಯ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ಬದಲಾಗಿ ಸ್ಪರ್ಧಾತ್ಮಕ ಪರೀಕ್ಷೆ ಮುಖಾಂತರ ನೇರ ನೇಮಕಾತಿ ಮಾಡಿಕೊಳ್ಳಬೇಕೆಂಬ ಮನವಿ ಎಂಬ ವಿಷಯ ಒಳಗೊಂಡಿದೆ. ಮನವಿ ಪತ್ರದಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮತ್ತು ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಲ್ಯಾಣ ಕರ್ನಾಟಕ ಮತ್ತು ಉಳಿಕೆ ಮೂಲ ವೃಂದದ ಕಿರಿಯ ಸ್ಟೇಷನ್ ಪರಿಚಾರಕ ಮತ್ತು ಕಿರಿಯ ಪವರ್ ಮ್ಯಾನ್ 2,975 ಹುದ್ದೆಗಳನ್ನು ಎಸ್‌ಎಸ್‌ಎಲ್‌ಸಿ ಅಂಕಗಳು ಮತ್ತು ದೈಹಿಕ ಪರೀಕ್ಷೆಯ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿದೆ. ಅರ್ಜಿ ಸಲ್ಲಿಕೆಗೆ ಅಕ್ಟೋಬರ್ 21ರಿಂದ ನವಂಬರ್ 20ರ ವರೆಗೆ ದಿನಾಂಕವನ್ನು ನಿಗದಿಗೊಳಿಸಲಾಗಿದೆ. ಈ ರೀತಿ ಸ್ಪರ್ಧಾತ್ಮಕ ಪರೀಕ್ಷೆಯನ್ನು ಹೊರತುಪಡಿಸಿ ಅಂಕಗಳ ಆಧಾರದ ನೇಮಕಾತಿಯು ಎಲ್ಲಾ ಹುದ್ದೆ ಆಕಾಂಕ್ಷಿಗಳಿಗೂ ನ್ಯಾಯ ಒದಗಿಸುವ ಕ್ರಮವಲ್ಲ ಎಂಬುದನ್ನು ನಿಮ್ಮ ಗಮನಕ್ಕೆ ತರಲಾಗುತ್ತಿದೆ ಎಂದು ಹೇಳಿದೆ.

ಪ್ರಸ್ತುತ ಕಾಲಘಟ್ಟದಲ್ಲಿ ರಾಜ್ಯದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನಿರುದ್ಯೋಗ ತಾಂಡವವಾಡುತ್ತಿದೆ. ಇಂತಹ ಸಂದರ್ಭದಲ್ಲಿ ನ್ಯಾಯ ಸಮ್ಮತವಲ್ಲದ ಮತ್ತು ಪ್ರಾಮಾಣಿಕವಲ್ಲದ ನೇಮಕಾತಿ ಪ್ರಕ್ರಿಯೆಯು ನಿರುದ್ಯೋಗಿಗಳಲ್ಲಿ ಮತ್ತಷ್ಟು ಆಕ್ರೋಶವನ್ನು ಹೆಚ್ಚಿಸುತ್ತದೆ. ಈ ರೀತಿ ಎಸ್‌ಎಸ್‌ಎಲ್‌ಸಿ ಅಂಕಗಳ ಆಧಾರದ ಮೇಲಿನ ನೇಮಕಾತಿ ಪ್ರಕ್ರಿಯೆಯಿಂದ ಕರೋನ ನಂತರದ ವರ್ಷಗಳಲ್ಲಿನ ಅಭ್ಯರ್ಥಿಗಳಿಗೆ ಹೆಚ್ಚು ಅನುಕೂಲವಾಗುತ್ತದೆ.

ಏಕೆಂದರೆ, ಕೊರೋನ ನಂತರದ ವರ್ಷಗಳಲ್ಲಿ ಶೇಕಡ 90ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಅಭ್ಯರ್ಥಿಗಳೇ ದೊಡ್ಡ ಸಂಖ್ಯೆಯಲ್ಲಿ ಇದ್ದಾರೆ. ಇದರಿಂದ ಕರೋನ ಪೂರ್ವ ವರ್ಷಗಳಲ್ಲಿ ಎಸ್‌ಎಸ್‌ಎಲ್‌ಸಿ ಮುಗಿಸಿದ ಅಭ್ಯರ್ಥಿಗಳಿಗೆ ಮತ್ತು ಈಗಾಗಲೇ ಇದೇ ಹುದ್ದೆಗಳಿಗೆ ತಯಾರಿ ನಡೆಸುತ್ತಿರುವ ಅಭ್ಯರ್ಥಿಗಳಿಗೆ ಅನ್ಯಾಯವಾಗುತ್ತದೆ.

> **ನಮ್ಮ ನೆರೆಹೊರೆ ರಾಜ್ಯಗಳಲ್ಲಿಯೂ ಕೂಡ ಇದೇ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ಮುಖಾಂತರ ನೇಮಕಾತಿ ಮಾಡಲಾಗುತ್ತಿದೆ. ಆದ್ದರಿಂದ ನಮ್ಮ ರಾಜ್ಯದಲ್ಲಿಯೂ ಕೂಡ ಇದೇ ನಿಯಮಗಳನ್ನು ಅಳವಡಿಸಿಕೊಳ್ಳಬೇಕೆಂದು ಮನವಿ ಮಾಡುತ್ತಿದ್ದೇವೆ.**

> **ಆದ್ದರಿಂದ, ಈಗ ಕೆಪಿಟಿಸಿಎಲ್‌ನಿಂದ ಅಧಿಸೂಚನೆ ಹೊರಡಿಸಿರುವ ಈ ಹುದ್ದೆಗಳಿಗೂ ಕೂಡ ಸ್ಪರ್ಧಾತ್ಮಕ ಪರೀಕ್ಷೆ ಮುಖಾಂತರ ನೇಮಕಾತಿ ಮಾಡಿಕೊಳ್ಳಬೇಕೆಂದು ಲಕ್ಷಾಂತರ ಹುದ್ದೆ ಆಕಾಂಕ್ಷಿಗಳ ಪರವಾಗಿ ನಮ್ಮ ಸಂಘಟನೆಯ ವತಿಯಿಂದ ನಿಮ್ಮಲ್ಲಿ ವಿನಯ ಪೂರ್ವಕ ಮನವಿಯನ್ನು ಸಲ್ಲಿಸುತ್ತಿದ್ದೇವೆ ಎಂದು ಪತ್ರದಲ್ಲಿ ವಿವರಿಸಲಾಗಿದೆ.**

> **ಈಗಾಗಲೇ, ಮಾನ್ಯ ಸಚಿವರಿಗೆ ತಿಳಿದಿರುವಂತೆ ಕಂದಾಯ ಇಲಾಖೆಯಲ್ಲಿ ಗ್ರಾಮ ಲೆಕ್ಕಿಗರ ಹುದ್ದೆಗಳಿಗೆ ಪಿಯುಸಿ ಅಂಕಗಳ ಆಧಾರದ ನೇಮಕಾತಿ ಪ್ರಕ್ರಿಯೆಯನ್ನು ಕೈ ಬಿಟ್ಟು ಸ್ಪರ್ಧಾತ್ಮಕ ಪರೀಕ್ಷೆ ಮುಖಾಂತರ ನೇಮಕಾತಿ ಮಾಡಿ ಕೊಳ್ಳಲಾಗುತ್ತಿದೆ.**

ಅಂತರಾಳದಿಂದ..
EDITORIAL

# ಬಿಜೆಪಿಯೊಳಗಿನ ಬ್ಲಾಕ್ ಟಿಕೆಟ್ ದಂಧೆಯಲ್ಲಿ ವರಿಷ್ಠರ ಹೆಸರು!

ಕಾಂಗ್ರೆಸ್‌ನ ಅಕ್ರಮಗಳ ಬಗ್ಗೆ ಬಿಜೆಪಿ ಒಂದು ಬೆರಳು ತೋರಿಸಿದರೆ, ಅವರದೇ ಮೂರು ಬೆರಳುಗಳು ಬಿಜೆಪಿಯ ಅಕ್ರಮಗಳನ್ನು ಬೆಟ್ಟು ಮಾಡುತ್ತಿವೆ ಬಿಜೆಪಿಯ ನಾಯಕರು ಕಾಂಗ್ರೆಸ್‌ನ ಒಂದು ಅಕ್ರಮವನ್ನು ಬಿಚ್ಚಿದರೆ, ಅದರ ಜೊತೆ ಜೊತೆಗೇ ಬಿಜೆಪಿ ನಾಯಕರ ಮೂರು ಅಕ್ರಮಗಳು ತೆರೆದುಕೊಳ್ಳತೊಡಗುತ್ತವೆ. ಕಳೆದ ವಿಧಾನಸಭಾ ಚುನಾವಣೆ ಮುಗಿದು. ಒಂದೂವರೆ ವರ್ಷವಾದರೂ, ಚುನಾವಣೆಯಲ್ಲಿ ಮಾಡಿದ ಅಕ್ರಮಗಳು ಬಿಜೆಪಿ ನಾಯಕರ ಬೆನ್ನು ಬಿಡುತ್ತಿಲ್ಲ. ಹಿಂದಿನ ಬಿಜೆಪಿ ಸರಕಾರದ ಅವಧಿಯಲ್ಲಿ ನಡೆದ ಭಾರೀ ಭ್ರಷ್ಟಾಚಾರಗಳು ವಿರೋಧ ಪಕ್ಷದಲ್ಲಿ ಕುಳಿತ ಬಿಜೆಪಿ ನಾಯಕರನ್ನು ಮತ್ತೆ ಹಿಂಬಾಲಿಸುತ್ತಿವೆ. ಬಿಜೆಪಿಯು ನಡೆಸಿದ ಚುನಾವಣಾ ಟಿಕೆಟ್ ಮಾರಾಟ ದಂಧೆ' ಇದೀಗ ಮತ್ತೆ ಸುದ್ದಿಯಲ್ಲಿದೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಬಿಜಾಪುರ ಕ್ಷೇತ್ರದಿಂದ ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಹೇಳಿ ಈ ಮೂವರು, ಐದು ಕೋಟಿ ರೂಪಾಯಿ ಲಂಚಕ್ಕೆ ಬೇಡಿಕೆ ಇಟ್ಟಿದ್ದು ಸುಮಾರು 2.25 ಕೋಟಿ ರೂಪಾಯಿಯನ್ನು ಪಡೆದು ವಂಚಿಸಿದ ಆರೋಪ ಇವರ ಮೇಲಿದೆ. ಟಿಕೆಟ್ ಸಿಗದೇ ಇದ್ದಾಗ, ಸಂತ್ರಸ್ತ ಮರಳಿ ಹಣವನ್ನು ಕೇಳಿದಾಗ ಜಾತಿ ನಿಂದನೆ ಮಾಡಿ ಬೆದರಿಕೆ ಹಾಕಿದ್ದಾರೆ ಎಂದೂ ದೂರಿನಲ್ಲಿ

**ಈ ಬಾರಿ ಬಿಜೆಪಿಯ ಹಿರಿಯ ನಾಯಕರ ಬುಡಕ್ಕೇ ಬಂದಿದೆ. ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಕೋಟ್ಯಂತರ ರೂಪಾಯಿ ಪಡೆದು ವಂಚಿಸಿದ ಆರೋಪದಲ್ಲಿ ಬಸವೇಶ್ವರ ಪೊಲೀಸ್ ಠಾಣೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯ ಬಂಧುಗಳಾಗಿರುವ ಗೋಪಾಲ್ ಜೋಶಿ, ವಿಜಯ ಲಕ್ಷ್ಮೀ ಜೋಶಿ ಹಾಗೂ ಅಜಯ್ ಜೋಶಿ ವಿರುದ್ಧ ಪ್ರಕರಣ ದಾಖಲಾಗಿದೆ.**

ರಾಜ್ಯ ಬಿಜೆಪಿಯೊಳಗೆ ಟಿಕೆಟ್ ಹೆಸರಿನಲ್ಲಿ ಕಾಳದಂಧೆ ನಡೆಯುತ್ತಿರುವುದು ಈ ಹಿಂದೆಯೇ ಜಗಜ್ಜಾಹೀರಾಗಿದೆ ಮಾತ್ರವಲ್ಲ ಸಂಘಪರಿವಾರ ಆರೆಸ್ಸೆಸ್ ನಂಟಿರುವ ಹಲವು ನಾಯಕರ ಬಂಧನವಾಗಿದೆ. ಆದರೆ ಈ ಬಾರಿಯ ಆರೋಪ ತುಸು ಗಂಭೀರವಾದುದು. ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಗೋವಿಂದ ಬಾಬು ಪೂಜಾರಿ ಎನ್ನುವ ಬಿಲ್ಲವ ಸಮುದಾಯದ ಉದ್ಯಮಿಗೆ ಟಿಕೆಟ್ ಆಮಿಷ ತೋರಿಸಿ ಅರೆಸ್ಸೆಸ್ ಬೆಂಬಲಿತ ನಾಯಕರು ಸುಮಾರು ಏಳು ಕೋಟಿ ರೂಪಾಯಿ ವಂಚಿಸಿದ ಆರೋಪ ಮಾಧ್ಯಮಗಳಲ್ಲಿ ಭಾರೀ ಸುದ್ದಿ ಮಾಡಿತ್ತು ಈ ಪ್ರಕರಣದಲ್ಲಿ ತಮ್ಮ ಮೂರನೇ ದರ್ಜೆಯ ಉದ್ವಿಗ್ನಕಾರಿ ಭಾಷಣಗಳ ಮೂಲಕ ಕರಾವಳಿಗೆ ಬೆಂಕಿ ಹಚ್ಚುತ್ತಿದ್ದ ಚೈತ್ರಾ, ಕುಂದಾಪುರ ಎನ್ನುವ ಕುಖ್ಯಾತ ಮಹಿಳೆ ಕೇಂದ್ರ ಸ್ಥಾನದಲ್ಲಿದ್ದಳು. ಈಕೆಯ ಮೇಲೆ ಅದಾಗಲೇ ಹಲವು ಕ್ರಿಮಿನಲ್ ಮೊಕದ್ದಮೆಗಳಿದ್ದವು. ಟಿಕೆಟ್ ಕೊಡಿಸುತ್ತೇನೆ ಎಂದು ವಂಚಿಸಿದ ಆರೋಪದಲ್ಲಿ ಚೈತ್ರಾ, ಕುಂದಾಪುರಳ ಬಂಧನವೂ ಆಯಿತು ತನಿಖೆಯ ಸಂದರ್ಭದಲ್ಲಿ ಈಕೆಯೊಂದಿಗೆ ಶಾಮೀಲಾಗಿರುವ ಸ್ವಾಮೀಜಿಯೂ ಸೇರಿದಂತೆ ಹಲವು ಹೆಸರುಗಳು ಹೊರ ಬಿದ್ದವು. ಈ ಪ್ರಕರಣದಲ್ಲಿ ಪ್ರಮುಖ ಆರೋಪಿಯಾಗಿದ್ದ ಸ್ವಾಮೀಜಿಯೊಬ್ಬ ಸಂಘಪರಿವಾರದ ಮುಖಂಡರಲ್ಲಿ ಒಬ್ಬನಾಗಿರುವ ಚಕ್ರವರ್ತಿ ಸೂಲಿಬೆಲೆ ಸೇರಿದಂತೆ ಹಲವರ ಜೊತೆಗೆ ಗುರುತಿಸಿಕೊಂಡಿದ್ದ. ಈ ತಂಡ ವಂಚಿಸಿದ್ದು ಯಾರೋ ಒಬ್ಬ ಅಮಾಯಕನಿಗಲ್ಲ ಆದಾಗಲೇ ಬಿಜೆಪಿಯೊಂದಿಗೆ ಗುರುತಿಸಿಕೊಂಡು ಕೇಂದ್ರ ಸಚಿವ ಅಮಿತ್ ಶಾ ಅವರ ಜೊತೆಗೂ ಕಾಣಿಸಿಕೊಂಡಿದ್ದ ಉದ್ಯಮಿ ಒಬ್ಬರಿಗೆ ಬಿಜೆಪಿಯ ಮತ್ತು ಆರೆಸ್ಸೆಸ್‌ನ ಹಿರಿಯ ನಾಯಕರ ಪಾತ್ರವಿಲ್ಲದೆ, ಈ ವಂಚನೆ ನಡೆದಿರಲಿಕಿಲ್ಲ ಎಂದು ಈ ಸಂದರ್ಭದಲ್ಲಿ ಅನುಮಾನ ಪಡಲಾಗಿತ್ತು ತನ್ನ ಬಂಧನವಾದ ಬೆನ್ನಿಗೇ ಚೈತ್ರಾ, ಕುಂದಾಪುರ 'ಈ ವಂಚನೆಯಲ್ಲಿ ಇನ್ನೂ ಹಲವು ಪ್ರಮುಖರ ಹೆಸರುಗಳು ಶೀಘ್ರದಲ್ಲೇ ಹೊರಬೀಳಲಿವೆ' ಎಂದು ಹೇಳಿಕೆ ನೀಡಿದಳು. ತನ್ನನ್ನು ರಕ್ಷಿಸದೇ ಇದ್ದರೆ, ಉಳಿದವರ ಹೆಸರನ್ನು ಹೇಳಬೇಕಾಗುತ್ತದೆ ಎಂದು ಪಕ್ಷದ ವರಿಷ್ಠರಿಗೆ ಪರೋಕ್ಷ ಬೆದರಿಕೆಯನ್ನು ! ಆಕೆ ಹಾಕಿದ್ದಳು. ಈ ಪ್ರಕರಣದಲ್ಲಿ ಕಬಾಬ್ ಮಾರುವವನೊಬ್ಬನಿಗೆ ವೇಷ ಹಾಕಿಸಿ 'ಅರೆಸ್ಸೆಸ್ ವರಿಷ್ಠ ಎಂದು ಉದ್ಯಮಿಯನ್ನು ನಂಬಿಸಲಾಗಿತ್ತಂತೆ. ಬಿಜೆಪಿ, ಆರೆಸ್ಸೆಸನ್ನು ಬಲ್ಲ ಒಬ್ಬ ಉದ್ಯಮಿ ಯಾವನೋ ಒಬ್ಬ ಕಬಾಬ್ ಮಾರುವವನನ್ನು ಆರೆಸ್ಸೆಸ್ ವರಿಷ್ಠ ಎಂದು ತೋರಿಸಿದಾಕ್ಷಣ ಕೋಟ್ಯಂತರ ರೂಪಾಯಿಯನ್ನು ನೀಡಲು ಸಾಧ್ಯವೆ? ಯಾವುದೋ ಹಿರಿಯ ಆರೆಸ್ಸೆಸ್ ವರಿಷ್ಠರ ಮಾತುಗಳನ್ನು ನಂಬಿ ಚೈತ್ರಾ, ಕುಂದಾಪುರ ಖತರ್‌ಕ್ ತಂಡಕ್ಕೆ ಉದ್ಯಮಿ ಹಣ ಸುರಿದಿದ್ದಾರೆ ಎನ್ನುವುದು ಅದರ ಮುಂದುವರಿದ ಭಾಗ, ಇದೀಗ ಬಿಜೆಪಿಯ ಹಿರಿಯ ನಾಯಕ ಪ್ರಹ್ಲಾದ್ ಜೋಶಿ ಸೋದರನ ವಿರುದ್ಧ ದಾಖಲಾಗಿರುವ ಎಫ್‌ಐಆರ್. ಗೋಪಾಲ್ ಜೋಶಿ ಸಹಿತ ಮೂವರು ಆರೋಪಿಗಳು ಬಿಜೆಪಿಯಲ್ಲಿ ಯಾವುದೇ ಅತ್ಯುನ್ನತ ಸ್ಥಾನದಲ್ಲಿ ಇಲ್ಲ. ಹೀಗಿರುವಾಗ, ಲೋಕಸಭಾ ಟಿಕೆಟ್ ಗಾಗಿ ಕೋಟ್ಯಂತರ ರೂಪಾಯಿಯನ್ನು ಯಾರೂ ಇವರ ಕೈಗೆ ನೀಡಲಾರರು. ಪ್ರಹ್ಲಾದ್ ಜೋಶಿಯ ಸಂಬಂಧಿಕರು ಎನ್ನುವ ಕಾರಣದಿಂದಲೇ ಕೋಟ್ಯಂತರ ರೂಪಾಯಿಯನ್ನು ಇವರಿಗೆ ನೀಡಿದ್ದಾರೆ. ಪ್ರಹ್ಲಾದ್ ಜೋಶಿ ಬರೇ ಕೇಂದ್ರ ಸಚಿವರು ಮಾತ್ರವೇ ಅಲ್ಲ. ಅವರಿಗೆ ರಾಜ್ಯ ಬಿಜೆಪಿ, ಅರೆಸ್ಸೆಸ್ ಮೇಲೆ ನಿಯಂತ್ರಣವಿದೆ ಕೇಂದ್ರ ವರಿಷ್ಠರ ಜೊತೆಗೆ ಆತ್ಮೀಯ ಸಂಬಂಧವನ್ನು ಪ್ರಹ್ಲಾದ್ ಜೋಶಿಯವರು ಹೊಂದಿದ್ದಾರೆ. ರಾಜ್ಯದಲ್ಲಿ ಯಾರಿಗೆ ಟಿಕೆಟ್ ನೀಡಬೇಕು. ನೀಡಬಾರದು ಎನ್ನುವ ನಿರ್ಧಾರದಲ್ಲಿ ಜೋಶಿ ಮತ್ತು ಅವರ ತಂಡದ ಹಸಕ್ಷೇಪಗಳ ಬಗ್ಗೆ ಬಿಜೆಪಿಯಲ್ಲೇ ಅಸಮಾಧಾನಗಳಿವೆ. ಕಳೆದ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಟಿಕೆಟ್ ನೀಡುವಲ್ಲಿ ಆದ ಅಧ್ವಾನಕ್ಕೆ ಜೋಶಿ ಕೂಡ ಕಾರಣರು ಎನ್ನುವುದನ್ನು ಬಿಜೆಪಿ ನಾಯಕರೇ ಆರೋಪಿಸಿದ್ದರು. ಪರಿಣಾಮವಾಗಿ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಭಾರೀ ಹಿನ್ನಡೆಯನ್ನು ಅನುಭವಿಸಿತ್ತು. ಆತಂಕದ ಸಂಗತಿಯೆಂದರೆ, ವಿಧಾನಸಭಾ ಟಿಕೆಟ್ ನೀಡುತ್ತೇನೆ ಎಂದು ಕೋಟ್ಯಂತರ ರೂ. ವಂಚಿಸಿದ ಕಾರಣಕ್ಕೆ ಹಲವು ಬಿಜೆಪಿ ಕಾರ್ಯಕರ್ತರ ಬಂಧನವಾದ ಬಳಿಕವೂ ಪಾಠ ಕಲಿಯದ ಬಿಜೆಪಿ ಮುಖಂಡರು ಯಾವ ಅಂಜಿಕೆಯೂ ಇಲ್ಲದೆ ತಮ್ಮ ದಂಧೆಯನ್ನು ಮುಂದುವರಿಸಿದ್ದಾರೆ. ಲೋಕಸಭಾ ಚುನಾವಣೆಯ ಟಿಕೆಟ್ ಹೆಸರಿನಲ್ಲಿ ನಡೆದ ವಂಚನೆಯಲ್ಲಿ ಪ್ರಹ್ಲಾದ್ ಜೋಶಿಯವರ ಹೆಸರು ಪ್ರಸ್ತಾಪ ಮಾಡದೇ ಸಂತ್ರಸ್ತರಿಂದ ಕೋಟ್ಯಂತರ ರೂಪಾಯಿ ವಸೂಲಿ ಮಾಡುವುದಕ್ಕೆ ಸಾಧ್ಯವೇ ಇಲ್ಲ.

# ಸಂತಾಪ ಪತ್ರ ಬರೆದ ಆಂಧ್ರ ಡಿಸಿಎಂ ಪವನ್



## ಸುದೀಪ್ ತಾಯಿ ಸರೋಜಾ ವಿಧಿವಶ

• **ಉದಯವಾಹಿನಿ, ಬೆಂಗಳೂರು**

ಸ್ಯಾಂಡಲ್‌ವುಡ್ ಸ್ಟಾರ್ ನಟ ಕಿಚ್ಚ ಸುದೀಪ್ ಅವರ ತಾಯಿ ಸರೋಜಾ (83) ಅವರು ವಯೋಸಹಜ ಕಾಯಿಲೆಯಿಂದ ಕೊನೆ ಯುಸಿರೆಳೆದಿದ್ದಾರೆ. ಇಡೀ ಚಿತ್ರರಂಗ ಸಾವಿಗೆ ಕಂಬನಿ ಮಿಡಿದಿದೆ. ಇದೇ ವೇಳೆ ಆಂಧ್ರ ಪ್ರದೇಶದ ಉಪಮುಖ್ಯಮಂತ್ರಿ ಹಾಗೂ ನಟ ಪವನ್ ಕಲ್ಯಾಣ್ ಅವರು ಪತ್ರ ಬರೆದು ಸಂತಾಪ ಸೂಚಿಸಿದ್ದಾರೆ.

ನಟ ಸುದೀಪ್ ಅವರ ತಾಯಿಯ ನಿಧನಕ್ಕೆ ಸಂತಾಪ ಸೂಚಿಸಿ ಅಧಿಕೃತ ಪತ್ರ ಬರೆದಿರುವ ಡಿಸಿಎಂ ಪವನ್ ಕಲ್ಯಾಣ್, ಸುದೀಪ್ ಅವರ ಕುಟುಂಬಕ್ಕೆ ನನ್ನ ತೀವ್ರ ಸಂತಾಪಗಳು. ಖ್ಯಾತ ನಟ ಶ್ರೀ ಕಿಚ್ಚ ಸುದೀಪ್ ಅವರ ತಾಯಿ ಶ್ರೀಮತಿ ಸರೋಜಾ ಅವರು ವಿಧಿವಶರಾಗಿದ್ದಾರೆ ಎಂದು ತಿಳಿದು ದುಃಖವಾಗಿದೆ. ಸರೋಜಾ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ದೇವರಲ್ಲಿ ಪ್ರಾರ್ಥಿಸುತ್ತಿದ್ದೇನೆ.



ಉದಯವಾಹಿನಿ ಚಿತ್ರ

**ಸಂಜೀವ್ ಮತ್ತು ಸರೋಜಾ ದಂಪತಿಗೆ ಮೂವರು ಮಕ್ಕಳು. ಇಬ್ಬರು ಹೆಣ್ಣು ಮಕ್ಕಳು. ನಟ ಸುದೀಪ್ ಚಿಕ್ಕವರು. ಸರೋಜಾ ಅವರ ಮೃತದೇಹವನ್ನು ಜೆಪಿ ನಗರದ ಇಡಲಾಗಿದ್ದು, ಚಿತ್ರರಂಗದ ಗಣ್ಯರು ಮತ್ತು ಅಭಿಮಾನಿಗಳು ಬಂದು ದರ್ಶನ ಪಡೆಯುತ್ತಿದ್ದಾರೆ.**

ತಮ್ಮ ನಟನೆಯ ಮೇಲೆ ತಾಯಿಯ ಪ್ರಭಾವ ಮತ್ತು ಪ್ರೋತ್ಸಾಹವಿದೆ ಎಂದು ಸುದೀಪ್ ಹೇಳಿದ್ದರು. ತಾಯಿಯ ನಷ್ಟದಿಂದ ಅವನು ಬೇಗನೆ ಚೇತರಿಸಿಕೊಳ್ಳಲೆಂದು ಪ್ರಾರ್ಥಿಸುತ್ತೇನೆ. ಸುದೀಪ್ ಅವರ ಕುಟುಂಬಕ್ಕೆ ನನ್ನ ತೀವ್ರ ಸಂತಾಪಗಳು ಎಂದು ಪವನ್ ಕಲ್ಯಾಣ್ ಹೇಳಿದ್ದಾರೆ.

**ಸುದೀಪ್ ಅವರಿಗೆ ತಮ್ಮ ತಾಯಿ ಸರೋಜಾ ಅಂದರೆ ತುಂಬಾ ಪ್ರೀತಿ. ಇತ್ತೀಚೆಗಷ್ಟೆ ಬಿಗ್‌ಬಾಸ್ ವೇದಿಕೆಯಲ್ಲೂ ತಾಯಿಯನ್ನು ನೆನಪಿಸಿಕೊಂಡಿದ್ದರು. ಈ ಸೀಸನ್‌ನ ಮೊದಲ ವೀಕೆಂಡ್ ಪಂಚಾಯಿತಿಗೆ ಬಂದಿದ್ದ ಸುದೀಪ್, ನವರಾತ್ರಿ ಹಿನ್ನೆಲೆಯಲ್ಲಿ ಶೇರವಾನಿ ಧರಿಸಿ, ಬರಿಗಾಲಲ್ಲಿ ವೇದಿಕೆ ಹತ್ತಿದ್ದರು. ನವರಾತ್ರಿ ಇದ್ದ ಕಾರಣ ತಾವು ಹೀಗೆ ಡ್ರೆಸ್ ಮಾಡಿ ಕೊಂಡು ಬಂದಿದ್ದಾಗಿ ಹೇಳಿದ್ದರು. ಕ್ಯಾಮೆರಾ ನೋಡಿಕೊಂಡು 'ಅಮ್ಮ ನೋಡಿ, ಬರಿಗಾಲಲ್ಲಿ ಬಂದಿದ್ದೀನಿ, ಹಬ್ಬಕ್ಕೆ ತಕ್ಕಂತೆ ಡ್ರೆಸ್ ಮಾಡಿ ಕೊಂಡಿದ್ದೀನಿ' ಎಂದಿದ್ದರು.**

ಅಂದಹಾಗೆ ಸುದೀಪ್ ತಾಯಿ ಸರೋಜಾ ಅವರು ಕಳೆದ ಕೆಲ ತಿಂಗಳಿಂದ ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದರು. ಅವರನ್ನು ಬೆಂಗಳೂರಿನ ಜಯನಗರದ ಅಪೋಲೋ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿತ್ತ. ಆದರೆ, ಚಿಕಿತ್ಸೆ ಫಲಿಸದೇ ಭಾನುವಾರ ಬೆಳಗ್ಗೆ 7 ಗಂಟೆ ಸುಮಾರಿಗೆ ಕೊನೆಯುಸಿರೆಳೆದಿದ್ದಾರೆ.

# ಬಿಬಿಎಂಪಿ: ಶಾಲಾ ಮಕ್ಕಳಿಗೆ ಕಲಿಕಾ ಸುಧಾರಣೆ ಕಾರ್ಯಕ್ರಮ

• **ಉದಯವಾಹಿನಿ, ಬೆಂಗಳೂರು**

ಬಿಬಿಎಂಪಿ ಒಡೆತನದ ನರ್ಸರಿಯಿಂದ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಲ್ಲಿ ಕಲಿಕಾ ಮಟ್ಟವನ್ನು ಹೆಚ್ಚಿಸುವ ಸಲುವಾಗಿ ಪ್ರಥಮ್ ಎಜುಕೇಶನ್ ಫೌಂಡೇಶನ್ ಕಲಿಕಾ ಸುಧಾರಣೆ ಕಾರ್ಯಕ್ರಮವನ್ನು 2023-24 ಶೈಕ್ಷಣಿಕ ಸಾಲಿನಿಂದ ನಡೆಸಲಾಗುತ್ತಿದೆ ಎಂದು ಶಿಕ್ಷಣ ವಿಭಾಗದ ವಿಶೇಷ ಆಯುಕ್ತೆ ಪ್ರೀತಿ ಗೆಹ್ಲೋಟ್ ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

ಬಿಬಿಎಂಪಿಯು ಜೂನ್ 2023ರಿಂದ ನರ್ಸರಿ, 1-3ನೇ ತರಗತಿ, 4-5ನೇ ತರಗತಿ, 6-7ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳಲ್ಲಿ ಕಲಿಕಾ ಮಟ್ಟವನ್ನು ಹೆಚ್ಚಿಸಿ ಫಲಿತಾಂಶ ವೃದ್ಧಿಗೆ ಈ ಕಾರ್ಯಕ್ರಮ ಜಾರಿಗೊಳಿಸುವಲ್ಲಿ ನಿರತವಾಗಿದೆ. ಪ್ರಥಮ್ ಸಂಸ್ಥೆಯು ಅಭಿವೃದ್ಧಿಪಡಿಸಿದ ಬೋಧನಾ-ಕಲಿಕಾ ವಿಧಾನ, ವಿಷಯ/ವಸ್ತು ಮತ್ತು ಕಾರ್ಯಕ್ರಮ ವಿನ್ಯಾಸವನ್ನು ಬಳಸಿಕೊಂಡು ವಿದ್ಯಾರ್ಥಿಗಳಲ್ಲಿ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲಾಗುತ್ತಿದೆ. ಪಾಲಿಕೆ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಲ್ಲಿ ಕಲಿಕೆಯ ಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಶಿಕ್ಷಣ ವಿಭಾಗದ ವಿಶೇಷ ಆಯುಕ್ತೆ ಪ್ರೀತಿ ಗೆಹ್ಲೋಟ್,

**ಬಿಬಿಎಂಪಿಯ 16 ಪ್ರಾಥಮಿಕ ಶಾಲೆಗಳು 93 ನರ್ಸರಿ ಶಾಲೆಗಳಲ್ಲಿ ಈ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆ. ಮಕ್ಕಳಲ್ಲಿ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಯಾವೆಲ್ಲಾ ಕ್ರಮ ಅನುಸರಿಸಬೇಕು, ಏನೆಲ್ಲಾ ಯೋಜನೆಗಳನ್ನು ರೂಪಿಸಬೇಕು ಎಂಬುದರ ಕುರಿತು ಸುಮಾರು 260 ಶಿಕ್ಷಕರಿಗೆ ಮಾರ್ಗದರ್ಶನ ತರಬೇತಿ ನೀಡಲಾಗಿದೆ. ಇದರಿಂದ 7,766 ಮಕ್ಕಳು ಪ್ರಯೋಜನವನ್ನು ಪಡೆಯುತ್ತಿದ್ದಾರೆ. ಇದಕ್ಕಾಗಿ 9 ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ. ಕಲಿಕಾ ಮಟ್ಟಕ್ಕೆ ಅನುಗುಣವಾದ ಬೋಧನಾ - ಟೀಚಿಂಗ್ ಅಟ್ ದಿ ರೈಟ್ ಲೆವೆಲ್ (ಟಿಎಆರ್‌ಎಲ್) ಮಾದರಿಯಲ್ಲಿ ತರಗತಿಯನ್ನು ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.**

ಪ್ರಥಮ್ ಸಂಸ್ಥೆಯ ಸಿಇಒ ಡಾ. ರುಕ್ಮಿಣಿ ಬ್ಯಾನರ್ಜಿ ಅವರ ಜೊತೆ ಚರ್ಚಿಸಿ ಕಲಿಕಾ ಸುಧಾರಣಾ ಕಾರ್ಯಕ್ರಮವನ್ನು ಜಾರಿಗೊಳಿಸಿದ್ದಾರೆ. ಈ ಕಾರ್ಯಕ್ರಮದ ಮೂಲಕ ನರ್ಸರಿಯ ಮಕ್ಕಳಿಂದ ಹಿರಿಯ-ಪ್ರಾಥಮಿಕ ಶ್ರೇಣಿಯವರೆಗೆ ಕಲಿಕೆಯ ಚಟುವಟಿಕೆಗಳಲ್ಲಿ ವಿನೂತನ ಕ್ರಮಗಳನ್ನು ಅಳವಡಿಸಿಕೊಳ್ಳಲಾಗುತ್ತಿದೆ.



## ದಿನಕ್ಕೊಂದು ಮುಕ್ತಕ-1

• **ಉದಯವಾಹಿನಿ, ವಿಶೇಷ**

ಹಸುವನ್ನು ಸಾಕುವರು ತಾಯಾಗಿ ನೋಡುತಲಿ
ಕಸಿಯುವರು ಗೋವುಗಳ ಕಡಿಯಲೆಂದು
ಮಸಿಯನ್ನು ಬಳಿಯದಿರಿ ಹಿಂದೂಗಳೆಸರಿಗೇ
ಪಿಸುನುಡಿಯು ಬೇಡವದು ಲಕ್ಷ್ಮಿದೇವಿ......

**ಭಾವಾರ್ಥ:** ಮೇಲಿನ ಮುಕ್ತಕದಂತೆ ಹಸುವನ್ನು ಸಾಕುವವರು ತಾಯಿಯ ರೂಪದಲ್ಲಿ ಏಕೆಂದರೆ ಎಷ್ಟೋ ಮಕ್ಕಳಿಗೆ ತಾಯಿಯ ಹಾಲು ಇಲ್ಲದಿದ್ದಾಗ ಹಸುವಿನ ಹಾಲನ್ನು ನೀಡಿ ಸಾಕುತ್ತಾರೆ. ತಾಯಿಯಾದವಳು ಮಗುವಾದ ನಂತರದಲ್ಲಿ 9 ತಿಂಗಳು ಹಾಲು ನೀಡಿದರೆ . ಹಸುವು ನಿರಂತರವಾಗಿ ಹಾಲು ನೀಡಿ ತಾಯಿಯಾಗುತ್ತದೆ.

ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಹಸುವಿಗೆ ವಿಶೇಷವಾದ ಸ್ಥಾನವಿದೆ. ಸಕಲ ದೈವವು ಹಸುವಿನ ಒಳಗಡೆ ಇದೆ ಎಂದು ನಂಬಿಕೆ ಇದ್ದು ಅದನ್ನು ಪೂಜಿಸುತ್ತೇವೆ. ತಾಯಿಗೂ, ಹಸುವಿಗೂ ಬೇದ- ಭಾವವನ್ನು ಕಾಣುವುದಿಲ್ಲ. ಮೂಕ ಪ್ರಾಣಿಯಾಗಿದ್ದರೂ ಸಹ ಅದು ಬಹಳಷ್ಟು ಮಹತ್ವವನ್ನು ಒಳಗೊಂಡ ಪ್ರಾಣಿಯಾಗಿದೆ. ಇಂತಹ ಹಸುಗಳನ್ನು ತಮ್ಮ ಆಹಾರಕ್ಕಾಗಿ ಹತ್ಯೆ ಮಾಡಿ ಮಾಂಸ ವನ್ನು ಊಟ ಮಾಡುವುದು ಎಷ್ಟು ಸರಿ.

ನೀವೇ ಯೋಚನೆ ಮಾಡಿ ತಾಯಿಯನ್ನು ಕಡೆದು ಯಾರಾದರೂ ಅದರ ಮಾಂಸವನ್ನು ತಿನ್ನಲು ಸಾಧ್ಯವೇ. ನಮ್ಮ ಹಿಂದೂ ಸಂಸ್ಕೃತಿಗೆ ಒಂದು ಸವಾಲಾಗಿ ನಿಂತಿದೆ ಅದು ಯಾವುದೋ ಪರದೇಶಗಳಲ್ಲಿ ಆಗಿರಬಹುದು, ನಮ್ಮ ಭಾರತ ಸಂಸ್ಕೃತಿಯಲ್ಲಿ ಇದು ನಡೆಯದು. ಯಾವುದೇ ರೀತಿಯ ಪಿಸು ಮಾತನ್ನು ಬಿಟ್ಟು ಸರಿಯಾದ ರೀತಿಯಲ್ಲಿ ಕಾರ್ಯವನ್ನು ಮಾಡುವಂತಹ ಮನೋಭಾವವನ್ನು ಪ್ರತಿಯೊಬ್ಬರು ಹೊಂದಬೇಕು.

■ **ಹೆಚ್.ಎಸ್.ಪ್ರತಿಮಾ ಹಾಸನ್**

# ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಗಂಭೀರ ಆರೋಪ

• **ಉದಯವಾಹಿನಿ, ಬೆಂಗಳೂರು**

ಮುಡಾ ಕೇಸ್ ವಿಚಾರವಾಗಿ ಜಾರಿ ನಿರ್ದೇಶನಾಲಯದ (ಇಡಿ) ಅಧಿಕಾರಿಗಳು ಇತ್ತೀಚೆಗೆ ಮುಡಾ ಕಚೇರಿ ಈ ಪ್ರಕರಣ ಆರೋಪಿಗಳ ಮನೆಗಳ ಮೇಲೆ ದಾಳಿ ನಡೆಸಿ, ದಾಖಲೆ ಪರಿಶೀಲನೆ ನಡೆಸಿದ್ದರು. ಈ ವಿಚಾರವಾಗಿ ಮಾತನಾಡಿರುವ ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಗಂಭೀರ ಆರೋಪ ಮಾಡಿದ್ದಾರೆ.

ಜಾರಿ ನಿರ್ದೇಶನಾಲಯವು ಒಂದು ಸಂಘಟನೆಯ ಹಿಡಿತದಲ್ಲಿದೆ. ಅದನ್ನು ಸಮಯ ಬಂದಾಗ ಬಹಿರಂಗಪಡಿಸುತ್ತೇನೆ ಎಂದು ಶಾಕಿಂಗ್ ವಿಚಾರವೊಂದನ್ನು ಹೇಳಿದ್ದಾರೆ. ದಾಳಿ ನಂತರ ಮುಡಾದಿಂದ ಇಡಿ ಅಧಿಕಾರಿಗಳು ದಾಖಲೆಗಳನ್ನು ತೆಗೆದುಕೊಂಡ ವಿಚಾರವಾಗಿ ವ್ಯಂಗ್ಯ ಕೂಡ ಮಾಡಿದ್ದಾರೆ. ಇಡಿ ಅಧಿಕಾರಿಗಳು ಬಹುಶಃ ನ್ಯೂಸ್ ಪೇಪರ್ ತಗೊಂಡು ಹೋಗಿರ್ತಾರೆ. ಮುಡಾ ಕೇಸ್‌ಗೆ ಸಂಬಂಧಿಸಿದ ದಾಖಲೆಗಳು ಎರಡು ಬ್ಯಾಗ್‌ನಷ್ಟು ಇರೋದಿಲ್ಲ ಎಂದಿದ್ದಾರೆ.

ಮುಡಾ ವಿಚಾರ ರಾಜಕೀಯವಾಗಿ ಹೆಚ್ಚು ಗಮನ ಸೆಳೆದಿರುವುದರಿಂದ ಅದರ ಲಾಭವನ್ನು ಪಡೆಯಲು ಇಡಿ ಅಧಿಕಾರಿಗಳು ಎರಡು ಬ್ಯಾಗ್ ಪ್ರದರ್ಶನ ಮಾಡಿರುತ್ತಾರೆ. ಬಿಜೆಪಿಯವರು ವಿವಿಧ ಕೇಸ್‌ಗಳಲ್ಲಿ ದೋಚಿದಂತೆ ತೋರಿಕೆಗಾಗಿ ಆ ಬ್ಯಾಗ್‌ಗಳನ್ನು ಪ್ರದರ್ಶನ ಮಾಡಿದ್ದಾರೆ ಅನಿಸುತ್ತೆ. ಆ ಜಾರಿ ನಿರ್ದೇಶನಾಲಯವು



ಉದಯವಾಹಿನಿ ಚಿತ್ರ

ಒಂದು ಸಂಘಟನೆಯ ನಿಯಂತ್ರಣದಲ್ಲಿದ್ದು, ಅದನ್ನು ಸಮಯ ಬಂದಾಗ ಹೇಳುತ್ತೇನೆ ಎಂದು ಬಿ.ಕೆ.ಹರಿಪ್ರಸಾದ್ ಹೇಳಿದ್ದಾರೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಸೈಟು ಹಂಚಿಕೆ ವಿಚಾರವು ಇಂದಿನದ್ದಲ್ಲ, ಇದು ಸುಮಾರು 25 ವರ್ಷಗಳಷ್ಟು ಹಳೆದ ಕೇಸ್.

ಇದನ್ನು ಬಿಜೆಪಿಯವರು ಮುಡಾ ಮೂಲಕವೇ ರಾಜಕೀಯ ದ್ವೇಷಕ್ಕೆ ಬಳಸಿಕೊಂಡಿದ್ದಾರೆ ಎಂದು ಆರೋಪ ಮಾಡಿದ್ದಾರೆ. ಇನ್ನು ಬಿಜೆಪಿಯವರ ವಿಚಾರಕ್ಕೆ ಬಂದರೆ ಚುನಾವಣಾ ಬಾಂಡ್, ಪಿಎಂ ಕೇರ್, ನೋಟ್ ಬ್ಯಾನ್ ಹಗರಣಗಳು ನಡೆದಿವೆ. ಹಾಗಾಗಿ ಮುಂದಿನ ಎಲೆಕ್ಷನ್‌ನಲ್ಲಿ ಬಿಜೆಪಿಯವರು ಮೊದಲು ತಮ್ಮ ಪಕ್ಷದ ಹೆಸರು ಬದಲಾಯಿಸಿಕೊಳ್ಳಲಿ.

ಭಾರತೀಯ ಜನತಾ ಪಾರ್ಟಿ ಬದಲಿಗೆ ಭ್ರಷ್ಟಾಚಾರ ಜನತಾ ಪಾರ್ಟಿ ಎಂದು ಹೆಸರು ಬದಲಿಸಿಕೊಳ್ಳಲಿ ಎಂದು ಬಿಕೆ ಹರಿಪ್ರಸಾದ್ ಸಲಹೆ ಕೊಟ್ಟಿದ್ದಾರೆ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

**ಬಿಜೆಪಿ ಪಕ್ಷದ ಜೊತೆಗೆ ಜೆಡಿಎಸ್ ಪಕ್ಷ ಸೇರಿಕೊಂಡಿದೆ. ಹಾಗಾಗಿ ಈಗ ಕಮಲದ ಬದಲಿಗೆ ಬೇರೆ ಹೆಸರಿನಲ್ಲಿ ಆಪರೇಷನ್ ಮಾಡುತ್ತಾರ? ಎಂದು ಕಾದು ನೋಡಬೇಕು. ಕುಮಾರಸ್ವಾಮಿ ಹೇಳಿದಂತೆ ನಮ್ಮ ಕಾಂಗ್ರೆಸ್ ಪಕ್ಷ ಅಷ್ಟೊಂದು ವೀಕ್ ಆಗಿಲ್ಲ. ಹಾಗಾಗಿ ಬಿಜೆಪಿ-ಜೆಡಿಎಸ್ ಪಕ್ಷದವರು ಹಗಲುಗನಸು ಕಾಣೋದ್ರಲ್ಲಿ ತಪ್ಪಿಲ್ಲ ಎಂದು ತಿರುಗೇಟು ನೀಡಿದ್ದಾರೆ.**

ಅವರು ಈ ಕಾಂಗ್ರೆಸ್ ಸರ್ಕಾರ ಐದು ವರ್ಷ ಇರೋದಿಲ್ಲ ಎಂದು ಹೇಳಿದ್ದರು. ಇದಕ್ಕೆ ತಿರುಗೇಟು ನೀಡಿರುವ ಬಿ.ಕೆ.ಹರಿಪ್ರಸಾದ್, ಕುಮಾರಸ್ವಾಮಿ ಅವರು ಬಿಲ್ಲರಂಗನ ಜೊತೆ ಸೇರಿದ್ದಾರೆ ಎಂದು ಬಿಜೆಪಿ-ಜೆಡಿಎಸ್ ಮೈತ್ರಿ ಬಗ್ಗೆ ಕುಟುಕಿದ್ದಾರೆ. ಕಾಂಗ್ರೆಸ್ ಸರ್ಕಾರ ಶೀಘ್ರವೇ ಪತನವಾಗಲಿದೆ. 2028ರೊಳಗೆ ನಾನೇ ಕರ್ನಾಟಕದ ಮುಖ್ಯಮಂತ್ರಿ ಆಗುತ್ತೇನೆ ಎಂದು ಕೇಂದ್ರ ಕುಮಾರಸ್ವಾಮಿ ಹೇಳಿದ್ದಾರೆ. ಇದರ ಅರ್ಥ ನಾವೇ ಸರ್ಕಾರವನ್ನು ಬೀಳಿಸುತ್ತೇವೆ ಎಂದಲ್ಲ. ಸ್ವತಃ ಕಾಂಗ್ರೆಸ್ ಪಕ್ಷದ ಶಾಸಕರೇ ತಮ್ಮ ಪಕ್ಷ ಬೀಳಿಸಲಿದ್ದಾರೆ. ಆಗ ನಾನು ಸಿಎಂ ಆಗುತ್ತೇನೆ ಎಂದು ಕುಮಾರಸ್ವಾಮಿ ಇಂಗಿತ ವ್ಯಕ್ತಪಡಿಸಿದ್ದಾರೆ.



# ರಾಮಾಯಣ

## ವಸಿಷ್ಠನು ಶ್ರೀ ರಾಮ ನ ನ್ನು ವಿಶ್ವಾಮಿತ್ರನ ಸಂಗಡ ಕಳುಹಿಸಲು ದಶರಥನಿಗೆ ಹೇಳಿದುದು

• ಹಿಂದಿನ ಸಂಚಿಕೆಯಿಂದ **13ನೆಯ ಅಧ್ಯಾಯ**

ಮಹಾ ಬಲವಂತರು. ಯಾರಿಗೂ ಅತಿಕ್ರಮಿಸಲಶಕರಾದವರು ಅವರ ಅನುಗ್ರಹದಿಂದ ಸಮಸ್ತ ಶಸ್ತ್ರಾಸ್ತ್ರಗಳನ್ನೂ ವಿಶ್ವಾಮಿತ್ರಮುನೀಶ್ವರನು ವಿಧ್ಯುಕ್ತಪ್ರಕಾರದಲ್ಲಿ ಕಲಿತನು ಅವುಗಳ ಪ್ರಯೋಗದ ಕೌಶಲವನ್ನೂ ಆತನು ಬಲ್ಲನು. ರಾಜ, ಭೂತಭವಿಷ್ಯದ್ವರ್ತಮಾನಕಾಲಗಳಲ್ಲಿಯೂ ಈ ಮುನೀಶ್ವರನು ಅರಿಯದ ವೃತ್ತಾಂತವಿಲ್ಲ. ಈ ಮುನಿಯು ಮಹಾತೇಜಸ್ವಿಯು, ಮಹಾ ಪರಾಕ್ರಮಿಯು, ಅತ್ಯಂತ ಕೀರ್ತಿವಂತನು. ಆದ್ದರಿಂದ ರಘುನಾಥನನ್ನು ಕಳುಹಿಸುವುದಕ್ಕೆ ಸಂಶಯ ಪಡಬೇಡ. ರಾಕ್ಷಸರನ್ನು ನಿಗ್ರಹಿಸುವುದಕ್ಕೆ ವಿಶ್ವಾಮಿತ್ರನೇ ಸಮರ್ಥನು. ಈತನು ಬಿಲ್ಲುಗೊಂಡರೆ ಯುದ್ಧದಲ್ಲಿ ದೇವೇಂದ್ರನಾದರೂ ನಿಲ್ಲಲಾರನು. ಈ ಮುನೀಶ್ವರನು ನಿನ್ನ ಮಗನಿಗೆ ಹಿತವನ್ನು ಮಾಡಬೇಕೆಂಬ ಸದ್ಬುದ್ಧಿಯಿಂದ ಬಂದನಲ್ಲದೆ ಮತ್ತೊಂದಲ್ಲ ಎಂದು ತಿಳುಹಿಸಿದನು. ಆ ಮಾತನ್ನು ಕೇಳಿ ದಶರಥರಾಯನು ಅತ್ಯಂತ ಹರ್ಷದಿಂದ ರಘುನಾಥನನ್ನು ವಿಶ್ವಾಮಿತ್ರ ಮುನಿಯ ಜೊತೆಗೆ ಕಳುಹಿಸಲು ನಿಶ್ಚಯಮಾಡಿಕೊಂಡನು.

### ರಾಮ ಲಕ್ಷಣರು ವಿಶ್ವಾಮಿತ್ರನ ಹಿಂದೆ ಹೊರಟದ್ದು

ಆ ಬಳಿಕ ವಸಿಷ್ಠ ಮುನೀಶ್ವರನ ಮಾತನ್ನು ಕೇಳಿ ದಶರಥರಾಯನು ಸಂತೋಷಯುಕ್ತನಾಗಿ ಲಕ್ಷ್ಮಣಸಮೇತನಾದ ರಘುನಾಥನನ್ನು ಕರೆದು ಪ್ರಯಾಣ ಕಾಲೋಚಿತವಾದ ಶಾಂತಿಕರ್ಮಗಳನ್ನು ಮಾಡಿ ಕಳುಹಿಸಿದನು. ರಾಮಲಕ್ಷ್ಮಣರು ತಮ್ಮ ತಾಯಂದಿರಾದ ಕೌಸಲ್ಯಾ ಕೈಕೇಯಾ ಸುಮಿತ್ರಾದೇವಿಯರಿಗೆ ಅಭಿವಂದಿಸಿ ಅವರ ಆಶೀರ್ವಾದಗಳನ್ನು ಪಡೆದು ವಾಮದೇವಾದಿ ಋಷಿಗಳಿಗೆ ಅಭಿನಂದಿಸಿ ಅವರ ಆಶೀರ್ವಾದವನ್ನು ಪಡೆದರು ಅನಂತರ ಪ್ರಯಾಣಕ್ಕೆ ಅನುಕೂಲವಾಗಿ ಶೈತ್ಯ ಸೌರಭ್ಯ ಮಾಂದ್ಯಯುಕ್ತವಾದ ತಂಗಾಳಿಯು ತೀಡುತ್ತಿರಲು, ಬತ್ತಳಿಕೆಗಳನ್ನು ಧರಿಸಿಕೊಂಡು ಬಿಲ್ಲುಗಳನ್ನು ಕೈಗಳಲ್ಲಿ ಹಿಡಿದು ತಮ್ಮ ಶರೀರಕಾಂತಿಯಿಂದ ದಶದಿಕ್ಕುಗಳನ್ನೂ ಬೆಳಗಿಸುತ್ತ, ಸಹಸ್ರ ಶಿರಸ್ಸುಗಳುಳ್ಳ ಶೇಷನೋ ಎಂಬಂತೆ ವಿಶ್ವಾಮಿತ್ರನ ಹಿಂದೆ ತೆರಳಿದರು. ಸರ್ವಲಕ್ಷಣಸಂಪನ್ನರೂ ಸರ್ವಾಲಂಕಾರವುಳ್ಳವರೂ ಅತ್ಯಂತತೇಜಸ್ವಿಗಳೂ ಆದ ರಾಮಲಕ್ಷ್ಮಣರು ತಮ್ಮ ಕಾಂತಿಯಿಂದ ವಿಶ್ವಾಮಿತ್ರಮುನೀಶ್ವರನನ್ನೂ ಪ್ರಕಾಶಗೊಳಿಸುತ್ತಿದ್ದರು. ಮುಂಗೈ ಬೆರಳುಗಳ ರಕ್ಷಣಾರ್ಥವಾಗಿ ಕೈಹೊಡೆಗಳನ್ನು ಕಟ್ಟಿಕೊಂಡು ಆಯುಧಗಳನ್ನು ಕೈಗಳಲ್ಲಿ ಹಿಡಿದುಕೊಂಡು ಖಡ್ಗಗಳನ್ನು ಹಿಡಿದು ಮಹಾತೇಜಸ್ವಿಗಳಾಗಿ ಮನೋಹರವಾದ ಶರೀರವುಳ್ಳ ರಾಮಲಕ್ಷ್ಮಣರು ವಿಶ್ವಾಮಿತ್ರಮುನೀಶ್ವರನ ಹಿಂದೆ ಹೋದರು. ಆಗ ಅವರು ಅಶ್ವಿನೀದೇವತೆಗಳು ಬ್ರಹ್ಮದೇವನ ಹಿಂದೆ ಹೋಗುವಂತೆಯೂ ವಿಶ್ವೇಶ್ವರ ಷಣ್ಮುಖರು ಅಪರಿಮಿತವಾದ ಮಹಿಮೆಯುಳ್ಳ ಪರಮೇಶ್ವರನ ಹಿಂದೆ ಹೋಗುವಂತೆಯೂ ಒಪ್ಪುತ್ತಿದ್ದರು, ಬಳಿಕ ರಾಮಲಕ್ಷ್ಮಣಸಮೇತನಾಗಿ ವಿಶ್ವಾಮಿತ್ರಮುನೀಶ್ವರನು ಅರ್ಧಗಾವುದ ದೂರ ಹೋಗಿ ಸರಯೂನದೀತೀರದಲ್ಲಿ ನಿಂತು ರಾಮಚಂದ್ರನನ್ನು ನೋಡಿ ''ರಾಮಚಂದ್ರ, ಈ ಸರಯೂ ನದಿಯಲ್ಲಿ ಉದಕವನ್ನು ತೆಗೆದುಕೊ ಕಾಲವನ್ನು ಅತಿಕ್ರಮಿಸಬೇಡ.

ಮುಂದುವರಿಯುವುದು...

# ಕೆಎ-01 ರಿಂದ 70ರವರೆಗೆ ವಾಹನ ಯಾವ ಜಿಲ್ಲೆ, ತಾಲ್ಲೂಕಿಗೆ ಸೇರಿದ್ದು ಗೊತ್ತಾ?

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದಲ್ಲಿ ಜಿಲ್ಲೆ, ತಾಲ್ಲೂಕು ಮಟ್ಟದ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ವಾಹನಗಳ ನೋಂದಣಿಯಾಗುತ್ತಿವೆ. ಒಂದೊಂದು ಜಿಲ್ಲೆ, ತಾಲ್ಲೂಕಿನ ವಾಹನಗಳಿಗೂ ಒಂದೊಂದು ನೋಂದಣಿ ಸಂಖ್ಯೆ ಇರಲಿದೆ.

ಸಾರ್ವಜನಿಕರು, ವಾಹನ ಸವಾರರು ತಮ್ಮ ಜಿಲ್ಲೆ, ತಾಲ್ಲೂಕಿನ ವಾಹನಗಳ ಬಗ್ಗೆ ಬಹುತೇಕ ತಿಳಿದಿರುತ್ತಾರೆ. ಆದರೇ ಕರ್ನಾಟಕದಲ್ಲಿ ಕೆಎ-01ರಿಂದ ಹಿಡಿದು ಕೆಎ -70ರವರೆಗೆ ನೋಂದಣಿ ಸಂಖ್ಯೆಗಳಿದ್ದಾವೆ ಎಂಬುದು ಗೊತ್ತಿದ್ಯಾ. ಅವುಗಳು ಯಾವ ಜಿಲ್ಲೆ, ತಾಲ್ಲೂಕಿಗೆ ಸೇರಿದ್ದಾವೆ.

ಕರ್ನಾಟಕದಲ್ಲಿ ವಾಹನಗಳ ನೋಂದಣಿ ಕೆಎ 01ರಿಂದ ಆರಂಭಗೊಂಡು, ಕೆಎ 70ರವರೆಗೆ ಸಾಗಿದೆ. ಕೆಎ 01 ಬೆಂಗಳೂರು ಕೇಂದ್ರದ ಕೋರಮಂಗಲ ವ್ಯಾಪ್ತಿಯ ಪ್ರಾದೇಶಿಕ ಸಾರಿಗೆ ವಿಭಾಗದಲ್ಲಿ ನೋಂದಾಯಿಸಿಕೊಂಡಿರುವಂತ ವಾಹನವಾಗಿರುತ್ತದೆ. ಅದೇ ಕೊನೆಯ ನೋಂದಣಿ ಸಂಖ್ಯೆ ಕೆಎ 70 ಬಂಟ್ವಾಳ ತಾಲ್ಲೂಕಿನ ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ನೋಂದಣಿ ಮಾಡಿಸಿಕೊಂಡಿರುವಂತ ವಾಹನವಾಗಿರುತ್ತದೆ.

ಹೀಗಿದೆ ಕೆಎ-01ರಿಂದ ಹಿಡಿದು ಕೆಎ-70ರವರೆಗೆ ಯಾವ ಜಿಲ್ಲೆ, ತಾಲ್ಲೂಕಿಗೆ ವಾಹನ ಸೇರಿದ್ದು ಎನ್ನುವ ಮಾಹಿತಿ

ಕೆಎ-01 ಬೆಂಗಳೂರು ಕೇಂದ್ರ, ಕೋರಮಂಗಲ
ಕೆಎ-02 ಬೆಂಗಳೂರು ಪಶ್ಚಿಮ, ರಾಜಾಜಿನಗರ
ಕೆಎ-03 ಬೆಂಗಳೂರು ಪೂರ್ವ, ಇಂದಿರಾನಗರ
ಕೆಎ-04 ಬೆಂಗಳೂರು ಉತ್ತರ, ಯಶವಂತಪುರ
ಕೆಎ-05 ಬೆಂಗಳೂರು ದಕ್ಷಿಣ, ಜಯನಗರ 4ನೇ ಬ್ಲಾಕ್
ಕೆಎ-06 ತುಮಕೂರು
ಕೆಎ-07 ಕೋಲಾರ
ಕೆಎ-08 ಕೋಲಾರ್ ಗೋಲ್ಡ್ ಫೀಲ್ಡ್ (KGF)
ಕೆಎ-09 ಮೈಸೂರು ಪಶ್ಚಿಮ

# ಶಿಗ್ಗಾವಿಯಲ್ಲಿ ಬಿಜೆಪಿ ಟಿಕೆಟ್ ಸಿಕ್ಕಿದೆ: ಬೊಮ್ಮಾಯಿ

## ಚನ್ನಪಟ್ಟಣ ಬಿಟ್ಟು ಉಳಿದ ಎರಡು ಕ್ಷೇತ್ರಗಳಿಗೆ ಬಿಜೆಪಿ ಅಭ್ಯರ್ಥಿಗಳನ್ನು ಘೋಷಣೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಮೂರು ಕ್ಷೇತ್ರಗಳಿಗೆ ಉಪ ಚುನಾವಣೆ ಘೋಷಣೆ ಆಗಿದೆ. ಮತದಾನಕ್ಕೆ ಮುಹೂರ್ತ ಫಿಕ್ಸ್ ಆಗುತ್ತಿದ್ದಂತೆ ಚನ್ನಪಟ್ಟಣ ಬಿಟ್ಟು ಉಳಿದ ಎರಡು ಕ್ಷೇತ್ರಗಳಿಗೆ ಬಿಜೆಪಿ ಅಭ್ಯರ್ಥಿಗಳನ್ನು ಘೋಷಣೆ ಮಾಡಿದೆ. ಶಿಗ್ಗಾವಿ ಕ್ಷೇತ್ರದಲ್ಲಿ ಸಂಸದ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಪುತ್ರ ಭರತ್ ಅವರಿಗೆ ಟಿಕೆಟ್ ನೀಡಿರುವುದು ಬಿಜೆಪಿ ಕುಟುಂಬ ರಾಜಕಾರಣದ ಕಿಡಿ ಹೊತ್ತಿಸಿದೆ.



ಉದಯವಾಹಿನಿ ಚಿತ್ರ

## ಜನರು ನನಗೆ ಆಶೀರ್ವಾದ ಮಾಡುವ ವಿಶ್ವಾಸ

ಬೆಂಗಳೂರಿನಲ್ಲಿ ಭಾನುವಾರರ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು, ಶಿಗ್ಗಾವಿ ಸವಣೂರು ಕ್ಷೇತ್ರಕ್ಕೆ ನನ್ನನ್ನು ಬಿಜೆಪಿ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದ ನಾಯಕರಾದ ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರೀಯ ಅಧ್ಯಕ್ಷರಾದ ಜೆ.ಪಿ. ನಡ್ಡಾ, ಕೇಂದ್ರ ಗೃಹ ಸಚಿವರಾದ ಅಮಿತ್ ಶಾ, ರಾಜ್ಯ ಉಸ್ತುವಾರಿ ರಾಧಾಮೋಹನ್ ಅಗರವಾಲ್ ಅವರಿಗೆ ಅಭಿನಂದನೆ ತಿಳಿಸಿದರು. ನನ್ನ ಮೇಲೆ ವಿಶ್ವಾಸ ಇಟ್ಟು ಟಿಕೆಟ್ ನೀಡಿದ ಕೇಂದ್ರ ನಾಯಕರಿಗೆ, ರಾಜ್ಯದ ನಾಯಕರಾದ ಮಾಜಿ ಸಿಎಂ ಬಿ. ಎಸ್. ಯಡಿಯೂರಪ್ಪ, ಪಕ್ಷದ ರಾಜ್ಯಾಧ್ಯಕ್ಷ ವಿಜಯೇಂದ್ರ, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶು ಅವರಿಗೆ ಧನ್ಯವಾದ ಹೇಳಿದ್ದಾರೆ.

ನಮ್ಮ ತಂದೆ ತಾಯಿಯ ಆಶೀರ್ವಾದದ ಫಲದಿಂದ ನನಗೆ ಈ ಅವಕಾಶ ಸಿಕ್ಕಿದೆ. ನಮ್ಮ ತಂದೆ ಶಿಗ್ಗಾವಿ ಸವಣೂರಿನಲ್ಲಿ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಅವರು ಕ್ಷೇತ್ರದಲ್ಲಿ ಮಾಡಿರುವ

**ನಾನು 2018 ರಿಂದ ತಂದೆಯ ಪರವಾಗಿ ಚುನಾವಣೆಯಲ್ಲಿ ಕೆಲಸ ಮಾಡಿದ್ದೇನೆ. 2023 ರ ವಿಧಾನಸಭೆ ಚುನಾವಣೆಯಲ್ಲಿ ಮನೆ ಮನೆಗೆ ತೆರಳಿ ತಂದೆಯ ಪರವಾಗಿ ಪ್ರಚಾರ ಮಾಡಿದ್ದೇನೆ. ಕಳೆದ ಎಂಪಿ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ಓಡಾಡಿದ್ದು, ಜನರ ನಾಡಿಮಿಡಿತ ಗೊತ್ತಿದೆ. ನಿರಂತರವಾಈಗ ಶಿಗ್ಗಾವಿ ಸವಣೂರು ಕ್ಷೇತ್ರದ ಎಲ್ಲಾ ಜನರೊಂದಿಗೆ ಸಂಪರ್ಕದಲ್ಲಿದ್ದೇನೆ. ತಂದೆಯವರು ಸಚಿವರಿದ್ದಾಗ ಸಿಎಂ ಇದ್ದಾಗ ನಾನು ನನ್ನ ಕೈಲಾದ ಕೆಲಸ ಮಾಡಿದ್ದೇನೆ ಎಂದು ಅವರು ತಮ್ಮ ರಾಜಕೀಯ ಅನುಭವ ಹೇಳಿಕೊಂಡಿದ್ದಾರೆ.**

ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿಕೊಂಡು, ಅಲ್ಲಿನ ಜನರ ಅಪೇಕ್ಷೆಯಂತೆ ನಮ್ಮ ಪಕ್ಷದ ವರಿಷ್ಠರು ನನಗೆ ಟಿಕೆಟ್ ನೀಡಲಾಗಿದೆ.

**ಶಿಗ್ಗಾವಿ ಸವಣೂರು ಕ್ಷೇತ್ರದಲ್ಲಿ ಸಾಕಷ್ಟು ಜನ ಟಿಕೆಟ್ ಆಕಾಂಕ್ಷಿಗಳಿದ್ದರು. ಅವರೆಲ್ಲರೂ ನಮ್ಮೊಂದಿಗಿದ್ದಾರೆ. ಎಲ್ಲರೂ ಸೇರಿಯೇ ಚುನಾವಣೆ ಎದುರಿಸಿ ಗೆಲುವು ಸಾಧಿಸುತ್ತೇವೆ. ಯಾವುದೇ ಉಪ ಚುನಾವಣೆ ಎದುರಿಸುವುದು ಕಷ್ಟಾನೇ, ಆದರೆ ನಮ್ಮ ತಂದೆಯವರು ಮಾಡಿದ ಕೆಲಸ ಹಾಗೂ ನಾನು ತಂದೆಯವರ ಜೊತೆಗೆ ಕೆಲಸ ಮಾಡಿದ್ದರಿಂದ ಶಿಗ್ಗಾವಿ ಸವಣೂರಿನ ಜನರು ನನಗೆ ಆಶೀರ್ವಾದ ಮಾಡುವ ವಿಶ್ವಾಸ ನನಗಿದೆ ಎಂದು ಅವರು ವಿವರಿಸಿದರು.**

ತಂದೆಯವರು ಮಾಡಿರುವ ಎಲ್ಲಾ ಅಭಿವೃದ್ಧಿ ಕೆಲಸಗಳನ್ನು ನಾನು ಮುಂದುವರೆಸಿಕೊಂಡು ಹೋಗುತ್ತೇನೆ. ಶಿಗ್ಗಾವಿ ಸವಣೂರಿನ ಜನತೆಯ ಕಷ್ಟ ಸುಖದಲ್ಲಿ ನಾನು ಸದಾಕಾಲ ಇರುತ್ತೇನೆ ಎಂದು ಭರವಸೆ ನೀಡಿದ್ದಾರೆ. ತಮಗೆ ಯಾವ ಮಾನದಂಡದಲ್ಲಿ ಟಿಕೆಟ್ ನೀಡಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ಯಾರ ಬಳಿ ಟಿಕೆಟ್ ಕೇಳಿರಲಿಲ್ಲ, ವರಿಷ್ಠರು ಲೆಕ್ಕಾಚಾರ ಮಾಡಿ ಒಂದು ತೀರ್ಮಾನ ಮಾಡಿದ್ದಾರೆ. ಕೇಂದ್ರ ಹೈಕಮಾಂಡ್ ತೀರ್ಮಾನಕ್ಕೆ ನಾವು ಬದ್ದರಾಗಿದ್ದೇವೆ ಎಂದು ಅವರು ಟಿಕೆಟ್ ಪಡೆಯುವಲ್ಲಿ ತಂದೆ ಬಸವರಾಜ ಬೊಮ್ಮಾಯಿ, ತಮ್ಮ ಪಾತ್ರ ಇಲ್ಲ ಎಂದು ಅವರು ಸ್ಪಷ್ಟಿಸಿದರು.

# ಸಂಸದ ಚಂದ್ರ ಆರ್ಯರವರಿಗೆ ಪೊಲೀಸ್ ಅಧಿಕಾರಿಗಳ ಭದ್ರತೆ

## ಕೆನಡಾದಲ್ಲಿ ಹಿಂದೂಗಳಿಗೆ ಭಯದ ವಾತಾವರಣ: ಕರ್ನಾಟಕ ಮೂಲದ ಸಂಸದ ಚಂದ್ರ ಆರ್ಯ ಕಳವಳ



**ಟೊರಾಂಟೋ:** ಖಲಿಸ್ತಾನ್ ಪ್ರತ್ಯೇಕತಾವಾದಿ ಉಗ್ರಗಾಮಿಗಳ ಆರ್ಭಟ ಕೆನಡಾ ದೇಶದಲ್ಲಿ ತೀವ್ರಗೊಳ್ಳುತ್ತಿದೆ ಎಂದು ಭಾರತೀಯ ಮೂಲದ ಕೆನಡಾ ಸಂಸದ ಚಂದ್ರ ಆರ್ಯ ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಕೆನಡಾದಲ್ಲಿ ಹಿಂದೂಗಳ ಸುರಕ್ಷತೆ ಕುರಿತಾಗಿಯೂ ಅವರು ಆತಂಕ ವ್ಯಕ್ತಪಡಿಸಿದ್ದಾರೆ. ಈ ರೀತಿಯ ಬೆದರಿಕೆಗಳನ್ನು ನಾನೂ ಎದುರಿಸಿದ್ದೇನೆ ಎಂದು ಕರ್ನಾಟಕ ಮೂಲದವರೂ ಆದ ಚಂದ್ರ ಆರ್ಯ ಅವರು ಹೇಳಿಕೊಂಡಿದ್ದಾರೆ.

ಮೂಲತಃ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನವರಾದ ಚಂದ್ರ ಆರ್ಯ ಅವರು 2006ರಿಂದ ಕೆನಡಾದಲ್ಲಿದ್ದಾರೆ. ಹಂತ ಹಂತವಾಗಿ ತಮ್ಮ ಔದ್ಯೋಗಿಕ ಜೀವನದಲ್ಲಿ ಏಳಿಗೆ ಕಂಡು ಇದೀಗ ಕೆನಡಾ ಸಂಸದರಾಗಿರುವ ಚಂದ್ರ ಆರ್ಯ ಅವರು, ಕೆನಡಾ ದೇಶದಲ್ಲಿ ಹೆಚ್ಚುತ್ತಿರುವ ಖಲಿಸ್ತಾನ್ ಪ್ರತ್ಯೇಕವಾದದ ಕುರಿತಾಗಿ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ಅವರನ್ನು ಉದ್ದೇಶಿಸಿ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸುದೀರ್ಘವಾಗಿ ವಿವರಿಸಿದ್ದಾರೆ. ಹಿಂದೂ ಸಮುದಾಯಕ್ಕೆ ಬೆದರಿಕೆ ಒಡ್ಡುತ್ತಿರುವ ಖಲಿಸ್ತಾನಿ ಗುಂಪುಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಚಂದ್ರ ಆರ್ಯ ಆಗ್ರಹಿಸಿದ್ದಾರೆ. ಖಲಿಸ್ತಾನಿ ಪ್ರತ್ಯೇಕತಾವಾದಿಗಳಿಂದ ತಾವು ಎದುರಿಸಿದ ಬೆದರಿಕೆಯನ್ನೂ ಚಂದ್ರ ಆರ್ಯ ವಿವರಿಸಿದ್ದಾರೆ. ಕಳೆದ ವಾರ ನಾನು ಕೆನಡಾದ ಎಡ್ಮಂಟನ್ ನಗರದಲ್ಲಿ ಹಿಂದೂ ಸಮುದಾಯದ ಕಾರ್ಯಕ್ರಮವೊಂದರಲ್ಲಿ ಭಾಗಿಯಾಗಿದ್ದೆ.

ನನಗೆ ರಾಯಲ್ ಕೆನಡಾ ಮೌಂಟೆಡ್ ಪೊಲೀಸ್ ಅಧಿಕಾರಿಗಳು ಭದ್ರತೆ ನೀಡಿದ್ದರು. ಆದಾಗ್ಯೂ ಖಲಿಸ್ತಾನಿ ಪ್ರತ್ಯೇಕತಾವಾದಿ ಗುಂಪುಗಳ ಸದಸ್ಯರು ನನ್ನ ವಿರುದ್ಧ ಪ್ರತಿಭಟನೆ ನಡೆಸಿದರು. ಇದು ಭದ್ರತೆಗೇ ಆತಂಕ ತಂದೊಡ್ಡುವ ಬೆಳವಣಿಗೆ' ಎಂದು ಚಂದ್ರ ಆರ್ಯ ಅವರು ವಿವರಿಸಿದ್ದಾರೆ.

ಈ ಕುರಿತಾಗಿ ವಿಡಿಯೋ ಕೂಡಾ ಪೋಸ್ಟ್ ಮಾಡಿರುವ ಚಂದ್ರ ಆರ್ಯ ಅವರು, ಭಯೋತ್ಪಾದಕನೆ, ಪ್ರತ್ಯೇಕವಾದಿ ಚಟುವಟಿಕೆಗಳಿಂದ ನಲುಗಿರುವ ದೇಶಗಳ ಜೊತೆಗೆ ಕೆನಡಾ ಸರ್ಕಾರ ಕಾರ್ಯ ನಿರ್ವಹಿಸಬೇಕು. ತನ್ನ ಪ್ರಜೆಗಳ ರಕ್ಷಣೆ ವಿಚಾರದಲ್ಲಿ ಗಮನ ಹರಿಸಬೇಕು ಎಂದು ಮನವಿ ಮಾಡಿದ್ದಾರೆ.

**ಪ್ರಜೆಗಳ ರಕ್ಷಣೆ ವಿಚಾರದಲ್ಲಿ ಗಮನ ಹರಿಸಿ**

### ಭಾರತ-ಕೆನಡಾ ರಾಜತಾಂತ್ರಿಕ ಸಮರದ ಹೊತ್ತಲ್ಲೇ ಚಂದ್ರ ಆರ್ಯ ದನಿ

**2023ರಲ್ಲಿ ಕೆನಡಾದ ಗುರುದ್ವಾರ ಒಂದರ ಬಳಿ ಹತ್ಯೆಗೀಡಾದ ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜರ್ ಪ್ರಕರಣ ಭಾರತ ಹಾಗೂ ಕೆನಡಾ ದೇಶಗಳ ನಡುವೆ ರಾಜತಾಂತ್ರಿಕ ಸಮರಕ್ಕೆ ಕಾರಣವಾಗಿದೆ. ನಿಜ್ಜರ್ ಹತ್ಯೆಯಲ್ಲಿ ಭಾರತ ಸರ್ಕಾರದ ಏಜೆಂಟರು, ಲಾರೆನ್ಸ್ ಬಿಷ್ಣೋಯಿ ತಂಡದ ಪಾತ್ರವಿದೆ ಎಂದು ಕೆನಡಾ ಬಹಿರಂಗ ಆರೋಪ ಮಾಡಿದೆ. ಆದರೆ ಈ ಕುರಿತಾಗಿ ತನಗೆ ಬೇಹುಗಾರಿಕಾ ಮಾಹಿತಿಯಷ್ಟೇ ಇದ್ದು, ಸೂಕ್ತ ಸಾಕ್ಷ್ಯಾಧಾರ ಇಲ್ಲ ಎಂದೂ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ಒಪ್ಪಿಕೊಂಡಿದ್ದಾರೆ. ಈ ವಿಚಾರ ಉಭಯ ದೇಶಗಳ ನಡುವೆ ರಾಜತಾಂತ್ರಿಕ ಸಮರಕ್ಕೆ ಕಾರಣವಾಗಿದೆ. ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ವೋಟ್ ಬ್ಯಾಂಕ್ ರಾಜಕಾರಣಕ್ಕಾಗಿ ಖಲಿಸ್ತಾನ್ ಉಗ್ರರ ಪರ ನಿಂತಿದ್ದಾರೆ ಅನ್ನೋ ಆರೋಪಗಳು ಇರುವ ಬೆನ್ನಲ್ಲೇ ಕೆನಡಾ ಪ್ರಜೆ, ಅಲ್ಲಿ ಸಂಸದರೇ ಇದೀಗ ಖಲಿಸ್ತಾನಿಗಳ ವಿರುದ್ಧ ದನಿ ಎತ್ತಿದ್ದಾರೆ.**

**ಭಾರತದ ಪಾಲಿಗೆ ಕೆನಡಾ ದೇಶ 'ಹೊಸ ಪಾಕಿಸ್ತಾನ' ಆಗುತ್ತಿದೆ. ಭಾರತ ವಿರೋಧಿ ಖಲಿಸ್ತಾನಿ ಹೋರಾಟಗಾರರಿಗೆ ನೆಲೆ ನೀಡಿ ಬಹಿರಂಗವಾಗಿ ಸಮರ್ಥನೆ ಮಾಡಿಕೊಳ್ಳುತ್ತಿರುವ ಕೆನಡಾ ಸರ್ಕಾರ, ಕೆನಡಾ ಖಲಿಸ್ತಾನಿಗಳ ಹತ್ಯೆಗೆ ಭಾರತ ಕಾರಣ ಅನ್ನೋ ಮಿಥ್ಯಾರೋಪವನ್ನೂ ಮಾಡುತ್ತಿದೆ. ಇದರ ಬೆನ್ನಲ್ಲೇ ಕೆನಡಾದ ಸಂಸದ ಭಾರತೀಯ ಮೂಲದ ಚಂದ್ರ ಆರ್ಯ ಅವರು ಖಲಿಸ್ತಾನಿಗಳ ವಿರುದ್ಧ ದನಿ ಎತ್ತಿದ್ದು, ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.**

# ನನ್ನ ಹತ್ಯೆಗೆ ಯತ್ನಿಸಿದ ಹಿಜ್ಬುಲ್ಲಾ ಭಾರೀ ಬೆಲೆ ತೆರಬೇಕಾಗುತ್ತದೆ: ನೆತನ್ಯಾಹು



**ನನ್ನನ್ನು, ನನ್ನ ಪತ್ನಿಯನ್ನು ಹತ್ಯೆ ಮಾಡಲು ಇರಾನ್ನ ಪ್ರಾಕ್ಸಿ ಹಿಜ್ಬುಲ್ಲಾ ನಡೆಸಿದ ಪ್ರಯತ್ನವು ಒಂದು ದೊಡ್ಡ ತಪ್ಪು. ಇದು ನಮ್ಮ ಭವಿಷ್ಯವನ್ನು ಭದ್ರಪಡಿಸುವ ಸಲುವಾಗಿ ನಮ್ಮ ಶತ್ರುಗಳ ವಿರುದ್ಧ ನಮ್ಮ ನ್ಯಾಯಯುತ ಯುದ್ಧವನ್ನು ಮುಂದುವರಿಸುವುದರಿಂದ ನನ್ನನ್ನಾಗಲೀ ಅಥವಾ ಇಸ್ರೇಲ್ ರಾಷ್ಟ್ರವನ್ನಾಗಲೀ ತಡೆಯಲು ಸಾಧ್ಯವಿಲ್ಲ ಎಂದರು.**

**ಜೆರುಸಲೇಂ:** ನನ್ನನ್ನು ಹತ್ಯೆಗೈಯಲು ಯತ್ನಿಸಿ ಹಿಜ್ಬುಲ್ಲಾ ಸಂಘಟನೆ ಘೋರ ತಪ್ಪು ಮಾಡಿದೆ, ಇದಕ್ಕೆ ಭಾರೀ ಬೆಲೆ ತೆರಬೇಕಾಗುತ್ತದೆ ಎಂದು ಇಸ್ರೇಲ್ ಪ್ರಧಾನಮಂತ್ರಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಇಸ್ರೇಲ್ ಕರಾವಳಿಯ ಕೆಸರಿಯಾ ನಗರದಲ್ಲಿರುವ ತಮ್ಮ ಖಾಸಗಿ ನಿವಾಸದ ಮೇಲೆ ಹಿಜ್ಬುಲ್ಲಾ ನಡೆಸಿದ ಡ್ರೋನ್ ದಾಳಿಯ ಬಗ್ಗೆ ಕುರಿತು ನೆತನ್ಯಾಹು ಅವರು ಪ್ರತಿಕ್ರಿಯೆ ನೀಡಿದ್ದಾರೆ. ದಾಳಿ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಹಿಜ್ಬುಲ್ಲಾ ಸಂಘಟನೆಯನ್ನು ಇರಾನ್ನ ಪ್ರಾಕ್ಸಿ ಎಂದು ಉಲ್ಲೇಖಿಸಿದ್ದು, ನನ್ನ ಮೇಲಿನ ಈ ಹತ್ಯೆ ಪ್ರಯತ್ನವು ನನ್ನನ್ನಾಗಲೀ, ಇಸ್ರೇಲ್ ಯುದ್ಧವನ್ನು ಮುಂದುವರೆಸುವುದನ್ನಾಗಲೀ ತಡೆ ಯಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಖಾಸಗಿ ನಿವಾಸದ ಮೇಲೆಯೇ ಏಕಾಏಕಿ ಡ್ರೋನ್ ದಾಳಿ ನಡೆದಿತ್ತು. ಆದರೆ, ಯಾವುದೇ ಹಾನಿ ಸಂಭವಿಸಿಲ್ಲ ಎಂದು ಅಲ್ಲಿನ ಮಾಧ್ಯಮಗಳು ವರದಿ ಮಾಡಿವೆ.

ಲೆಬನಾನ್‌ನಿಂದ ಈ ಡ್ರೋನ್ ದಾಳಿ ನಡೆದಿದ್ದು, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಖಾಸಗಿ ನಿವಾಸದ ಮೇಲೆ ಉಡಾಯಿಸಲಾಗಿದೆ. ಈ ವೇಳೆ ನೆತನ್ಯಾಹು ಮತ್ತು ಅವರ ಪತ್ನಿ ಸಾರಾ ಮನೆಯಲ್ಲಿ ಇರಲಿಲ್ಲ ಎಂದು ಇಸ್ರೇಲ್ ಪ್ರಧಾನ ಮಂತ್ರಿ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ. ಲೆಬನಾನ್‌ನಿಂದ ಹಾರಿಬಿಟ್ಟ ಡ್ರೋನ್‌ಗಳನ್ನು ಇಸ್ರೇಲ್‌ನ ವಾಯು ರಕ್ಷಣೆಯಾದ ಐರನ್ಡೋಮ್ ಹೊಡೆದು ಹಾಕಿದೆ. ಬಳಿಕ ರಾಜಧಾನಿ ಟೆಲ್ ಅವಿವ್‌ನಲ್ಲಿ ಎಚ್ಚರಿಕೆ ಗಂಟೆ ಕೂಗಿ ಸಲಾಗಿದೆ. ಹೈಫ್ ಕೊಲ್ಲಿ ಪ್ರದೇಶದಲ್ಲೂ ರಾಕೆಟ್‌ಗಳು ಹಾರಿ ಬರುತ್ತಿರುವ ಕಾರಣ ಸೈರನ್ ಮೊಳಗಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಹಿಂದೆ ಎಕ್ಸ್ ಖಾತೆಯಲ್ಲಿ ವಿಡಿಯೋ ಹಂಚಿಕೊಂಡ ನೆತನ್ಯಾಹು ಅವರು, ಹಮಾಸ್ ನಾಯಕ ಯಾಹ್ಯಾ ಸಿನ್ವಾರ್‌ನನ್ನು ಹೊಡೆದು ಹಾಕಲಾಗಿದೆ.

ಇಸ್ರೇಲಿ ರಕ್ಷಣಾ ಪಡೆಗಳ ಕೆಚ್ಚೆದೆಯ ಸೈನಿಕರ ದಾಳಿಗೆ ಆತ ಸಾವನ್ನಪ್ಪಿದ್ದಾನೆ. ಇದು ಗಾಜಾದಲ್ಲಿ ಯುದ್ಧದ ಅಂತ್ಯವಲ್ಲ, ಅಂತ್ಯದ ಆರಂಭ. ಗಾಜಾದ ಜನರೇ, ಯುದ್ಧ ನಿಲ್ಲಲು ನನ್ನ ಬಳಿ ಒಂದು ಸರಳ ಉಪಾಯವಿದೆ. ಅದೇನೆಂದರೆ, ಹಮಾಸ್ ಉಗ್ರರು ಶಸ್ತ್ರಾಸ್ತ್ರಗಳನ್ನು ತ್ಯಜಿಸಿ ಶರಣಾಗಲಿ, ನಮ್ಮವರನ್ನು ಹಿಂದಿರುಗಿಸಿದರೆ ಸಂಘರ್ಷ ಕೊನೆಗೊಳ್ಳಲಿದೆ ಎಂದು ಹೇಳಿದ್ದರು. ಅ.7 ರ ದಾಳಿಯಲ್ಲಿ ಹಮಾಸ್ ಉಗ್ರರು ಒತ್ತೆಯಾಳುಗಳನ್ನಾಗಿ ಕರೆದೊಯ್ದಿರುವವರಲ್ಲಿ 101 ಜನರಿದ್ದಾರೆ. ಇದರಲ್ಲಿ ಇಸ್ರೇಲ್ ಸೇರಿದಂತೆ ವಿವಿಧ ದೇಶಗಳ ಜನರು ಇದ್ದಾರೆ ಎಂದೂ ಇದೇ ವೇಳೆ ನೆತನ್ಯಾಹು ಬಹಿರಂಗಪಡಿಸಿದ್ದಾರೆ. ಹಮಾಸ್ ಉಗ್ರರು ಗಾಜಾದಲ್ಲಿ 101 ಜನರನ್ನು ಒತ್ತೆ ಇಟ್ಟುಕೊಂಡಿದ್ದಾರೆ.

ಅವರೆಲ್ಲರನ್ನೂ ವಾಪಸ್ ಕರೆತರಲು ಇಸ್ರೇಲ್ ಬದ್ಧವಾಗಿದೆ. ಒತ್ತೆಯಾಳುಗಳ ಸುರಕ್ಷತೆ ಮುಖ್ಯವಾಗಿದೆ. ನ್ಯಾಯೋಚಿತವಾಗಿ ಅವರನ್ನು ಕರೆತರಲಾಗುವುದು ಎಂದು ಪ್ರತಿಜ್ಞೆ ಮಾಡಿದರು.

ಭಯೋತ್ಪಾದನೆಯ ವಿರುದ್ಧ ದೇಶ ನಡೆಸುತ್ತಿರುವ ಯುದ್ಧವು ತಾರ್ಕಿಕ ಅಂತ್ಯ ಕಾಣಲಿದೆ. ಅಲ್ಲಿಯವರೆಗೂ ಸಂಘರ್ಷ ನಡೆಯಲಿದೆ. ಒತ್ತೆಯಾಳುಗಳಿಗೆ ಹಾನಿಯಾದಲ್ಲಿ ಇಸ್ರೇಲ್ ಅಂಥವರಿಗೆ ಶಿಕ್ಷಿಸದೆ ಬಿಡುವುದಿಲ್ಲ ಎಂದೂ ಕಠಿಣ ಎಚ್ಚರಿಕೆ ನೀಡಿದ್ದಾರೆ.

# ಪಬ್ ಮೇಲೆ ದಾಳಿ: 40 ಮಹಿಳೆಯರು ಸೇರಿ 140 ಜನರ ಬಂಧನ



**ಹೈದರಾಬಾದ್:** ಇಲ್ಲಿನ ಐಷಾರಾಮಿ ಬಂಜಾರಾ ಹಿಲ್ಸ್ ಪ್ರದೇಶದಲ್ಲಿನ ಪಬ್‌ನಲ್ಲಿ ಕಾನೂನುಬಾಹಿರ ಚಟುವಟಿಕೆಯಲ್ಲಿ ತೊಡಗಿದ್ದ ಆರೋಪದ ಮೇಲೆ 40 ಮಹಿಳೆಯರು ಸೇರಿದಂತೆ 140 ಜನರನ್ನು ಬಂಧಿಸಲಾಗಿದೆ.ಪೊಲೀಸರಿಗೆ ಖಚಿತ ಸುಳಿವು ದೊರೆತ ನಂತರ ಮತ್ತು ಸೌಲಭ್ಯದ ಆವರಣವನ್ನು ಸೀಲ್ ಮಾಡಿದ ನಂತರ ಟಿಒಎಸ್ ಪಬ್‌ನಲ್ಲಿ ದಾಳಿಯನ್ನು ನಡೆಸಲಾಯಿತು. 20 ಜನರ ವಿರುದ್ಧ ಪ್ರಕರಣ ದಾಖಲಾಗಿದ್ದು, ಅದರಲ್ಲಿ ಅರ್ಧದಷ್ಟು ಮಹಿಳೆಯರಿದ್ದಾರೆ.

ಕಳೆದ ರಾತ್ರಿ, ನಾವು ರಸ್ತೆ ಸಂಖ್ಯೆ 3 ರಲ್ಲಿ ದಾಳಿ ನಡೆಸಿದ್ದೇವೆ ಮತ್ತು ಪಬ್‌ನಲ್ಲಿ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿದ್ದಕ್ಕಾಗಿ 100 ಪುರುಷರು ಮತ್ತು 40 ಮಹಿಳೆಯರನ್ನು ವಶಕ್ಕೆ ತೆಗೆದುಕೊಂಡಿದ್ದೇವೆ, ಅದನ್ನು ನಾವು ಸೀಲ್ ಮಾಡಿದ್ದೇವೆ ಎಂದು ಸಹಾಯಕ ಪೊಲೀಸ್ ಕಮಿಷನರ್ (ಎಸಿಪಿ) ವೆಂಕಟ್ ರಮಣ ಅವರನ್ನು ಉಲ್ಲೇಖಿಸಿ ಎಎನ್ಐ ವರದಿ ಮಾಡಿದೆ. ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗಿದೆ. ಬುಕ್ ಮಾಡಲಾದವರಲ್ಲಿ ಪಬ್ ಮಾಲೀಕರು, ಬೌಂಡರ್‌ಗಳು, ಡಿಜೆ ಆಪರೇಟರ್‌ಗಳು ಮತ್ತು ಇತರರು ಸೇರಿದ್ದಾರೆ. ಪಬ್ ಮಾಲೀಕರ ವಿರುದ್ಧ 420 (ಅಪ್ರಾಮಾಣಿಕವಾಗಿ ಆಸ್ತಿ ವಿತರಣೆಯನ್ನು ಪ್ರೇರೇಪಿಸುವುದು), 290 (ಸಾರ್ವಜನಿಕ ಉಪದ್ರವ) ಮತ್ತು 294 (ಅಶ್ಲೀಲ ಕೃತ್ಯಗಳು ಮತ್ತು ಹಾಡುಗಳು) ಸೇರಿವೆ.

ಪಬ್‌ನಲ್ಲಿನ ಅನುಚಿತ ನೃತ್ಯ ಪ್ರದರ್ಶನದಿಂದಾಗಿ ಈ ದಾಳಿ ನಡೆದಿದೆ. ಇದರ ಮಾಲೀಕರು ಪುರುಷ ಗ್ರಾಹಕರನ್ನು ಆಕರ್ಷಿಸಲು ಮತ್ತು ಲಾಭವನ್ನು ಹೆಚ್ಚಿಸಲು ವಿವಿಧ ರಾಜ್ಯಗಳ ಮಹಿಳೆಯರನ್ನು ಅಶ್ಲೀಲ ನೃತ್ಯಗಳನ್ನು ಪ್ರದರ್ಶಿಸಲು ನೇಮಿಸಿಕೊಂಡಿದ್ದರು.

ಪೊಲೀಸ್ ಕಾರ್ಯಾಚರಣೆಗೂ ಮುನ್ನ ಪಬ್ ಮೇಲೆ ಅಕ್ರಮ ಚಟುವಟಿಕೆಗಳ ಬಗ್ಗೆ ನಿಗಾ ಇರಿಸಲಾಗಿತ್ತು. ನಂತರ ದಾಳಿ ನಡೆಸಲಾಗಿದೆ.

ಕಳೆದ ತಿಂಗಳು ಇದೇ ರೀತಿಯ ದಮನದಲ್ಲಿ, ತೆಲಂಗಾಣ ರಾಜಧಾನಿಯ ಐದು ಪ್ರಸಿದ್ಧ ಪಬ್‌ಗಳ ಮೇಲೆ ದಾಳಿ ನಡೆಸಲಾಯಿತು. ಇವುಗಳ ನೇತೃತ್ವವನ್ನು ಅಬಕಾರಿ ಜಾರಿ ಮುಖ್ಯಸ್ಥ ವಿ.ಬಿ.ಕಮಲಾಸನ್ ರೆಡ್ಡಿ ವಹಿಸಿದ್ದರು. ಶೆರ್ಲಿಂಗಂಪಲ್ಲಿಯಲ್ಲಿರುವ ಕೋರಮ್ ಕ್ಲಬ್ ಮತ್ತು ಜೂಬಿಲಿ ಹಿಲ್ಸ್‌ನಲ್ಲಿರುವ ಬ್ಯಾಬಿಲೋನ್ ದಾಳಿ ಮಾಡಿದ ಸೌಲಭ್ಯಗಳಲ್ಲಿ ಸೇರಿವೆ.

# ಸಿಆರ್‌ಪಿಎಫ್ ಶಾಲೆಯ ಬಳಿ ಬೆಳ್ಳಂಬೆಳಗ್ಗೆ ನಿಗೂಢ ಸ್ಫೋಟ

**ನವದೆಹಲಿ:** ರಾಷ್ಟ್ರ ರಾಜಧಾನಿ ನವದೆಹಲಿಯ ರೋಹಿಣಿಯಲ್ಲಿರುವ ಪ್ರಶಾಂತ್ ವಿಹಾರ್ ಪ್ರದೇಶದ ಸಿಆರ್‌ಪಿಎಫ್ ಶಾಲೆಯ ಬಳಿ ಬೆಳಿಗ್ಗೆ ನಿಗೂಢ ಸ್ಫೋಟ ಸಂಭವಿಸಿದೆ. ಅದೃಷ್ಟವಶಾತ್ ಘಟನೆಯಲ್ಲಿ ಯಾರಿಗೂ ಗಾಯಗಳಾಗಿಲ್ಲ. ಅಗ್ನಿಶಾಮಕ ವಾಹನಗಳು, ಬಾಂಬ್ ಸ್ಕ್ವಾರ್ಡ್ ಪೊಲೀಸ್ ಫಾರೆನ್ಸಿಕ್ ತಂಡವು ಸಿಆರ್‌ಪಿಎಫ್ ಶಾಲೆ, ಸೆಕ್ಟರ್ 14, ರೋಹಿಣಿ ಬಳಿ ಘಟನಾ ಸ್ಥಳಕ್ಕೆ ಧಾವಿಸಿ ದೊಡ್ಡ ಸ್ಫೋಟದ ಮೂಲವನ್ನು ಪತ್ತೆಹಚ್ಚಿದೆ ಎಂದು ದೆಹಲಿ ಅಗ್ನಿಶಾಮಕ ಸೇವೆಯ ಅಧಿಕಾರಿಗಳು ತಿಳಿಸಿದ್ದಾರೆ. ಈ ಘಟನೆಯಿಂದ ಶಾಲೆಯ ಗೋಡೆ, ಸಮೀಪದ ಅಂಗಡಿಗಳು ಮತ್ತು ಕಾರಿಗೆ ಹಾನಿಯಾಗಿದೆ. ಬೆಳಿಗ್ಗೆ 7.50 ಕ್ಕೆ ಸಿಆರ್‌ಪಿಎಫ್ ಶಾಲೆಯ ಗಡಿ ಗೋಡೆಯ ಬಳಿ ಸೋಟದ ಕುರಿತು ನಮಗೆ ಕರೆ ಬಂದಿತು. ನಾವು ತಕ್ಷಣ ಎರಡು ಅಗ್ನಿಶಾಮಕ ವಾಹನಗಳನ್ನು ಸ್ಥಳಕ್ಕೆ ಧಾವಿಸಿದ್ದೇವೆ. ಬೆಂಕಿ ಇಲ್ಲ ಮತ್ತು ಸೋಟದಿಂದಾಗಿ ಯಾರಿಗೂ ಗಾಯವಾಗಿಲ್ಲ, ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಘಟನಾ ಸ್ಥಳಕ್ಕೆ ಕ್ರೈಂ ಬ್ರಾಂಚ್, ವಿಶೇಷ ದಳ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಆಗಮಿಸಿದ್ದಾರೆ. ಸ್ಫೋಟದ ಸ್ಥಳದಿಂದ ಮಾದರಿಗಳನ್ನು ಸಂಗ್ರಹಿಸಲು ನಮ್ಮ ವಿಧಿ ವಿಜ್ಞಾನ ತಂಡ ಮತ್ತು ಅಪರಾಧ ಘಟಕವು ಸ್ಥಳದಲ್ಲಿದೆ. ಇದು ಪಟಾಕಿಯಾಗಿರಬಹುದು, ಆದರೆ ನಾವು ಎಲ್ಲಾ ಕೋನಗಳಿಂದ ಸಂಪೂರ್ಣ ವಿಷಯವನ್ನು ತನಿಖೆ ಮಾಡುತ್ತಿದ್ದೇವೆ. ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. 7.47 ಕ್ಕೆ ಜೋರಾಗಿ ಸೋಟದ ಬಗ್ಗೆ ಪಿಸಿಆರ್ ಕರೆ ಬಂದಿತು ಎಂದು ಪೊಲೀಸರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಎಸ್‌ಎಚ್‌ಒ, ಪಿವಿ, ಸಿಬ್ಬಂದಿ ಸ್ಥಳಕ್ಕೆ ತಲುಪಿದರು, ಅಲ್ಲಿ ಶಾಲೆಯ ಗೋಡೆ ಯು ದುರ್ವಾಸನೆಯಿಂದ ಹಾನಿಗೊಳಗಾಗಿರುವುದು ಕಂಡು ಬಂದಿದೆ. ಹತ್ತಿರದ ಅಂಗಡಿ, ಅಂಗಡಿಯ ಬಳಿ ನಿಲ್ಲಿಸಿದ್ದ ಕಾರಿನ ಗಾಜುಗಳು ಹಾನಿಗೊಳಗಾಗಿರುವುದು ಕಂಡುಬಂದಿದೆ. ಯಾರಿಗೂ ಗಾಯವಾಗಿಲ್ಲ. ಘಟನಾ ಸ್ಥಳಕ್ಕೆ ಕ್ರೈಂ ಟೀಮ್ , ಎಫ್ ಎಸ್‌ಎಲ್ ತಂಡ ಮತ್ತು ಬಾಂಬ್ ನಿಷ್ಕ್ರಿಯ ದಳವನ್ನು ಕರೆಸಲಾಗಿದೆ. ಅಪರಾಧ ಸ್ಥಳವನ್ನು ಸುತ್ತುವರಿದಿದೆ. ಅಗ್ನಿಶಾಮಕ ದಳದ ತಂಡವು ಸ್ಥಳದಲ್ಲಿದೆ. ವಿಷಯ ಸ್ಫೋಟದ ಕಾರಣವನ್ನು ಪರಿಶೀಲಿಸಲಾಗುತ್ತಿದೆ ಎಂದು ಅಧಿಕಾರಿಗಳುಮಾಹಿತಿನೀಡಿದ್ದಾರೆ.

# ಎರಡು ಹೊಸ ಪೋಲಿಯೋ ಪ್ರಕರಣಗಳು ಪತ್ತೆ



**ಏಪ್ರಿಲ್‌ನಿಂದ WPV 1ಗೆ ಧನಾತಕ ಪರೀಕ್ಷೆ ನಡೆಸಿದ ಅನೇಕ ಪರಿಸರ ಮಾದರಿಗಳನ್ನು ಅನುಸರಿಸಿ ನೆರೆಯ ಎರಡು ಜಿಲ್ಲೆಗಳಲ್ಲಿ ವೈರಸ್‌ನ ಹರಡು ವಿಕೆಯು ಈಗಾಗಲೇ ದೃಢಪಟ್ಟಿದೆ ಎಂದು ಅಧಿಕಾರಿ ಹೇಳಿದ್ದಾರೆ.**

**ಇಸ್ಲಾಮಾಬಾದ್:** ಪಾಕಿಸ್ತಾನದ ಸಿಂಧ್ ಪ್ರಾಂತ್ಯದಲ್ಲಿ ಎರಡು ಹೊಸ ಅಂಗವಿಕಲ ಕಾಯಿಲೆಗಳು ಪತ್ತೆಯಾಗಿದ್ದು, ಪ್ರಸಕ್ತ ಈ ವರ್ಷ 39 ಪೋಲಿಯೊ ಪ್ರಕರಣಗಳು ವರದಿಯಾಗಿವೆ. ಸಿಂಧ್ ಪ್ರಾಂತ್ಯದ ಸಂಘರ್ ಮತ್ತು ಮಿರ್ಪುರ್ಖಾಸ್ ಜಿಲ್ಲೆಗಳಲ್ಲಿ ಇತ್ತೀಚಿನ ಈ ಕಾಯಿಲೆಗಳು ನಿನ್ನೆ ದೃಢಪಟ್ಟಿವೆ ಎಂದು ಡಾನ್ ಪತ್ರಿಕೆ ವರದಿ ಮಾಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪೋಲಿಯೊವೈರಸ್ ಅನ್ನು ನಿರ್ಮೂಲನೆ ಮಾಡುವ ದೇಶದ ಪ್ರಯತ್ನಗಳಿಗೆ ಒಂದು ದಿನ ಮುಂಚಿತವಾಗಿ ನಾಲ್ಕು ಪ್ರಕರಣಗಳು ವರದಿಯಾದ ನಂತರ ಇವುಗಳು ಬಂದಿವೆ. ಇಸ್ಲಾಮಾಬಾದ್‌ನಲ್ಲಿರುವ ಪೋಲಿಯೊ ನಿರ್ಮೂಲನೆಗಾಗಿ ಪ್ರಾದೇಶಿಕ ಉಲ್ಲೇಖ ಪ್ರಯೋಗಾಲಯದ ಪ್ರಕಾರ, ಈ ವರ್ಷ ಮಿರ್ಪುರ್ಖಾಸ್, ಸಂಘರ್‌ನಿಂದ ಇದು ಮೊದಲ ಪೋಲಿಯೊ ಪ್ರಕರಣವಾಗಿದೆ ಎಂದು ಅಧಿಕಾರಿಯೊಬ್ಬರನ್ನು ಉಲ್ಲೇಖಿಸಿ ವರದಿ ಮಾಡಿದೆ. ವರ್ಷದ ಹತ್ತು ತಿಂಗಳಲ್ಲಿ, ಪಾಕಿಸ್ತಾನವು 39 ಪೋಲಿಯೊವೈರಸ್ ಪ್ರಕರಣಗಳನ್ನು ವರದಿ ಮಾಡಿದೆ, ಅದರಲ್ಲಿ 20 ಬಲೂಚಿಸ್ತಾನದಿಂದ, 12 ಸಿಂಧ್‌ನಿಂದ, ಐದು ಖೈಬರ್ ಪಖ್ತುಂಕ್ವಾದಿಂದ ಮತ್ತು ಪಂಜಾಬ್, ಇಸ್ಲಾಮಾಬಾದ್‌ನಿಂದ ತಲಾ ಒಂದು ಪ್ರಕರಣಗಳು ವರದಿಯಾಗಿವೆ.

ಪೋಲಿಯೊ ನಿರ್ಮೂಲನೆಗಾಗಿ ಪ್ರಧಾನ ಮಂತ್ರಿಯವರ ಫೋಕಲ್ ಪರ್ಸನ್ ಆಯೇಶಾ ರಜಾ ಫಾರೂಕ್ ಅವರು ದೇಶಾದ್ಯಂತ ವೈರಸ್ ಹರಡುವುದನ್ನು ಒಪ್ಪಿಕೊಂಡರು. ಆದರೆ ಜೂನ್ 2025ರ ವೇಳೆಗೆ ದುರ್ಬಲ ರೋಗವನ್ನು ನಿರ್ಮೂಲನೆ ಮಾಡಲು ತಂತ್ರವನ್ನು ಅಭಿವೃದ್ಧಿಪಡಿಸಲಾಗಿದೆ. ಪಾಕಿಸ್ತಾನ ಪೋಲಿಯೊ ಕಾರ್ಯಕ್ರಮವು ಅಕ್ಟೋಬರ್ 28 ರಿಂದ ಐದು ವರ್ಷದೊಳಗಿನ 45 ದಶಲಕ್ಷಕ್ಕೂ ಹೆಚ್ಚು ಮಕ್ಕಳಿಗೆ ಲಸಿಕೆ ಹಾಕಲು ಹೊಸ ರಾಷ್ಟ್ರವ್ಯಾಪಿ ಲಸಿಕೆ ಅಭಿಯಾನವನ್ನು ಯೋಜಿಸಿದೆ ಎಂದು ವರದಿ ತಿಳಿಸಿದೆ. ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಪೋಲಿಯೊ ಸ್ಥಳೀಯವಾಗಿ ಉಳಿದಿರುವ ವಿಶ್ವದ ಏಕೈಕ ದೇಶವೆಂದರೆ ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನ ಮಾತ್ರ.

# ಪ್ರಧಾನಿ ಮೋದಿಯನ್ನು ಹಾಡಿ ಹೊಗಳಿದ ಪ್ರಿಯಾಂಕಾ



**ಮುಂಬೈ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಓರ್ವ ಶ್ರೇಷ್ಠ ರಾಜಕಾರಣಿ ಎಂದು ಶಿವಸೇನೆಯ ಉದ್ಧವ್ ಠಾಕ್ರೆ ಬಣದ ಸಂಸದೆ ಪ್ರಿಯಾಂಕಾ ಚತುರ್ವೇದಿ ಹೊ ಗಳಿಕೆಯ ಮಾತುಗಳನ್ನಾಡಿದ್ದಾರೆ. ಪ್ರಧಾನಿ ಮೋದಿ ದೇಶದ ಮತದಾರರ ಮನ ಗೆದ್ದಿದ್ದಾರೆ. ಅದರಲ್ಲೂ ಮಹಿಳೆಯರೂ, ಯುವಕರ ಮನಸ್ಸನ್ನು ಅವರು ಅರ್ಥ ಮಾಡಿಕೊಂಡಿದ್ದಾರೆ. ಮೋದಿ 2014ರಲ್ಲಿ ಮೊದಲ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಲೋಕಸಭೆ ಚುನಾವಣೆಯಲ್ಲಿ ಮೋದಿ ಅಲೆ ಸೃಷ್ಟಿಸಿದ್ದರು ಎಂದಿರುವ ಅವರು, ಮೋದಿ ಏಕೆ ಶ್ರೇಷ್ಠ ರಾಜಕಾರಣಿ ಎಂಬುದನ್ನು ವಿವರಿಸಿದ್ದಾರೆ.

ಹತ್ತು ವರ್ಷಗಳ ನಂತರ ಬಿಜೆಪಿ ನೇತೃತ್ವದ ಎನ್‌ಡಿಎ ಕೇಂದ್ರದಲ್ಲಿ ಮತ್ತೆ ಅಧಿಕಾರಕ್ಕೆ ಬಂದಿದೆ. ದೇಶದ ಮೂಲೆ ಮೂಲೆಯಲ್ಲಿ ಮೋದಿ ಅಲೆಯನ್ನು ಕಾಣಬಹುದು. 2024 ರ ಚುನಾವಣೆಯಲ್ಲಿ ಬಿಜೆಪಿಯ ಸ್ಥಾನಗಳು ಸ್ವಲ್ಪ ಕಡಿಮೆಯಾಗಿದೆ. ಬಿಜೆಪಿಗೆ ಒಂದೇ ಬಹುಮತ ಬಂದಿಲ್ಲ, ಬೇರೆ ಪಕ್ಷಗಳ ಸಹಕಾರದೊಂದಿಗೆ ಸರ್ಕಾರ ರಚಿಸಿದ್ದಾರೆ. ಹಾಗೆಂದ ಮಾತ್ರಕ್ಕೆ ಮೋದಿ ಪ್ರಭಾವ ಕಡಿಮೆಯಾಗಿದೆ ಎಂದರ್ಥವಲ್ಲ ಎಂದರು. ಬಿಜೆಪಿ ಹಾಗೂ ಉದ್ಧವ್ ಠಾಕ್ರೆಯ ಶಿವಸೇನೆ ನಡುವೆ ಸಂಬಂಧ ಚೆನ್ನಾಗಿಲ್ಲ, ಸದಾ ಮೋದಿ ವಿರುದ್ಧ ಹೇಳಿಕೆ ನೀಡುತ್ತಿದ್ದ ಪ್ರಿಯಾಂಕಾ ಚತುರ್ವೇದಿ ಅವರನ್ನು ಹೊಗಳಿರುವುದು ಎಲ್ಲರಲ್ಲೂ ಆಶ್ಚರ್ಯ ಮೂಡಿಸಿದೆ. ಒಂದು ಕಾಲದಲ್ಲಿ ಬಿಜೆಪಿ ಮತ್ತು ಶಿವಸೇನೆ ಒಂದೇ ಮೈತ್ರಿಯಲ್ಲಿತ್ತು. ಕೆಲವು ವರ್ಷಗಳ ಹಿಂದೆ ಉದ್ಧವ್ ಠಾಕ್ರೆ ಎನ್ಡಿಎಯಿಂದ ಹೊರಬಂದಿದ್ದರು. ಶಿವಸೇನೆ ಎರಡು ಬಣಗಳಾಗಿ ಒಡೆದಿತ್ತು.

ಮಹಾರಾಷ್ಟ್ರದಲ್ಲಿ ನವೆಂಬರ್ 20 ರಂದು ಒಂದೇ ಹಂತದಲ್ಲಿ ಚುನಾವಣೆ ನಡೆಯಲಿದೆ. ನವೆಂಬರ್ 23 ರಂದು ಮತ ಎಣಿಕೆ ನಡೆಯಲಿದೆ. ಮಹಾರಾಷ್ಟ್ರದಲ್ಲಿ, ಆಡಳಿತ ಸಮಿಶ್ರ ಮಹಾಯುತಿ ಬಿಜೆಪಿ, ಶಿವಸೇನೆ ಮತ್ತು ನ್ಯಾಷನಲಿಸ್ಟ್ ಕಾಂಗ್ರೆಸ್ ಪಕ್ಷ ಮಹಾ ವಿಕಾಸ್ ಅಘಾಡಿ, ಕಾಂಗ್ರೆಸ್, ಶರದ್ ಪವಾರ್ ನೇತೃತ್ವದ ಎನ್ಸಿಪಿ, ಉದ್ಧವ್ ಠಾಕ್ರೆ ವಿರುದ್ಧ ಸ್ಪರ್ಧಿಸಲಿದೆ. ಬಿಜೆಪಿ ನೇತೃತ್ವದ ಎನ್ಡಿಎ ಮಹಾರಾಷ್ಟ್ರದ 48 ಲೋಕಸಭಾ ಸ್ಥಾನಗಳಲ್ಲಿ ಕೇವಲ 17 ಸ್ಥಾನಗಳನ್ನು ಗೆದ್ದಿದೆ. ಐದು ವರ್ಷಗಳ ಹಿಂದೆ ಬಿಜೆಪಿ ಪಾಲು 23ಕ್ಕೆ ಇಳಿದಿದ್ದು, 9 ಸ್ಥಾನಗಳಿಗೆ ಕುಸಿದಿದೆ. ಏತನ್ಮಧ್ಯೆ, ಕಾಂಗ್ರೆಸ್, ಶಿವಸೇನೆ, ಎನ್ಸಿಪಿ ಒಳಗೊಂಡಿರುವ ಮಹಾ ವಿಕಾಸ್ ಅಘಾಡಿ 30 ಸ್ಥಾನಗಳನ್ನು ಪಡೆದುಕೊಂಡಿದೆ.

**ಉದ್ಧವ್ ಠಾಕ್ರೆ ಅವರ ಶಿವಸೇನೆ, ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರ ಶಿವಸೇನೆ. 288 ಸ್ಥಾನಗಳ ಮಹಾರಾಷ್ಟ್ರ ವಿಧಾನಸಭೆಯ ಅವಧಿ ನವೆಂಬರ್ 26 ರಂದು ಕೊನೆಗೊಳ್ಳಲಿದ್ದು, 81 ಸ್ಥಾನಗಳನ್ನು ಹೊಂದಿರುವ ಜಾರ್ಖಂಡ್ ವಿಧಾನಸಭೆಯ ಅವ ಧಿಯು ಜನವರಿ 5, 2025 ರಂದು ಕೊನೆಗೊಳ್ಳಲಿದೆ. ಕೇಂದ್ರ ಚುನಾವಣಾ ಆಯೋಗವು ಮಹಾರಾಷ್ಟ್ರ, ಜಾರ್ಖಂಡ್ ವಿಧಾನಸಭಾ ಚುನಾವಣಾ ದಿನಾಂಕವನ್ನು ಪ್ರಕಟಿಸಿದೆ.**

# ಕೇರಳ ಸಿಎಂ ವಿಜಯನ್ ವಿರುದ್ಧ ಕಾಂಗ್ರೆಸ್ ವಾಗ್ದಾಳಿ



**ತಿರುವನಂತಪುರಂ:** ಕಣ್ಣೂರಿನಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ನವೀನ್ ಬಾಬು ಆತ್ಮಹತ್ಯೆ ಪ್ರಕರಣದಲ್ಲಿ ಸಿಪಿಐ(ಎಂ) ನಾಯಕಿ ಪಿಪಿ ದಿವ್ಯ ಪಾತ್ರದ ಬಗ್ಗೆ ಸಿಎಂ ಪಿಣರಾಯಿ ವಿಜಯನ್ ಅವರ ಮೌನ ದುರಾದೃಷ್ಟಕರ ಎಂದು ಕಾಂಗ್ರೆಸ್ ತೀವ್ರವಾಗಿ ಟೀಕಿಸಿದೆ.

ಕೇರಳ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಮುಖ್ಯಸ್ಥ ಕೆ. ಸುಧಾಕರನ್, ರಾಜ್ಯ ವಿಧಾನಸಭೆಯ ವಿರೋಧ ಪಕ್ಷದ ನಾಯಕ ವಿ.ಡಿ. ಸತೀಶನ್ ಸಿಎಂ ಏಕೆ ಮೌನವಾಗಿರುವುದು ಏಕೆ ಎಂದು ಪ್ರಶ್ನಿಸಿದ್ದಾರೆ . ಭ್ರಷ್ಟಾಚಾರ ಆರೋಪ ಮಾಡಿ ಅಧಿಕಾರಿಯನ್ನು ಮಾನಸಿಕವಾಗಿ ಹಿಂಸೆ ನೀಡಿ ಅವರು ಆತ್ಮಹತ್ಯೆ ಮಾಡಿಕೊಳ್ಳುವಂತಾಯಿತು. ಆದರೆ ರಾಜ್ಯ ಸರ್ಕಾರ ನಿಲುವು ಖಂಡನೀಯ ಕಡೇ ಪಕ್ಷ ದುಃಖಿತ ಕುಟುಂಬಕ್ಕೆ ಸಾಂತ್ವನವನ್ನು ಸಹ ತಿಳಿಸಲಿಲ್ಲ ಎಂದು ಕಾಂಗ್ರೆಸ್ ನಾಯಕರು ಕಿಡಿ ಕಾರಿದ್ದಾರೆ. ಬಾಬು ಪ್ರಾಮಾಣಿಕ ಮತ್ತು ಉತ್ತಮ ಅಧಿಕಾರಿ ಎಂದು ಬಣ್ಣಿಸಿದ ಸುಧಾಕರನ್, ಈ ಪ್ರಕರಣದ ತನಿಖೆಗೆ ಸರ್ಕಾರ ಕಾಲಹರಣ ಮಾಡುತ್ತಿದೆ ಎಂದು ಆರೋಪಿಸಿದರು. ಸಿಎಂ ಮತ್ತು ಅವರ ಕಚೇರಿಯ ಅಧಿಕಾರಿಗಳು ಬಾಬು ಅವರ ಆತ್ಮಹತ್ಯೆಯ ಹಿಂದಿನ ಅಪರಾಧಗಳನ್ನು ರಕ್ಷಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು. ಬಾಬು ಭ್ರಷ್ಟ ಎಂದು ತೋರಿಸಲು ಸಿಪಿಐ(ಎಂ) ನಕಲಿ ದಾಖಲೆ ಸೃಷ್ಟಿಸಿದ್ದ ಕಣ್ಣೂರು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ದಿವ್ಯ ಅವರನ್ನು ರಕ್ಷಣೆ ಮಾಡುತ್ತಿದ್ದಾರೆ. ಸಾರ್ವಜನಿಕವಾಗಿ ಬಾಬು ವಿರುದ್ಧ ಆರೋಪ ಮಾಡಿದಾಗ ಜಿಲ್ಲಾಧಿಕಾರಿ ಅರುಣ್ ಕೆ ವಿಜಯನ್ ಏಕೆ ಮೌನ ವಹಿಸಿದ್ದಾರೆ ಎಂದು ಸತೀಶನ್ ಪ್ರಶ್ನಿಸಿದರು. ಆರೋಪದ ಹಿಂದೆ ಷಡ್ಯಂತ್ರವಿದೆ ಎಂದರು. ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 108 ರ ಅಡಿಯಲ್ಲಿ ಆತ್ಮ ಹತ್ಯೆಗೆ ಪ್ರಚೋದನೆ ನೀಡಿದ ಅಪರಾಧಕ್ಕಾಗಿ ದಿವ್ಯ ವಿರುದ್ಧ ಮೊಕದ್ದಮೆ ದಾಖಲಿಸಲಾಗಿದೆ.

# ತೈವಾನ್ ಸುತ್ತುವರಿದ ಬೆನ್ನಲ್ಲೇ ಚೀನಾ ಸೇನೆಗೆ ಕ್ಸಿ ಜಿನ್‌ಪಿಂಗ್ ಕರೆ

## ಚೀನಾ ಸೇನೆಯಾದ ಪೀಪಲ್ ಲಿಬರೇಷನ್ ಆರ್ಮಿಯ ಕ್ಷಿಪಣಿ ಪಡೆಯ ಸಿದ್ಧತೆ, ವೀಕ್ಷಿಸಲು ಕ್ಷಿಪಣಿ ಬ್ರಿಗೇಡ್ ಬಳಿ ತೆರಳಿದ್ದ ಅಧ್ಯಕ್ಷ




**ಯುದ್ಧಕ್ಕೆ ಸಮಗ್ರವಾಗಿ ಸಿದ್ಧತೆ**

**ಬೀಜಿಂಗ್:** ರಷ್ಯಾ - ಉಕ್ರೇನ್ ಹಾಗೂ ಇಸ್ರೇಲ್ - ಹಮಾಸ್ ಸಮರಕ್ಕೆ ಸಾಕ್ಷಿಯಾಗಿರುವ ವಿಶ್ವ, ಇದೀಗ ಮತ್ತೊಂದು ಯುದ್ಧದ ಭೀತಿಯಲ್ಲಿದೆ. ಚೀನಾ ದೇಶದ ನೌಕಾ ಪಡೆ, ವಾಯು ಪಡೆ, ಭೂ ಸೇನೆಗಳು ಸಮರ ತಾಲೀಮಿನ ಹೆಸರಲ್ಲಿ ದ್ವೀಪ ರಾಷ್ಟ್ರ ತೈವಾನ್ ದೇಶವನ್ನು ಸುತ್ತುವರಿದಿದ್ದು, ಈ ಬೆನ್ನಲ್ಲೇ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಕಹಳೆ ಮೊಳಗಿಸಿದ್ದಾರೆ. ಯುದ್ಧಕ್ಕೆ ಸಿದ್ಧರಾಗಿ ಎಂದು ಚೀನಾ ಅಧ್ಯಕ್ಷರು ಕರೆ ನೀಡಿರುವ ಹಿನ್ನೆಲೆಯಲ್ಲಿ ತೈವಾನ್ ಮೇಲೆ ಪಿಎಲ್‌ಎ ಮುಗಿ ಬೀಳಲು ಕ್ಷಣಗಣನೆ ಶುರುವಾಗಿದೆ. ಚೀನಾದ ಸರ್ಕಾರಿ ಮಾಧ್ಯಮ ಸಿಸಿಟಿವಿ ವರದಿ ಮಾಡಿರುವ ಪ್ರಕಾರ, ಚೀನಾ ಸೇನೆಯಾದ ಪೀಪಲ್ ಲಿಬರೇಷನ್ ಆರ್ಮಿಯ ಕ್ಷಿಪಣಿ ಪಡೆಯ ಸಿದ್ಧತೆ ವೀಕ್ಷಿಸಲು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ಕ್ಷಿಪಣಿ ಬ್ರಿಗೇಡ್ ಬಳಿ ತೆರಳಿದ್ದರು. ಈ ದೃಶ್ಯಗಳನ್ನ ಚೀನಾದ ಮಾಧ್ಯಮಗಳು ಬಿತ್ತರಿಸಿವೆ. ಈ ವೇಳೆ ಮಾತನಾಡಿದ ಕ್ಸಿ ಜಿನ್‌ಪಿಂಗ್, ಯುದ್ಧಕ್ಕೆ ಸಮಗ್ರವಾಗಿ ಸಿದ್ಧತೆ ನಡೆಸಲು ಸೂಚಿಸಿದರು. ತಮ್ಮ ಪಡೆಯ ಬಳಿ ಎಲ್ಲಾ ರೀತಿಯ ಯುದ್ಧ ಸನ್ನದ್ಧತೆ ಇರುವ ಕುರಿತಾಗಿ ಖಚಿತಪಡಿಸಿಕೊಳ್ಳಲು ಕರೆ ನೀಡಿದರು ಎಂದು ಮಾಹಿತಿ ಸಿಕ್ಕಿದೆ.

### ತೈವಾನ್ ಮರಳಿ ವಶಕ್ಕೆ ಪಡೆಯಲು ಚೀನಾ ತಂತ್ರಗಾರಿಕೆ!

**ಕಳೆದ ಸೋಮವಾರ ಚೀನಾ ಸೇನೆ ಸಮರಾಭ್ಯಾಸದ ಸೋಗಿನಲ್ಲಿ ಅಪಾರ ಸಂಖ್ಯೆಯ ಯುದ್ಧ ವಿಮಾನಗಳು, ಡ್ರೋನ್‌ಗಳು, ಯುದ್ಧ ನೌಕೆಗಳು, ತಟ ರಕ್ಷಣಾ ಪಡೆ ನೌಕೆಗಳನ್ನು ತೈವಾನ್ ಸುತ್ತಲೂ ವೃತ್ತಾಕಾರದಲ್ಲಿ ನಿಯೋಜಿಸಿದೆ. ಒಂದು ರೀತಿಯಲ್ಲಿ ತೈವಾನ್ ಸುತ್ತಲೂ ಸಮುದ್ರದಲ್ಲಿ ಚೀನಾ ಸೇನೆ ಸುತ್ತುವರೆದಿದೆ. ಕಳೆದ ಎರಡು ವರ್ಷಗಳ ಅವಧಿಯಲ್ಲಿ 4ನೇ ಬಾರಿ ಈ ರೀತಿ ಸುತ್ತುವರೆಯುತ್ತಿರುವ ಚೀನಾ ಸೇನೆ, ತೈವಾನ್‌ಗೆ ಸ್ಪಷ್ಟ ಸಂದೇಶ ರವಾನೆ ಮಾಡಿದೆ.**

**ಏನಿದು ಚೀನಾ - ತೈವಾನ್ ವಿವಾದ?:** ವಿಶಾಲ ಚೀನಾ ದೇಶದ ಸಮುದ್ರ ಗಡಿಗೆ ತಾಗಿಕೊಂಡಂತೆಯೇ ಇರುವ ತೈವಾನ್ ದೇಶ ಒಂದು ಪುಟ್ಟ ದ್ವೀಪ ರಾಷ್ಟ್ರ. ಈ ದ್ವೀಪವನ್ನು ಚೀನಾ ಪುರಾತನ ಕಾಲದಿಂದಲೂ ತನ್ನದೇ ಭಾಗ ಎಂದು ವಾದಿಸಿದೆ. ಆದರೆ, ದಶಕಗಳ ಹಿಂದೆ ಚೀನಾದ ರಾಜಕೀಯ ನಿರಾಶ್ರಿತರು ತೈವಾನ್‌ಗೆ ಪರಾರಿಯಾಗಿ ಅಲ್ಲಿಯೇ ತಮ್ಮ ಸರ್ಕಾರ ರಚಿಸಿಕೊಂಡು ಪ್ರತ್ಯೇಕ ದೇಶ ಎಂದು ಘೋಷಿಸಿಕೊಂಡಿದ್ದಾರೆ. ಸ್ವಾಯತ್ತ ರಾಷ್ಟ್ರ ತೈವಾನ್‌ಗೆ ಅಮೆರಿಕ, ವಿಶ್ವಸಂಸ್ಥೆ ಆದಿಯಾಗಿ ಜಾಗತಿಕ ಮಟ್ಟದ ಮಾನ್ಯತೆ ಇದೆ.

1949ರಲ್ಲಿ ಚೀನಾದಲ್ಲಿ ಅಂತಃಕಲಹ ಏರ್ಪಟ್ಟಿತ್ತು. ಚೀನಾದ ಎರಡು ರಾಜಕೀಯ ಪಕ್ಷಗಳ ನಡುವೆ ಯುದ್ಧ ಏರ್ಪಟ್ಟಿತ್ತು. ಈ ವೇಳೆ ಚೀನಾದ ಚಿಯಾಂಗ್ ಕೈ - ಶೆಕ್ ರಾಷ್ಟ್ರೀಯ ವಾದಿ ಪಡೆಯನ್ನು ಮಾವೋ ಝೆಡಾಂಗ್ ಸಾರಥ್ಯದ ಕಮ್ಯುನಿಸ್ಟ್ ಹೋರಾಟಗಾರರು ಸೋಲಿಸಿದ್ದರು. ಈ ಹಿನ್ನೆಲೆಯಲ್ಲಿ ಚಿಯಾಂಗ್ ಕೈ - ಶೆಕ್ ಸಾರಥ್ಯದ ರಾಜಕೀಯ ಪಕ್ಷದ ಸದಸ್ಯರು ಹಾಗೂ ಹೋರಾಟಗಾರರು ತೈವಾನ್ ದ್ವೀಪಕ್ಕೆ ಪಲಾಯನ ಮಾಡಿದ್ದರು. ಇದೀಗ ತೈವಾನ್ ಸ್ವಾಯತ್ತ ರಾಷ್ಟ್ರವಾಗಿದ್ದು, ಅಮೆರಿಕ ಆದಿಯಾಗಿ ಹಲವು ಪಾಶ್ಚಿಮಾತ್ಯ ರಾಷ್ಟ್ರಗಳ ಬೆಂಬಲ ತೈವಾನ್‌ಗೆ ಇದೆ.

**ಚೀನಾ - ತೈವಾನ್ ನಡುವಣ ಉದ್ವಿಗ್ನ ಸ್ಥಿತಿ ಮತ್ತಷ್ಟು ಹೆಚ್ಚಾಗಿದೆ. ಚೀನಾದ ವಾಯು ಪಡೆ, ಭೂ ಸೇನೆ, ನೌಕಾ ಪಡೆ, ಕ್ಷಿಪಣಿ ಬ್ರಿಗೇಡ್‌ಗಳು ದ್ವೀಪ ರಾಷ್ಟ್ರ ತೈವಾನ್ ಸುತ್ತಲೂ ಸಮುದ್ರದಲ್ಲಿ ಸುತ್ತುವರೆದಿವೆ. ಈ ಮೂಲಕ ತಮ್ಮ ಶಕ್ತಿ ಪ್ರದರ್ಶನ ಮಾಡುವ ಜೊತೆಯಲ್ಲೇ ಹೊಸ ಸಂದೇಶವನ್ನೂ ರವಾನೆ ಮಾಡುತ್ತಿವೆ. ಮೇಲ್ನೋಟಕ್ಕೆ ಇದು ಸಮರಾಭ್ಯಾಸವಾದರೂ ದ್ವೀಪ ರಾಷ್ಟ್ರ ತೈವಾನ್ ಕೈವಶಕ್ಕೆ ಚೀನಾ ತಂತ್ರಗಾರಿಕೆ ಎಂದೇ ವಿಶ್ಲೇಷಿಸಲಾಗಿದೆ.**

## ಮಿನಿ ನ್ಯೂಸ್

### ಮನೆ ಕುಸಿದು ತಾಯಿ-ಮಗಳ ಸಾವು

**ಮೊರೆನಾ:** ಮಧ್ಯಪ್ರದೇಶದ ಮೊರೆನಾ ನಗರದಲ್ಲಿ ಇಸ್ಲಾಂಪುರ ಪ್ರದೇಶದಲ್ಲಿ ಕಳೆದ ರಾತ್ರಿ ಮನೆ ಕುಸಿದು ಅವಶೇಷಗಳಿಂದ ತಾಯಿ ಮತ್ತು ಮಗಳ ಶವ ಹೊರತೆಗೆಯಲಾಗಿದೆ. ಸತತ ರಕ್ಷಣಾ ಕಾರ್ಯಾಚರಣೆಯ ನಂತರ, ಬೆಳಿಗ್ಗೆ ಅವಶೇಷಗಳಿಂದ ತಾಯಿ-ಮಗಳ ಇಬ್ಬರ ಶವಗಳನ್ನು ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಪೊಲೀಸ್ ಉಪವಿಭಾಗಾಧಿಕಾರಿ ರವಿ ಭಡೋರಿಯಾ ಸುದ್ದಿಗಾರರಿಗೆ ತಿಳಿಸಿದರು. ಇಕ್ಕಟ್ಟಾದ ಪ್ರದೇಶವಾಗಿರುವುದರಿಂದ ಅಕ್ಕಪಕ್ಕದ ಮನೆಗಳಿಗೆ ಹಾನಿಯಾಗದಂತೆ ರಕ್ಷಣಾ ಕಾರ್ಯಾಚರಣೆಯನ್ನು ಎಚ್ಚರಿಕೆಯಿಂದ ನಡೆಸಿದ್ದರಿಂದ ಹೆಚ್ಚಿನ ಸಮಯ ಹಿಡಿಯಿತು ಎಂದರು.

ಸ್ಥಳದಿಂದ ವಿಧಿ ವಿಜ್ಞಾನ ಸಾಕ್ಷ್ಯವನ್ನು ಸಂಗ್ರಹಿಸಲಾಗಿದೆ, ಅದರ ಪರೀಕ್ಷೆಯ ನಂತರ ಅಂತಿಮವಾಗಿ ಸ್ಫೋಟದ ಕಾರಣ ಹೊರಬರುತ್ತವೆ ಎಂದು ಹೇಳಿದರು. ಅವಶೇಷಗಳಲ್ಲಿ ಸ್ಫೋಟಗೊಂಡ ಸಿಲಿಂಡರ್ ಬ್ಯಾಟರಿ ಮತ್ತು ಕಂಪ್ರೆಸರ್ ಹೊಂದಿರುವ ಡೀಪ್ ಫ್ರೀಜರ್‌ನ ಭಾಗಗಳು ಪತ್ತೆಯಾಗಿವೆ ಎಂದು ಅವರು ಹೇಳಿದರು. ರಾಜ್ಯ ವಿಪತ್ತು ತುರ್ತು ನಿರ್ವಹಣಾ ಪಡೆ (ಎಸ್‌ಡಿಇಆರ್‌ಎಫ್), ಅಗ್ನಿಶಾಮಕ ದಳ ಮತ್ತು ಸ್ಥಳೀಯ ನಾಗರಿಕ ಸಂಸ್ಥೆಗಳ ತಂಡಗಳು ಸ್ಥಳದಲ್ಲಿ ಬೀಟುಬಿಟ್ಟಿದೆ ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ ಸಂಭವಿಸಿದೆ ಎಂದು ಈ ಹಿಂದೆ ಕೆಲವು ಮಾಧ್ಯಮ ವರದಿಗಳು ಹೇಳಿದ್ದವು. ಪೊಲೀಸರು ವರದಿಗಳನ್ನು ದೃಢಪಡಿಸಿಲ್ಲ ಮತ್ತು ಸದ್ಯಕ್ಕೆ ಅಂತಹ ಯಾವುದೇ ಪುರಾವೆಗಳು ಕಂಡುಬಂದಿಲ್ಲ ಎಂದು ಹೇಳಿದರು. ಪ್ರಾಥಮಿಕ ತನಿಖೆಯಲ್ಲಿ ಎಲ್‌ಪಿಜಿ ಸಿಲಿಂಡರ್ ಸೋಟಕ್ಕೆ ಕಾರಣವಾಗಿರಬಹುದು ಎಂದು ಕಂಡುಬರುತ್ತಿದೆ ಎಂದರು.

### ದಕ್ಷಿಣ ಭಾರತದ ಜನರು ಹೆಚ್ಚು ಮಕ್ಕಳನ್ನು ಮಾಡಿಕೊಳ್ಳಿ: ನಾಯ್ಡು

**ಅಮರಾವತಿ:** ದಕ್ಷಿಣ ಭಾರತ ರಾಜ್ಯಗಳ ಜನರು ಹೆಚ್ಚಿನ ಮಕ್ಕಳನ್ನು ಹೊಂದಬೇಕು ಎಂದು ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಕರೆ ನೀಡಿದ್ದಾರೆ. ವಯಸ್ಸಾದವರ ಸಂಖ್ಯೆ ಹೆಚ್ಚಳದ ಬಗ್ಗೆ ಕಳವಳ ವ್ಯಕ್ತಪಡಿಸಿದ ಸಿಎಂ, ಹೆಚ್ಚಿನ ಮಕ್ಕಳಿರುವ ಕುಟುಂಬಗಳನ್ನು ಪ್ರೋತ್ಸಾಹಿಸಲು ಹೊಸ ಕಾನೂನನ್ನು ಜಾರಿಗೊಳಿಸಲಾಗುವುದು.

ಜನಸಂಖ್ಯೆ ನಿರ್ವಹಣೆಯನ್ನು ಜಾರಿಗೆ ತರಲು ರಾಜ್ಯ ಸರ್ಕಾರ ಯೋಜಿಸುತ್ತಿದೆ ಎಂದು ಹೇಳಿದ್ದಾರೆ.

ಎರಡಕ್ಕಿಂತ ಹೆಚ್ಚು ಮಕ್ಕಳಿರುವವರು ಮಾತ್ರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸ್ಪರ್ಧಿಸಲು ಅರ್ಹರಾಗುವ ಕಾನೂನು ತರಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ ಎಂದು ನಾಯ್ಡು ತಿಳಿಸಿದ್ದಾರೆ. 2ಕ್ಕಿಂತ ಹೆಚ್ಚು ಮಕ್ಕಳನ್ನು ಹೊಂದಿರುವವರು ಸ್ಥಳೀಯ ಚುನಾವಣೆ ಯಲ್ಲಿ ಸ್ಪರ್ಧಿಸದಂತೆ ರಾಜ್ಯವು ಈ ಹಿಂದೆ ಕಾನೂನನ್ನು ಅಂಗೀಕರಿಸಿದೆ ಎಂದು ಅವರು ಉಲ್ಲೇಖಿಸಿದ್ದಾರೆ. ನಾವು ಆ ಕಾನೂನನ್ನು ರದ್ದುಗೊಳಿಸಿದ್ದೇವೆ. ಈಗ ಅದನ್ನು ಹಿಂತೆಗೆದುಕೊಳ್ಳಲು ನಾವು ಪರಿಗಣಿಸುತ್ತಿದ್ದೇವೆ.

ಹೆಚ್ಚು ಮಕ್ಕಳನ್ನು ಹೊಂದಿರುವ ಕುಟುಂಬಗಳಿಗೆ ಸರ್ಕಾರವು ಹೆಚ್ಚಿನ ಪ್ರಯೋಜನಗಳನ್ನು ಒದಗಿಸಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

### ಬಸ್-ಟೆಂಪೋ ನಡುವೆ ಡಿಕ್ಕಿ 8 ಮಕ್ಕಳು ಸೇರಿ 12 ಮಂದಿ ಸಾವು

**ರಾಜಸ್ಥಾನ:** ಬಸ್ ಮತ್ತು ಟೆಂಪೋ ನಡುವೆ ಡಿಕ್ಕಿ ಸಂಭವಿಸಿ ಎಂಟು ಮಕ್ಕಳು ಸೇರಿದಂತೆ 12 ಜನರು ಸಾವನ್ನಪ್ಪಿರುವ ಘಟನೆ ಕಳೆದ ತಡರಾತ್ರಿ ರಾಜಸ್ಥಾನದ ಧೋಲ್ಪುರ್ ಜಿಲ್ಲೆಯಲ್ಲಿ ಸಂಬವಿಸಿದೆ. ಗ್ವಾಲಿಯರ್‌ನಿಂದ ಜೈಪುರಕ್ಕೆ ಹೋಗುತ್ತಿದ್ದ ವೇಗದ ಸ್ಲೀಪರ್ ಕೋಚ್ ಬಸ್ ಸುಮಿಪುರ್ ಬಳಿ ಟೆಂಪೋಗೆ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದ್ದು, ಅಪಘಾತದಲ್ಲಿ ದಂಪತಿ ಮತ್ತು ಎಂಟು ಮಕ್ಕಳು ಸೇರಿದಂತೆ 12 ಜನರು ಸಾವನ್ನಪ್ಪಿದ್ದಾರೆ ಎಂದು ಘುಬ್ಯಾರಿ ಪೊಲೀಸ್ ಠಾಣೆಯ ಎಸ್‌ಎಚ್‌ಒ ಶಿವಲಹರಿ ಮೀನಾ ತಿಳಿಸಿದ್ದಾರೆ.

ಇರ್ಫಾನ್ ಅಲಿಯಾಸ್ ಬಂಟಿ ಎಂಬವರ ಮಗಳು ಅಸಾ (14), ಗಫೊ ಎಂಬವರ ಮಗ ಇರ್ಫಾನ್ (38), ಇರ್ಫಾನ್ ಮಕ್ಕಳಾದ ಸಲಾನ್ (8), ಸಾಖಿರ್ (6), ಜಾಹಿರ್ ಎಂಬವರ ಪುತ್ರ ಡನಿಶ್ (10) ಆಸೀಫ್ ಮಗ ಅಜಾನ್ (5), ನನು ಎಂಬವರ ಪತ್ನಿ ಜರೀನಾ (35), ಇವರ ಮಕ್ಕಳಾದ ಮಗಳು ಸುಖಿ (7), ಮಗ ಸನಿಫ್ (9) ಮತ್ತು ಆಶಿಯಾನಾ (10) ಮೃತಪಟ್ಟವರೆಂದು ಗುರುತಿಸಲಾಗಿದೆ.


ಇರ್ಫಾನ್ ಪತ್ನಿ ಜೂಲಿ (32), ಧರ್ಮೇಂದ್ರ (38) ಹಾಗು ಪ್ರವೀಣ್ (32) ಗಂಭೀರವಾಗಿ ಗಾಯಗೊಂಡವರಾಗಿದ್ದಾರೆ. ಅಪಘಾತದಲ್ಲಿ ಪ್ರಾಣ ಕಳೆದುಕೊಂಡವರ ಪೈಕಿ 8 ಮಂದಿ ಮಕ್ಕಳಿದ್ದಾರೆ. ಬಸ್ ಚಾಲಕ ಮತ್ತು ನಿರ್ವಾಹಕ ಸೇರಿದಂತೆ ಮೂವರು ಗಂಭೀರವಾಗಿ ಗಾಯಗೊಂಡಿದ್ದು ದೋಲ್ಪುರ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಮೃತದೇಹಗಳನ್ನು ಬರಿ ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ರವಾನಿಸಲಾಗಿದೆ. ಬರಿ ನಗರದ ಗುಮಟ್ ಮೊಹಲ್ಲಾದ ಕರೀಂ ಕಾಲನಿಯ ಈ ಕುಟುಂಬ ಬರೌಲಿ ಗ್ರಾಮದಲ್ಲಿರುವ ತಮ ಸಂಬಂಧಿಕರ ಮನೆಯಲ್ಲಿ ಆಯೋಜಿಸಲಾಗಿದ್ದ ಭಾತ್ ಕಾರ್ಯಕ್ರಮ ಮುಗಿಸಿ ವಾಪಸ್ ಆಗುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ. ಸುಮಾರು 11 ಗಂಟೆಯ ವೇಳೆಗೆ ಸುನಿಪುರ್ ಗ್ರಾಮದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಬರುತ್ತಿದ್ದ ಸ್ಲೀಪರ್ ಕೋಚ್ ಬಸ್ ಇವರಿದ್ದ ಟೆಂಪೋಗೆ ಡಿಕ್ಕಿ ಹೊಡೆದಿದೆ. ಪರಿಣಾಮ, 11 ಮಂದಿ ಸಾವನ್ನಪ್ಪಿ, ಮೂವರು ಗಾಯಗೊಂಡಿದ್ದಾರೆ. ಮೃತದೇಹಗಳ ಶವ ಪರೀಕ್ಷೆ ಭಾನುವಾರ ನಡೆಯಲಿದೆ. ಟೆಂಪೋ ಮತ್ತು ಬಸ್ಸನ್ನು ನಾವು ವಶಕ್ಕೆ ಪಡೆದಿದ್ದೇವೆ ಎಂದು ಅವರು ಮಾಹಿತಿ ನೀಡಿದರು.

### ಯುಎಸ್ ಸಂವಿಧಾನ ಬೆಂಬಲಿಸುವವರಿಗೆ 10 ಲಕ್ಷ ನೀಡುತ್ತೇನೆ: ಇಲಾನ್ ಮಸ್ಕ್

**ಪೆನ್ಸಿಲ್ವೇನಿಯಾ:** ಬಿಲಿಯನೇರ್ ಉದ್ಯಮಿ ಇಲಾನ್ ಮಸ್ಕ್ ಅವರು ಅಮೆರಿಕದ ಸಂವಿಧಾನವನ್ನು ಬೆಂಬಲಿಸುವ ಆನ್‌ಲೈನ್ ಅರ್ಜಿಗೆ ಸಹಿ ಹಾಕುವವರಿಗೆ ನವೆಂಬರ್ 5ರಂದು ನಡೆಯಲಿರುವ ಅಧ್ಯಕ್ಷೀಯ ಚುನಾವಣೆಯವರೆಗೆ ಪ್ರತಿದಿನ 10 ಲಕ್ಷ ನೀಡುವುದಾಗಿ ಭರವಸೆ ನೀಡಿದ್ದಾರೆ. ಈ ಬಾರಿಯ ಅಧ್ಯಕ್ಷೀಯ ಚುನಾವಣೆಯಲ್ಲಿ ಇಲಾನ್ ಮಸ್ಕ್ ಅವರು ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರನ್ನು ಬೆಂಬಲಿಸಿದ್ದು, ಪ್ರಚಾರ ಸಭೆಗಳಲ್ಲಿ ಭಾಗಿಯಾಗುತ್ತಿದ್ದಾರೆ. ಜತೆಗೆ, ಪೆನ್ಸಿಲ್ವೇನಿಯಾದಲ್ಲಿ ನಡೆಯಲಿರುವ ಟ್ರಂಪ್ ಸಭೆಯಲ್ಲಿ ಭಾಗವಹಿಸುವವರಿಗೆ ತಲಾ 10 ಲಕ್ಷ ಮೊತ್ತದ ಚೆಕ್ ಅನ್ನು ವಿತರಿಸಿದ್ದಾರೆ ಎಂದು ವರದಿಯಾಗಿದೆ. ಸಿನಿಮಾ ಮಸ್ಕ್ ಅವರು ಟ್ರಂಪ್ ಅವರನ್ನು ಬೆಂಬಲಿಸಲು ನೆರವಾಗಲು ಸಂಸ್ಥೆಯೊಂದನ್ನು ಪ್ರಾರಂಭಿಸಿದ್ದಾರೆ.

ಈ ಸಂಸ್ಥೆಗೆ ಟ್ರಂಪ್ ಅವರ ಚುನಾವಣಾ ಪ್ರಚಾರ ಸಭೆಗಳ ಆಯೋಜನೆ, ಬೆಂಬಲಿಗರಿಗೆ ನೆರವು ಸೇರಿದಂತೆ ಚುನಾವಣೆಗೆ ಮತದಾರರನ್ನು ಸಜ್ಜುಗೊಳಿಸಲು ಮತ್ತು ಮತದಾರರ ಪಟ್ಟಿಯಲ್ಲಿ ಹೆಸರನ್ನು ನೋಂದಾಯಿಸುವ ಜವಾಬ್ದಾರಿ ವಹಿಸಲಾಗಿದೆ. ಮಸ್ತ್ ತಮ್ಮ ಸಂಸ್ಥೆಯ ಮೂಲಕ ಟ್ರಂಪ್ ಬೆಂಬಲಿಗರನ್ನು ಮತ ಚಲಾಯಿಸಲು ಮತ್ತು ಇತರರನ್ನು ಮತ ಚಲಾಯಿಸುಂತೆ ಪ್ರೋತ್ಸಾಹಿಸಲು ಹಲವು ಯೋಜನೆಗಳನ್ನು ರೂಪಿಸಿದ್ದಾರೆ ಎನ್ನಲಾಗಿದೆ.

# ಮನೆಯಲ್ಲಿ ಡ್ರಗ್ಸ್ ಪತ್ತೆ ನಟಿ ಬಂಧನ



ಮನೆಯಲ್ಲಿ ನಿಷೇಧಿತ ಮಾದಕ ವಸ್ತು ಪತ್ತೆಯಾದ ಹಿನ್ನೆಲೆ ಮಲಯಾಳಿ ಕಿರುತೆರೆ ಧಾರಾವಾಹಿ ನಟಿಯನ್ನು ಪೊಲೀಸರು ಬಂಧಿಸಿದ್ದಾರೆ.

34 ವರ್ಷದ ಕಿರುತೆರೆ ಧಾರಾವಾಹಿ ನಟಿ ಶ್ಯಾಮ ನಾಥ್ ಅವರನ್ನು ಕೇರಳದ ಓಝುವುಪರದಲ್ಲಿರುವ ಅವರ ನಿವಾಸದಿಂದ ಪರವೂರು ಪೊಲೀಸರು ವಶಕ್ಕೆ ತೆಗೆದುಕೊಂಡಿದ್ದಾರೆ. ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರಿಗೆ ಆಕೆಯ ಮನೆಯಲ್ಲಿ ಸರಿಸುಮಾರು ಎರಡು ಮಿಲಿಗ್ರಾಂಗಳಷ್ಟು ಮೆಥಿಲೆನೆಡಿಯೋಕ್ಸಿಫೆನೆಥೈಲಮೈನ್ ಪತ್ತೆಯಾಗಿದೆ.

ಪೊಲೀಸ್ ಅಧಿಕಾರಿಗಳ ಪ್ರಕಾರ, ಶ್ಯಾಮನಾಥ್ ಅವರು ಕೆಲವು ದಿನಗಳಿಂದ ನಿಷೇಧಿತ ವಸ್ತುವನ್ನು ಬಳಸುತ್ತಿದ್ದರು ಎಂದು ಶಂಕಿಸಲಾಗಿದೆ. ಆಕೆಗೆ ಡ್ರಗ್ಸ್ ಪೂರೈಸಿದವರ ಪತ್ತೆಗೆ ಸದ್ಯ ತನಿಖೆ ನಡೆಯುತ್ತಿದೆ.

ನಟಿಯ ವಿರುದ್ಧ ನಾರ್ಕೋಟಿಕ್ ಡ್ರಗ್ಸ್ ಮತ್ತು ಸೈಕೋಟ್ರೋಪಿಕ್ ಸಬ್‌ಸ್ಟೆನ್ಸ್ ಆಕ್ಟ್‌ನ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಇಂತಹ ಘಟನೆಗಳು ಮನರಂಜನಾ ಉದ್ಯಮದಲ್ಲಿ ಮಾದಕ ವ್ಯಸನದ ಬಗ್ಗೆ ಕಳವಳ ಉಂಟು ಮಾಡಿದೆ. ಸೆಲೆಬ್ರಿಟಿಯೊಬ್ಬರು ಮಾದಕ ವಸ್ತು ಹೊಂದಿದ್ದಕ್ಕಾಗಿ ಕಾನೂನು ಕ್ರಮ ಎದುರಿಸುತ್ತಿರುವ ಮೊದಲ ನಿದರ್ಶನವಲ್ಲ ಎಂಬುದು ಗಮನಿಸಬೇಕಾದ ಸಂಗತಿ. ಸೂಪರ್‌ಸ್ಟಾರ್ ಶಾರುಖ್ ಖಾನ್ ಅವರ ಪುತ್ರ ಆರ್ಯನ್ ಖಾನ್ 2022 ರಲ್ಲಿ ಮಾದಕ ವಸ್ತು ದಂಧೆ ಪ್ರಕರಣದಲ್ಲಿ ಬಂಧಿತರಾಗಿದ್ದರು. ಆದರೆ ಪ್ರಕರಣದಲ್ಲಿ ಆರ್ಯನ್‌ಗೆ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಕ್ಲೀನ್ ಚಿಟ್ ನೀಡಿದೆ. 24 ವರ್ಷದ ಯುವಕ ಮುಂಬೈನ ಆರ್ಥರ್ ರೋಡ್ ಜೈಲಿನಲ್ಲಿ 22 ದಿನಗಳನ್ನು ಕಳೆದಿದ್ದ.

# ರುಕ್ಕುಗೂ ಚಾರುಗೂ ಇರುವ ಸಂಬಂಧ ಏನು



ಟಿಆರ್‌ಪಿಯಲ್ಲಿ ರಾಮಾಚಾರಿ ಧಾರಾವಾಹಿ ಕೂಡ ಒಳ್ಳೆಯ ಸ್ಥಾನದಲ್ಲಿದೆ. ಚಾರು ಹಾಗೂ ರಾಮಾಚಾರಿಯ ಜೋಡಿಯನ್ನು ಮೆಚ್ಚಿಕೊಳ್ಳುತ್ತಿದ್ದಾರೆ ಫ್ಯಾನ್ಸ್. ಮಾತ್ರವಲ್ಲ ಇದೀಗ ಸೀರಿಯಲ್ ಕಥೆ ನೋಡಿದರೆ ಅಂತ್ಯವಾಗುತ್ತಾ ಎಂದು ಪ್ರಶ್ನೆ ಇಡುತ್ತಿದ್ದಾರೆ ವೀಕ್ಷಕರು. ಹೌದು ಸದ್ಯ ಧಾರಾವಾಹಿಯಲ್ಲಿ ವೈಶಾಖಳ ಅಸಲಿ ಮುಖ ಬಯಲಾಗಿದೆ. ವೈಶಾಖಳ ಅಷ್ಟೂ ಮೋಸಗಳು ಮನೆಯವರ ಮುಂದೆ ಬಯಲಾಗಿದೆ. ಇನ್ನೇನು ಎಲ್ಲಾ ಮುಗೀತು ಅನ್ನೋಷ್ಟರಲ್ಲಿ ರುಕ್ಕು ಪಾತ್ರ ಉದ್ಭವಾಯ್ತು.

**ಹೊಸ ಪ್ರೋಮೋದಲ್ಲಿ ಏನಿದೆ**

ಇದೀಗ ಕಲರ್ಸ್ ವಾಹಿನಿ ಹೊಸ ಪ್ರೋಮೋ ಶೇರ್ ಮಾಡಿಕೊಂಡಿದೆ. ಇದರಲ್ಲಿ ಈಗ ಚಾರು ಹಿಂದಿನ ಜೀವನದ ಬಗ್ಗೆ ಕೂಡ ಕಥೆ ಇರಬಹುದು ಎಂದು ವೀಕ್ಷಕರು ಊಹಿಸುತ್ತಿದ್ದಾರೆ. ಚಾರು ಹಾಗೂ ರುಕ್ಕು ಅಕ್ಕ ತಂಗಿಯರೇ ಇರಬಹುದು ಎಂದು ವೀಕ್ಷಕರು ಊಹಿಸುತ್ತಿದ್ದಾರೆ.

ಇನ್ನು ನಾರಾಯಣ ಆಚಾರ್ ಮತ್ತೊಂದು ಮದುವೆಯಾಗಿಲ್ಲ ಎಂಬುದು ಮನೆಯವರ ಮುಂದೆ ರಿವೀಲ್ ಆಗಿದೆ. ಸದ್ಯ ಧಾರಾವಾಹಿಯಲ್ಲಿ ನಾರಾಯಣ ಆಚಾರ್ ಮತ್ತೊಂದು ಮದುವೆಯಾಗಿಲ್ಲ ಎಂಬ ಸತ್ಯ ರಿವೀಲ್ ಆಗಿದೆ. ಕಟ್ಟಿಕೊಂಡ ಪತ್ನಿಗೆ ನಾರಾಯಣಾಚಾರ್ ದ್ರೋಹ ಮಾಡಿದ್ದಾರೆ ಎಂದು ವೀಕ್ಷಕರು ಊಹಿಸಿದ್ದರು. ಈ ಸತ್ಯದ ಬೆನ್ನ ಹಿಂದೆ ಹೊರಟ್ಟಿದ್ದು ಚಾರು, ರಾಮಾಚಾರಿ.

ಇದಕ್ಕೂ ಮುಂಚೆ ವೈಶಾಖ ಇಷ್ಟೂ ದಿನ ನಾರಾಯಣಾಚಾರ್‌ಗೆ ಎರಡನೇ ಪತ್ನಿ ಇದ್ದಾಳೆ. ಅವಳೇ ಸತ್ಯಭಾಮಾ ಎಂದೆಲ್ಲ ಹೇಳಿದ್ದಳು. ಆದರೆ ಈಗ ಅದೆಲ್ಲ ಸುಳ್ಳು ಎಂಬುದು ರಿವೀಲ್ ಆಗಿದೆ. ಸತ್ಯಭಾಮಾ ಜಾನಕಿಯ ಸ್ನೇಹಿತೆ!

ಸತ್ಯ ಭಾಮ ಮನೆಗೆ ಜಾನಕಿ ಬಂದಾಗ, ತನ್ನ ಆಪ್ತಗೆಳತಿ ಸತ್ಯ ಎಂಬುದು ಜಾನಕಿಗೆ ಗೊತ್ತಾಗುತ್ತದೆ. ಹಾರ್ಮೋನಿಯಂ ವಾದಕ ವೇಣುಗೋಪಾಲ್ ಅವರನ್ನ ಸತ್ಯಭಾಮೆ ಪ್ರೀತಿಸುತ್ತಿದ್ದಳು. ಮದುವೆಗೂ ಮುನ್ನವೇ ಗರ್ಭಿಣಿಯಾಗಿದ್ದಳು. ಆದರೆ ಮದುವೆ ಆಗೋ ಅಷ್ಟರಲ್ಲಿ ಮನೆಯವರು ಬಂದು ವೇಣುಗೋಪಾಲ್‌ರನ್ನ ಕರೆದುಕೊಂಡು ಹೋಗಿದ್ದರು.

ಹೀಗಾಗಿ ಜಗತ್ತಿನ ಕಣ್ಣಿಗೆ ನಾರಾಯಣಾಚಾರ್ ಅಪ್ಪನಾಗಿ ಇರುವ ಸತ್ಯ ಹೊರ ಹಾಕಿದ್ದಾಳೆ. ಒಟ್ಟಿನಲ್ಲಿ ಸತ್ಯಭಾಮೆ ನಾರಾಯಣ ಆಚಾರ್ ಅವರ ಈ ಗುಣವನ್ನು ರಿವೀಲ್ ಮಾಡಿದ್ದಾರೆ. ರಾಮಾಚಾರಿ ಕಲರ್ಸ್ ಕನ್ನಡದಲ್ಲಿ ಪ್ರಸಾರ ಆಗುತ್ತಿರುವ ಧಾರಾವಾಹಿಯಾಗಿದೆ. ಈ ಧಾರಾವಾಹಿಯಲ್ಲಿ ರಾಮಾಚಾರಿ ಹಾಗೂ ಕಿಟ್ಟಿ ಎಂಬ ಎರಡು ಅವಳಿ ಜವಳಿ ಮಕ್ಕಳಿರುತ್ತಾರೆ. ಅವರು ಕುಟುಂಬದಿಂದ ದೂರಾಗಿ ಹೇಗೆ ತಮ್ಮ ಜೀವನವನ್ನು ನಿಭಾಯಿಸುತ್ತಾರೆ ಅನ್ನೋದೇ ಈ ಧಾರಾವಾಹಿಯ ಮುಖ್ಯ ಕಥೆಯಾಗಿದೆ.

# ಕನ್ನಡದಲ್ಲಿ ಮಾತನಾಡಿದ ದೀಪಿಕಾ ಪಡುಕೋಣೆ



ದೀಪಿಕಾ ಪಡುಕೋಣೆ ಅವರು ಕರ್ನಾಟಕದವರು. ಅವರು ಬೆಳೆದಿದ್ದು ಬೆಂಗಳೂರಿನಲ್ಲಿ. ಅವರು ಶಿಕ್ಷಣ ಪಡೆದಿದ್ದು ಕೂಡ ಬೆಂಗಳೂರಿನವರೇ.

ಅವರಿಗೆ ಕನ್ನಡ ಬರುತ್ತದೆ. ಅವರು ಕನ್ನಡ ಸಿನಿಮಾದಲ್ಲಿ ಈ ಮೊದಲು ನಟಿಸಿದ್ದರು. ಈಗ ಅವರ ಹಳೆಯ ವಿಡಿಯೋ ಒಂದು ವೈರಲ್ ಆಗಿದೆ. ಈ ವಿಡಿಯೋದಲ್ಲಿ ದೀಪಿಕಾ ಪಡುಕೋಣೆ ಅವರು ಕನ್ನಡದಲ್ಲಿ ಮಾತನಾಡಿದ್ದರು. ದೀಪಿಕಾ ಪಡುಕೋಣೆ ಅವರು ಈ ಮೊದಲು ಖಿನ್ನತೆಗೆ ಒಳಗಾಗಿದ್ದರು. ಅದನ್ನು ಓಪನ್ ಆಗಿ ಹೇಳಿಕೊಂಡಿದ್ದರು. ಈ ವಿಚಾರಕ್ಕೆ ಅವರು ಇಷ್ಟ ಆಗುತ್ತಾರೆ. ಅವರು ಅಭಿಮಾನಿಗಳಲ್ಲಿ ಈ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಾರೆ. ಖಿನ್ನತೆಗೆ ಒಳಗಾದಾಗ ಈ ಬಗ್ಗೆ ಅವರು ಹೇಳಿಕೊಂಡಿದ್ದರು. ಈಗ ಕನ್ನಡದಲ್ಲೇ ಮಾತನಾಡಿದ್ದರು. 'ಖಿನ್ನತೆಗೆ ನನಗೆ ಔಷಧ ನೀಡಿದ್ದರು. ನಾನು ಅದನ್ನು ತೆಗೆದುಕೊಂಡಿದ್ದೀನಾ ಎಂದು ನನ್ನ ಅಮ್ಮ ಕೇಳುತ್ತಿದ್ದರು. ಕಾಳಜಿಯಿಂದ ಈ ಮಾತನ್ನು ಅಮ್ಮ ಕೇಳುತ್ತಿದ್ದರು. ನನಗೆ ಖಿನ್ನತೆ ಹೆಚ್ಚುತ್ತಿದೆ ಎನಿಸಿತು, ಹೀಗಾಗಿ ನಾನು ಔಷಧ ತೆಗೆದುಕೊಳ್ಳೋಕೆ ಆರಂಭಿಸಿದೆ. ನನ್ನ ಸ್ಟೋರಿನ ಎಲ್ಲಾರಿಗೂ ಹೇಳ್ತೀನಿ. ಇದರಿಂದ ಕೆಲವರಿಗೆ ಸಹಾಯ ಆಗಿದ್ದರೆ ಅದು ಒಳ್ಳೆಯ ವಿಚಾರ' ಎಂದಿದ್ದಾರೆ ಅವರು. 'ನಾನು ಔಷಧಿ ತೆಗೆದುಕೊಳ್ಳುವುದರ ಜೊತೆಗೆ ಒಳ್ಳೆಯ ಆಹಾರ, ವ್ಯಾಯಾಮ, ನಿದ್ದೆ ಹಾಗೂ ಒತ್ತಡದಿಂದ ದೂರ ಆಗಿದ್ದೇನೆ.

**ಖಿನ್ನತೆಗೆ ನನಗೆ ಔಷಧ ನೀಡಿದ್ದರು**

# ಎಲ್ಲಿಗೆ ಪಯಣ ಯಾವುದೋ ದಾರಿ: ಸಾಂಗ್ ಬಿಡುಗಡೆ

ಅಭಿಮನ್ಯು ಕಾಶಿನಾಥ್ ನಾಯಕನಾಗಿ ನಟಿಸಿರುವ 'ಎಲ್ಲಿಗೆ ಪಯಣ ಯಾವುದೋ ದಾರಿ' ಚಿತ್ರ ಇದೇ ಅಕ್ಟೋಬರ್ 25ರಂದು ಬಿಡುಗಡೆಗೊಳ್ಳಲಿದೆ. ಇತ್ತೀಚೆಗಷ್ಟೇ ಈ ಸಿನಿಮಾದ ಟ್ರೈಲರ್ ಬಿಡುಗಡೆಗೊಂಡಿತ್ತು. ಇದೀಗ ಸಂಸದ, ಖ್ಯಾತ ವೈದ್ಯ ಡಾ.ಮಂಜುನಾಥ್ ಈ ಚಿತ್ರದ 'ನೀನಿರು ಸಾಕು' ಎಂಬ ಲಿರಿಕಲ್ ವೀಡಿಯೋ ಸಾಂಗ್ ಅನ್ನು ಬಿಡುಗಡೆಗೊಳಿಸಿದ್ದಾರೆ. ನಟ, ನಿರ್ದೇಶಕ ಕಾಶಿನಾಥ್ ಅವರನ್ನು ನೆನೆಸಿಕೊಳ್ಳುತ್ತಲೇ, ಅವರ ಪುತ್ರ ಅಭಿಮನ್ಯು ಕಾಶೀನಾಥ್‌ಗೆ ಶುಭಕೋರಿದ್ದಾರೆ. ಚಿತ್ರದ ಲಿರಿಕಲ್ ವೀಡಿಯೋ ಸಾಂಗ್ ಅನ್ನು ಡಾಕ್ಟರ್ ಮಂಜುನಾಥ್ ರಿಲೀಸ್ ಮಾಡಿದ್ದಾರೆ. ಕಾಶೀನಾಥ್ ಅವರು ನಟನಾಗಿ, ನಿರ್ದೇಶಕರಾಗಿ ಕನ್ನಡ ಚಿತ್ರರಂಗ ಹಾಗೂ ಸಿನಿಮಾ ಪ್ರೇಮಿಗಳಿಗೆಲ್ಲ ಚಿರಪರಿಚಿತರು. ವಿಶಿಷ್ಟ ಪ್ರತಿಭೆಯಿಂದಲೇ ಪ್ರಸಿದ್ಧಿ ಪಡೆದವರು. ಅವರ ಪುತ್ರ ಅಭಿಮನ್ಯು ಕಾಶಿನಾಥ್ ನಾಯಕನಾಗಿ ನಟಿಸಿರುವ ಎಲ್ಲಿಗೆ ಪಯಣ ಯಾವುದೋ ದಾರಿ ಚಿತ್ರವೀಗ ಬಿಡುಗಡೆಗೆ ತಯಾರಾಗಿದೆ. ಈ ಚಿತ್ರವನ್ನು ಎಲ್ಲಾರೂ ಚಿತ್ರಮಂದಿರಗಳಲ್ಲಿ ನೋಡುವ ಮೂಲಕ ಬೆಂಬಲಿಸಬೇಕಿದೆ.



**ಅಭಿಮನ್ಯು ಕಾಶೀನಾಥ್‌ಗೆ ಶುಭಕೋರಿದ ಡಾ.ಮಂಜುನಾಥ್**

ಕಾಶೀನಾಥ್ ಎಂಬ ಹೆಸರೇ ಒಂದು ಬ್ರ್ಯಾಂಡ್ ಇದ್ದಂತೆ. ಅವರ ಮಗ ಅಭಿಮನ್ಯು ಕೂಡ ಅದೇ ಎತ್ತರಕ್ಕೇರಲಿ ಎಂದು ಹಾರೈಸುತ್ತಾ, ಡಾ.ಮಂಜುನಾಥ್ ಅವರು ಚಿತ್ರತಂಡಕ್ಕೆ ಶುಭ ಕೋರಿದ್ದಾರೆ. ಅರೆ ಏನಿದು ಕರೆದಂತಿದೆ ಮರೆಯಿಂದ ನೀ ನನ್ನನೇ ಅಂತ ಶುರುವಾಗುವ ಈ ಹಾಡಿಗೆ ಪ್ರಮೋದ್ ಮರವಂತೆ ಸಾಹಿತ್ಯ ಒದಗಿಸಿದ್ದಾರೆ. ವಾಸುಕಿ ವೈಭವ್ ಹಾಗೂ ಶ್ರೀಲಕ್ಷ್ಮಿ ಬೆಳ್ಮಣ್ಣು ಕಂಠಸಿರಿಯಲ್ಲಿ ಮೂಡಿ ಬಂದಿರುವ ಈ ಮೆಲೋಡಿಯಸ್ ಸಾಂಗಿಗೆ ಪ್ರಣವ್ ರಾವ್ ಸಂಗೀತ ಸಂಯೋಜನೆ ಮಾಡಿದ್ದಾರೆ. ವಿಶೇಷವೆಂದರೆ, ಕಿಚ್ಚ ಸುದೀಪ್ ಈ ಸಿನಿಮಾಕ್ಕಾಗಿ ಒಂದು ಹಾಡನ್ನು ಹಾಡಿದ್ದಾರೆ. ಕಿರಣ್ ಎಸ್ ಸೂರ್ಯ ನಿರ್ದೇಶನದಲ್ಲಿ ಮೂಡಿ ಬಂದಿರುವ ಈ ಚಿತ್ರ ಸೂಕ್ಷ್ಮ ಕಥಾನಕವನ್ನೊಳಗೊಂಡಿದೆ. ಈಗಾಗಲೇ ಲಾಂಚ್ ಆಗಿರುವ ಟೀಸರ್ ಮತ್ತು ಟ್ರೈಲರ್ ಮೂಲಕ ಒಟ್ಟಾರೆ ಚಿತ್ರದ ಝಲಕ್ಕುಗಳು ಪ್ರೇಕ್ಷಕರ ಮುಂದೆ ಅನಾವರಣಗೊಂಡಿವೆ. ಸುದರ್ಶನ್ ಆರ್ಟ್ಸ್ ಬ್ಯಾನರಿನಡಿಯಲ್ಲಿ ಜತಿನ್ ಪಟೇಲ್ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಕಿರಣ್ ಎಸ್ ಸೂರ್ಯ ನಿರ್ದೇಶನ ಮಾಡಿದ್ದಾರೆ. ಅಭಿಮನ್ಯು ಕಾಶಿನಾಥ್, ಸ್ಫೂರ್ತಿ ಉಡಿಮನೆ ಜೋಡಿಯಾಗಿ ನಟಿಸಿದ್ದಾರೆ. ವಿಜಯಶ್ರೀ ಕಲ್ಬುರ್ಗಿ ಪ್ರಧಾನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಬಲರಾಜ್ವಾಡಿ, ಶೋಭನ್, ಪ್ರದೀಪ್, ರಮೇಶ್ ನಾಯಕ್, ರಿನಿ ಮುಂತಾದವರ ತಾರಾಗಣವಿದೆ. ಸತ್ಯ ರಾಮ್ ಛಾಯಾಗ್ರಹಣ, ಗಣೇಶ್ ನಿರ್ಚಲ್ ಸಂಕಲನ, ಪ್ರಮೋದ್ ಮರವಂತೆ, ಕಿರಣ್ ಎಸ್ ಸೂರ್ಯ ಸಾಹಿತ್ಯ, ಜೀವನ್ ನೃತ್ಯ ನಿರ್ದೇಶನ, ಚಂದ್ರು ಸಾಹಸ ನಿರ್ದೇಶನವಿದೆ.

# ಉಳಿಸಿಕೊಂಡ ಆರು ಆಟಗಾರರು ಯಾರೆಲ್ಲಾ ಗೊತ್ತಾ

ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್ 2025) ಮೆಗಾ ಹರಾಜಿಗೂ ಮುನ್ನ ಒಟ್ಟು 6 ಆಟಗಾರರನ್ನು ರಿಟೈನ್ ಮಾಡಿಕೊಳ್ಳಬಹುದು. ಹೀಗೆ ಆರು ಆಟಗಾರರನ್ನು ರಿಟೈನ್ ಮಾಡಲು ಬಯಸಿದರೆ ಹರಾಜು ಮೊತ್ತದಿಂದ 79 ಕೋಟಿ ರೂ. ವ್ಯಯಿಸಬೇಕಾಗುತ್ತದೆ. ಹಾಗೆಯೇ ಐವರನ್ನು ಉಳಿಸಿಕೊಳ್ಳಲು



ಬಯಸಿದರೆ 75 ಕೋಟಿ ರೂ. ಖರ್ಚು ಮಾಡಬೇಕಾಗುತ್ತದೆ. ಐಪಿಎಲ್ ಇತಿಹಾಸದಲ್ಲಿ ಮೆಗಾ ಹರಾಜು ನಡೆದಿರುವುದು ಕೇವಲ ನಾಲ್ಕು ಬಾರಿ ಮಾತ್ರ. ಈ ವೇಳೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಉಳಿಸಿಕೊಂಡಿದ್ದು ಕೇವಲ ಆರು ಆಟಗಾರರನ್ನು ಮಾತ್ರ. ಇವರಲ್ಲಿ ಆರ್‌ಸಿಬಿ ತಂಡದ ಮೊದಲ ರಿಟೈನ್ ಆಟಗಾರ ವಿರಾಟ್ ಕೊಹ್ಲಿ ಎಂಬುದು ವಿಶೇಷ. 2011 ರಲ್ಲಿ ನಡೆದ ಮೊದಲ ಮೆಗಾ ಹರಾಜಿಗೂ ಮುನ್ನ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ವಿರಾಟ್ ಕೊಹ್ಲಿಯನ್ನು ಮಾತ್ರ ರಿಟೈನ್ ಮಾಡಿಕೊಂಡಿತ್ತು. ಅಂದು ಆರ್‌ಸಿಬಿ 8.20 ಕೋಟಿ ರೂ. ನೀಡಿ ಕಿಂಗ್ ಕೊಹ್ಲಿಯನ್ನು ತಂಡದಲ್ಲೇ ಉಳಿಸಿಕೊಳ್ಳಲು ಯಶಸ್ವಿಯಾಗಿದ್ದರು. ಇದಾದ ಬಳಿಕ ಮೆಗಾ ಹರಾಜು ನಡೆದಿದ್ದು 2014 ರಲ್ಲಿ. ಈ ಹರಾಜಿಗೂ ಮುನ್ನ ಆರ್‌ಸಿಬಿ ಮೂವರು ಆಟಗಾರರನ್ನು ರಿಟೈನ್ ಮಾಡಿಕೊಂಡಿತ್ತು. ಹೀಗೆ ರಿಟೈನ್ ಆದ ಆಟಗಾರರೆಂದರೆ ವಿರಾಟ್ ಕೊಹ್ಲಿ, ಕ್ರಿಸ್ ಗೇಲ್ ಹಾಗೂ ಎಬಿ ಡಿವಿಲಿಯರ್ಸ್. ಅಂದು ಆರ್‌ಸಿಬಿ ಕೊಹ್ಲಿಗೆ 12.50 ಕೋಟಿ ರೂ. ನೀಡಿದರೆ, ಕ್ರಿಸ್ ಗೇಲ್‌ಗೆ 7.50 ಕೋಟಿ ರೂ. ಹಾಗೂ ಎಬಿಡಿಗೆ 9.50 ಕೋಟಿ ರೂ. ಪಾವತಿಸಿದ್ದರು. ಇನ್ನು ಮೂರನೇ ಮೆಗಾ ಹರಾಜು ನಡೆದದ್ದು 2018 ರಲ್ಲಿ. ಈ ಮೆಗಾ ಆಕ್ಷನ್‌ಗೂ ಮುನ್ನ ಆರ್‌ಸಿಬಿ ವಿರಾಟ್ ಕೊಹ್ಲಿ, ಎಬಿ ಡಿವಿಲಿಯರ್ಸ್ ಹಾಗೂ ಸರ್ಫರಾಝ್ ಖಾನ್ ಅವರನ್ನು ತಂಡದಲ್ಲೇ ಉಳಿಸಿಕೊಂಡಿದ್ದರು. ಅಂದು ಕೊಹ್ಲಿ 17 ಕೋಟಿ ರೂ. ಪಡೆದರೆ, ಡಿವಿಲಿಯರ್ಸ್ 11 ಕೋಟಿ ರೂ. ನೀಡಲಾಗಿತ್ತು. ಹಾಗೆಯೇ ಸರ್ಫರಾಝ್ ಖಾನ್‌ಗೆ 3 ಕೋಟಿ ರೂ. ನೀಡಲಾಗಿತ್ತು. 2022 ರಲ್ಲಿ ನಡೆದ ಮೆಗಾ ಹರಾಜಿಗೂ ಮುನ್ನ ಆರ್‌ಸಿಬಿ ವಿರಾಟ್ ಕೊಹ್ಲಿ, ಮೊಹಮ್ಮದ್ ಸಿರಾಜ್ ಹಾಗೂ ಗ್ಲೆನ್ ಮ್ಯಾಕ್ಸ್‌ವೆಲ್ ಅವರನ್ನು ರಿಟೈನ್ ಮಾಡಿಕೊಂಡಿದ್ದರು. ಈ ವೇಳೆ ಕೊಹ್ಲಿಗೆ ನೀಡಲಾದ ಮೊತ್ತ 15 ಕೋಟಿ ರೂ. ಇನ್ನು ಗ್ಲೆನ್ ಮ್ಯಾಕ್ಸ್‌ವೆಲ್ 11 ಕೋಟಿ ರೂ. ಪಡೆದಿದ್ದರು.

# 'ಟಾಸ್ ಗೆದ್ದಿದ್ದರೆ ನಾವು ಕೂಡ..'; ಕಿವೀಸ್ ಗೆಲುವಿಗೆ ವರವಾಯ್ತು ಟಾಸ್ ಸೋಲು

ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಭಾರತ ಮತ್ತು ನ್ಯೂಜಿಲೆಂಡ್ ನಡುವಿನ 3 ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯವನ್ನು ಕಿವೀಸ್ 8 ವಿಕೆಟ್‌ಗಳಿಂದ ಗೆದ್ದುಕೊಂಡಿದೆ. ಇದರೊಂದಿಗೆ ಬರೋಬ್ಬರಿ 36 ವರ್ಷಗಳ ನಂತರ ಕಿವೀಸ್ ಪಡೆ ಟೀಂ ಇಂಡಿಯಾವನ್ನು ತವರಿನಲ್ಲಿ ಮಣಿಸುವ ಮೂಲಕ ಭಾರತದ ನೆಲದಲ್ಲಿ ಮೂರನೇ ಟೆಸ್ಟ್ ಪಂದ್ಯ ಗೆದ್ದ ದಾಖಲೆ ಬರೆದಿದೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತವನ್ನು 46 ರನ್‌ಗಳಿಗೆ ಆಲೌಟ್ ಮಾಡಿದ ಕಿವೀಸ್ ಪಡೆ, ಮೊದಲ ಇನ್ನಿಂಗ್ಸ್‌ನಲ್ಲಿ 402 ರನ್ ಗಳಿಸಿತು. ಇದಕ್ಕುತ್ತರವಾಗಿ ಭಾರತ 462 ರನ್ ಕಲೆಹಾಕಿ ಪ್ರವಾಸಿ ತಂಡಕ್ಕೆ 107 ರನ್‌ಗಳ ಗುರಿ ನೀಡಿತು. ಈ ಗುರಿಯನ್ನು ಕಿವೀಸ್ ತಂಡ ಸುಲಭವಾಗಿ ಸಾಧಿಸಿತು. ಈ ಐತಿಹಾಸಿಕ ವಿಜಯದ ನಂತರ ಮಾತನಾಡಿದ ಕಿವೀಸ್ ನಾಯಕ ಟಾಮ್ ಲೇಥಮ್ ಅಚ್ಚರಿಯ ಹೇಳಿಕೆ ನೀಡಿದ್ದಾರೆ. ಟಾಸ್ ಗೆದ್ದಿದ್ದರೆ ನಾವು ಸಹ ವಾಸ್ತವವಾಗಿ ಬೆಂಗಳೂರು ಟೆಸ್ಟ್‌ನಲ್ಲಿ ಟೀಂ ಇಂಡಿಯಾ ಸೋಲಿನ ನಂತರ ಹಲವು ಪ್ರಶ್ನೆಗಳು ಉದ್ಭವಿಸುತ್ತಿವೆ. ಅದರಲ್ಲಿ ಪ್ರಮುಖವಾಗಿ ಟಾಸ್ ಗೆದ್ದ ರೋಹಿತ್ ಶರ್ಮಾ ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದ್ದು ಹಲವರ ಅಸಮಾಧಾನಕ್ಕೆ



**8 ವಿಕೆಟ್‌ಗಳಿಂದ ಗೆದ್ದ ಕಿವೀಸ್**

**ಕಿವೀಸ್ ಗೆಲುವಿಗೆ ವರವಾಯ್ತು ಟಾಸ್ ಸೋಲು**

**ಬೆಂಗಳೂರು ಟೆಸ್ಟ್ ಪಂದ್ಯವನ್ನು ಗೆದ್ದ ನಂತರ ಮಾತನಾಡಿದ ನ್ಯೂಜಿಲೆಂಡ್ ತಂಡದ ನಾಯಕ ಟಾಮ್ ಲೇಥಮ್, ಒಂದು ವೇಳೆ ಈ ಪಂದ್ಯದಲ್ಲಿ ಟಾಸ್ ಗೆದ್ದಿದ್ದರೆ, ನಾವು ಕೂಡ ಮೊದಲು ಬ್ಯಾಟಿಂಗ್ ಮಾಡುತ್ತಿದ್ದವು. ಕೊನೆಯಲ್ಲಿ ಟಾಸ್ ಸೋತಿದ್ದು ಒಳ್ಳೆಯದಾಯಿತು ಎಂದಿದ್ದಾರೆ. ಇದರರ್ಥ ಟಾಸ್ ಫಲಿತಾಂಶ ನ್ಯೂಜಿಲೆಂಡ್ ಪರವಾಗಿದ್ದರೆ, ಇಂದಿನ ಪಂದ್ಯದ ಫಲಿತಾಂಶವೇ ಬೇರೆಯಾಗಬಹುದಿತ್ತು. ಆದರೆ ಈಗ ಎಲ್ಲಾವೂ ಕಿವೀಸ್ ತಂಡದ ಪರವಾಗಿದೆ.**

ಕಾರಣವಾಗಿದೆ. ಈ ನಿರ್ಧಾರ ತಂಡದ ಸೋಲಿಗೆ ಪ್ರಮುಖ ಕಾರಣವಾಯಿತು ಎಂಬುದನ್ನು ಸ್ವತಃ ರೋಹಿತ್ ಅವರೇ ಒಪ್ಪಿಕೊಂಡಿದ್ದಾರೆ. ಇದು ಒಂದೆಡೆಯಾದರೆ, ಪಂದ್ಯ ಮುಗಿದ ಬಳಿಕ ಮಾತನಾಡಿದ ಕಿವೀಸ್ ನಾಯಕ ಟಾಮ್ ಲೇಥಮ್ ಕೂಡ, ಟಾಸ್ ಗೆದ್ದಿದ್ದರೆ ನಾವು ಸಹ ಮೊದಲು ಬ್ಯಾಟಿಂಗ್ ಮಾಡುತ್ತಿದ್ದೇವು ಎಂದಿದ್ದಾರೆ.

ಬೆಂಗಳೂರು ಟೆಸ್ಟ್‌ನಲ್ಲಿ ಭಾರತ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿತು. ನಂತರ ಟೀಂ ಇಂಡಿಯಾ ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ 46 ರನ್‌ಗಳಿಗೆ ಆಲೌಟ್ ಆಯಿತು. ತಂಡದ ಪರ 5 ಬ್ಯಾಟ್ಸ್‌ಮನ್‌ಗಳಿಗೆ ಮೊದಲ ಇನ್ನಿಂಗ್ಸ್‌ನಲ್ಲಿ ಖಾತೆ ತೆರೆಯಲು ಸಾಧ್ಯವಾಗಲಿಲ್ಲ. ಆದರೆ ನ್ಯೂಜಿಲೆಂಡ್ ಮೊದಲ ಇನ್ನಿಂಗ್ಸ್‌ನಲ್ಲಿ ಅದ್ಭುತ ಬ್ಯಾಟಿಂಗ್ ಮಾಡಿ 356 ರನ್‌ಗಳ ಮುನ್ನಡೆ ಸಾಧಿಸಿತು. ಅದರ ನಂತರ ಟೀಂ ಇಂಡಿಯಾ ಎರಡನೇ ಇನ್ನಿಂಗ್ಸ್‌ನಲ್ಲಿ ಖಂಡಿತವಾಗಿಯೂ ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿ 106 ರನ್‌ಗಳ ಮುನ್ನಡೆ ಸಾಧಿಸಿತು. ಬಳಿಕ ಪಂದ್ಯದ ಕೊನೆಯ ದಿನವಾದ ಇಂದು 107 ರನ್‌ಗಳ ಗುರಿಯನ್ನು ನ್ಯೂಜಿಲೆಂಡ್ ಕೇವಲ 2 ವಿಕೆಟ್ ಕಳೆದುಕೊಂಡು ಸಾಧಿಸಿತು.

# ಬೆಂಗಳೂರಿನಲ್ಲಿ ಮಿಂಚುವ ಕಿವೀಸ್ ಕನ್ನಡಿಗ

**ರವೀಂದ್ರ ಭರ್ಜರಿ ಪ್ರದರ್ಶನ**



ರಚಿನ್ ರವೀಂದ್ರ, ಅವರ ಪೋಷಕರು ಮೂಲತಃ ಬೆಂಗಳೂರಿನವರು. ಸಾಫ್ಟ್‌ವೇರ್ ಸಿಸ್ಟಮ್ ಆರ್ಕಿಟೆಕ್ಟ್ ಆಗಿರುವ ರವೀಂದ್ರ ಕೃಷ್ಣಮೂರ್ತಿ ಹಾಗೂ ದೀಪಾ ಕೃಷ್ಣಮೂರ್ತಿ 1990ರಲ್ಲಿ ನ್ಯೂಝಿಲೆಂಡ್‌ಗೆ ತೆರಳಿ ಅಲ್ಲಿಯೇ ನೆಲೆಸಿದ್ದರು. ಇದೀಗ ಮಗ ರಚಿನ್ ರವೀಂದ್ರ, ನ್ಯೂಝಿಲೆಂಡ್ ಪರ ಕಣಕ್ಕಿಳಿಯುತ್ತಿದ್ದಾರೆ. ನ್ಯೂಝಿಲೆಂಡ್ ತಂಡದ ಭರವಸೆಯ ಯುವ ಆಲ್‌ರೌಂಡರ್ ರಚಿನ್ ರವೀಂದ್ರ ಹಾಗೂ ಬೆಂಗಳೂರಿಗೂ ಬಿಡಿಸಲಾಗದ ನಂಟಿರುವುದು ಗೊತ್ತೇ ಇದೆ. ಈ ನಂಟಿಯೊಂದಿಗೆ ಯುವ ದಾಂಡಿಗ ತವರಿನಲ್ಲಿ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸುತ್ತಿರುವುದೇ ವಿಶೇಷ.

ಅಂದರೆ ರಚಿನ್ ರವೀಂದ್ರ, ಅವರ ಪೋಷಕರು ಬೆಂಗಳೂರು ಮೂಲದವರು.

ಅವರ ಕುಟುಂಬಸ್ಥರು ಈಗಲೂ ಬೆಂಗಳೂರಿನಲ್ಲಿದ್ದಾರೆ. ಅದರಲ್ಲೂ ಬೆಂಗಳೂರಿನಲ್ಲಿ ಆಡಿದ ಚೊಚ್ಚಲ ಟೆಸ್ಟ್ ಪಂದ್ಯವನ್ನು ವೀಕ್ಷಿಸಲು ರಚಿನ್ ಅವರ ತಂದೆ ರವೀಂದ್ರ ಕೃಷ್ಣಮೂರ್ತಿ ಆಗಮಿಸಿದ್ದರು. ಆದರೆ ತಂದೆಯ ನಿರೀಕ್ಷೆಯನ್ನು ರಚಿನ್ ರವೀಂದ್ರ ಹುಸಿ ಮಾಡಲಿಲ್ಲ. ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಭರ್ಜರಿ ಶತಕ ಸಿಡಿಸಿ ಬ್ಯಾಟ್ ಮೇಲೆಕ್ಕೆತ್ತಿ ಸಂಭ್ರಮಿಸಿದರು. ಈ ಸಂಭ್ರಮದೊಂದಿಗೆ ಬೆಂಗಳೂರು ಮೈದಾನದೊಂದಿಗೆ ತನ್ನ ನಂಟನ್ನು ವಿಶ್ವಕ್ಕೆ ಸಾರಿ ಹೇಳಿದ್ದಾರೆ. ಹೌದು, ರಚಿನ್ ರವೀಂದ್ರ ಬೆಂಗಳೂರಿನಲ್ಲಿ ಆಡಿರುವುದು ಕೇವಲ ನಾಲ್ಕು ಇನಿಂಗ್ಸ್‌ಗಳು ಮಾತ್ರ. ಈ ನಾಲ್ಕು ಇನಿಂಗ್ಸ್‌ಗಳಲ್ಲಿ ಯುವ ದಾಂಡಿಗನ ಬ್ಯಾಟ್‌ನಿಂದ 2 ಶತಕಗಳು ಹಾಗೂ ಒಂದು ಅರ್ಧ ಶತಕ ಮೂಡಿಬಂದಿವೆ. ಮತ್ತೊಂದು ಇನಿಂಗ್ಸ್‌ನಲ್ಲಿ ನಲ್ವತ್ತರ ಗಡಿದಾಟಿದ್ದಾರೆ. ಅಂದರೆ ತಂದೆಯ ತವರಿನಲ್ಲಿ ರಚಿನ್ ಬ್ಯಾಟ್ ಝುಳಪಳಿಸುತ್ತಿರುವುದಂತು ಸುಳ್ಳಲ್ಲ.

ಇದಕ್ಕೆ ಸಾಕ್ಷಿಯೇ ಈ ಅಂಕಿ ಅಂಶಗಳು. 2023 ರಲ್ಲಿ ನಡೆದ ಪಾಕಿಸ್ತಾನ್ ವಿರುದ್ಧದ ಪಂದ್ಯದಲ್ಲಿ ರಚಿನ್ ರವೀಂದ್ರ ಮೊದಲ ಬಾರಿಗೆ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಕಣಕ್ಕಿಳಿದಿದ್ದರು. ಈ ಚೊಚ್ಚಲ ಪಂದ್ಯದಲ್ಲಿ 94 ಎಸೆತಗಳಲ್ಲಿ 108 ರನ್ ಬಾರಿಸಿ ಅಬ್ಬರಿಸಿದ್ದರು. ಇದಾದ ಬಳಿಕ ಇದೇ ಮೈದಾನದಲ್ಲಿ ಶ್ರೀಲಂಕಾ ವಿರುದ್ಧ 34 ಎಸೆತಗಳಲ್ಲಿ 42 ರನ್ ಚಚ್ಚಿದ್ದರು. ಇನ್ನು ಐಪಿಎಲ್ 2024 ರಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಪರ ಕಣಕ್ಕಿಳಿದ ರಚಿನ್ ರವೀಂದ್ರ, ಆರ್‌ಸಿಬಿ ವಿರುದ್ಧ ಇದೇ ಮೈದಾನದಲ್ಲಿ 37 ಎಸೆತಗಳಲ್ಲಿ 63 ರನ್ ಬಾರಿಸಿದ್ದರು. ಇದೀಗ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಭಾರತದ ವಿರುದ್ಧ 134 ರನ್‌ಗಳ ಭರ್ಜರಿ ಶತಕ ಸಿಡಿಸಿದ್ದಾರೆ. ಅಂದರೆ ಬೆಂಗಳೂರಿನಲ್ಲಿ ಆಡಿದ ಎಲ್ಲಾ ಪಂದ್ಯಗಳಲ್ಲೂ ರಚಿನ್ ರವೀಂದ್ರ ಅತ್ಯುತ್ತಮ ಪ್ರದರ್ಶನವನ್ನೇ ನೀಡಿದ್ದಾರೆ. ಹೀಗಾಗಿಯೇ ಇದೀಗ ಎಂ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಕಿವೀಸ್ ಕನ್ನಡಿಗ ರಚಿನ್ ರವೀಂದ್ರ ಅವರಿಂದ ಭರ್ಜರಿ ಪ್ರದರ್ಶನ ಮೂಡಿಬರುವುದು ಖಚಿತ ಎನ್ನಲಾಗುತ್ತಿದೆ. ಅದರಲ್ಲೂ ಬೆಂಗಳೂರಿನಲ್ಲಿ ಆಡಿದ ಮೊದಲ ಟೆಸ್ಟ್ ಪಂದ್ಯದಲ್ಲಿ ಪಂದ್ಯ ಶ್ರೇಷ್ಠ ಪ್ರಶಸ್ತಿಯನ್ನು ಸಹ ತಮ್ಮದಾಗಿಸಿಕೊಂಡಿದ್ದಾರೆ. ಹೀಗಾಗಿ ಮುಂಬರುವ ದಿನಗಳಲ್ಲೂ ಕಿವೀಸ್ ಕನ್ನಡಿಗನಿಂದ ಬೆಂಗಳೂರಿನಲ್ಲಿ ಅತ್ಯುತ್ತಮ ಪ್ರದರ್ಶನವನ್ನು ನಿರೀಕ್ಷಿಸಬಹುದು.

# ಟೀಂ ಇಂಡಿಯಾಗೆ ಶತಕ ವೀರನ ಆಗಮನ



ನ್ಯೂಜಿಲೆಂಡ್ ವಿರುದ್ಧ ಬೆಂಗಳೂರು ಟೆಸ್ಟ್ ಸೋತಿರುವ ಟೀಂ ಇಂಡಿಯಾ ಇದೀಗ ಪುಣೆಯಲ್ಲಿ ನಡೆಯಲ್ಲಿರುವ ಎರಡನೇ ಟೆಸ್ಟ್ ಪಂದ್ಯಕ್ಕೆ ತನ್ನ ತಯಾರಿ ಆರಂಭಿಸಿದೆ. ಅದರಂತೆ ಪ್ರಸ್ತುತ ಭಾರತದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿಯಲ್ಲಿ ದೆಹಲಿ ವಿರುದ್ಧ ಭರ್ಜರಿ ಶತಕ ಸಿಡಿಸಿದ್ದ ಟೀಂ ಇಂಡಿಯಾದ ಯುವ ಆಲ್‌ರೌಂಡರ್ ವಾಷಿಂಗ್ಟನ್ ಸುಂದರ್ ಅವರನ್ನು ಉಳಿದಿರುವ ಎರಡನೇ ಮತ್ತು ಮೂರನೇ ಟೆಸ್ಟ್ ಪಂದ್ಯಕ್ಕೆ ತಂಡದಲ್ಲಿ ಆಯ್ಕೆ ಮಾಡಿದೆ. ಇದರರ್ಥ ಪುಣೆ ಟೆಸ್ಟ್‌ಗೆ ಟೀಂ ಇಂಡಿಯಾದ ಆಡುವ ಹನ್ನೊಂದರ ಬಳಗದಲ್ಲಿ ಬದಲಾವಣೆ ಮಾಡುವ ಸೂಚನೆಯನ್ನು ಬಿಸಿಸಿಐ ನೀಡಿದೆ. ಸುಂದರ್ ಆಗಮನದಿಂದಾಗಿ ಆರ್ ಅಶ್ವಿನ್ ತಂಡದಿಂದ ಹೊರನಡೆಯುವ ಸಾಧ್ಯತೆಗಳಿವೆ.

ವಾಷಿಂಗ್ಟನ್ ಸುಂದರ್ ಅವರನ್ನು ತಂಡಕ್ಕೆ ಆಯ್ಕೆ ಮಾಡಿರುವ ಬಗ್ಗೆ ಮಾಹಿತಿ ನೀಡಿರುವ ಬಿಸಿಸಿಐ, ಭಾರತೀಯ ಹಿರಿಯ ಆಯ್ಕೆ ಸಮಿತಿಯು ಆಲ್‌ರೌಂಡರ್ ವಾಷಿಂಗ್ಟನ್ ಸುಂದರ್ ಅವರನ್ನು ನ್ಯೂಜಿಲೆಂಡ್ ವಿರುದ್ಧ ಉಳಿದಿರುವ ಇನ್ನೆರಡು ಟೆಸ್ಟ್ ಪಂದ್ಯಗಳಿಗೆ ತಂಡದಲ್ಲಿ ಆಯ್ಕೆ ಮಾಡಿದ್ದು, ಪ್ರಸ್ತುತ ರಣಜಿಯಲ್ಲಿ ನಿರತರಾಗಿರುವ ಸುಂದರ್ ಇಷ್ಟರಲ್ಲೇ ಟೀಂ ಇಂಡಿಯಾವನ್ನು ಪುಣೆಯಲ್ಲಿ ಕೂಡಿಕೊಳ್ಳಲಿದ್ದಾರೆ ಎಂದಿದೆ.

ವಾಷಿಂಗ್ಟನ್ ಸುಂದರ್ 2021 ರಲ್ಲಿ ಟೀಂ ಇಂಡಿಯಾ ಪರ ತಮ್ಮ ಕೊನೆಯ ಟೆಸ್ಟ್ ಪಂದ್ಯವನ್ನು ಆಡಿದ್ದರು. ಅಂದರೆ ಅವರು ಬಹಳ ದಿನಗಳ ನಂತರ ಭಾರತ ಟೆಸ್ಟ್ ತಂಡದಲ್ಲಿ ಪುನರಾಗಮನ ಮಾಡಲಿದ್ದಾರೆ. ಸುಂದರ್ ಇದುವರೆಗೆ ಟೀಂ ಇಂಡಿಯಾ ಪರ 4 ಟೆಸ್ಟ್ ಪಂದ್ಯಗಳನ್ನಾಡಿದ್ದು, ಟೆಸ್ಟ್ ಕ್ರಿಕೆಟ್‌ನಲ್ಲಿ ಅವರು ಆಡಿರುವ ಆರು ಇನ್ನಿಂಗ್ಸ್‌ಗಳಲ್ಲಿ ಮೂರು ಅರ್ಧ ಶತಕ ಸೇರಿದಂತೆ 66.25 ಸರಾಸರಿಯಲ್ಲಿ 265 ರನ್ ಕಲೆಹಾಕಿದ್ದಾರೆ. ಇದಲ್ಲದೇ 6 ವಿಕೆಟ್ ಕೂಡ ಕಬಳಿಸಿದ್ದಾರೆ.

**ಸುಂದರ್ ವೃತ್ತಿಜೀವನ:** ವಾಷಿಂಗ್ಟನ್ ಸುಂದರ್ ಇತ್ತೀಚೆಗೆ ಬಾಂಗ್ಲಾದೇಶ ವಿರುದ್ಧದ ಟಿ20 ಸರಣಿಯಲ್ಲಿ ಆಡುವ ಅವಕಾಶ ಪಡೆದಿದ್ದರು. ಇದಕ್ಕೂ ಮುನ್ನ ಅವರು ಶ್ರೀಲಂಕಾ ಪ್ರವಾಸದಲ್ಲಿ ಏಕದಿನ ತಂಡದ ಭಾಗವಾಗಿದ್ದರು. ವಾಷಿಂಗ್ಟನ್ ಸುಂದರ್ ಇದುವರೆಗೆ ಟೀಂ ಇಂಡಿಯಾ ಪರ 22 ಏಕದಿನ ಹಾಗೂ 52 ಟಿ20 ಪಂದ್ಯಗಳನ್ನು ಆಡಿದ್ದಾರೆ.

**ರಣಜಿ ಟ್ರೋಫಿಯಲ್ಲಿ ಡೆಲ್ಲಿ ವಿರುದ್ಧ ಶತಕ**

**ವಾಷಿಂಗ್ಟನ್ ಸುಂದರ್ ಪ್ರಸ್ತುತ ರಣಜಿ ಟ್ರೋಫಿಯ ಎಲೈಟ್ ಗ್ರೂಪ್ ಡಿ ನಲ್ಲಿ ತಮಿಳುನಾಡು ಮತ್ತು ದೆಹಲಿ ತಂಡಗಳ ನಡುವೆ ನಡೆಯುತ್ತಿರುವ ಪಂದ್ಯದಲ್ಲಿ ಆಡುತ್ತಿದ್ದಾರೆ. ವಾಷಿಂಗ್ಟನ್ ಸುಂದರ್ ಈ ಪಂದ್ಯದಲ್ಲಿ ಅದ್ಭುತ ಪ್ರದರ್ಶನ ನೀಡಿದ್ದು, ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಶತಕ ಸಿಡಿಸಿದ್ದರು. ಕಳೆದ 7 ವರ್ಷಗಳಲ್ಲಿ ಇದು ಅವರ ಮೊದಲ ಪ್ರಥಮ ದರ್ಜೆ ಶತಕವಾಗಿದೆ. ಮೂರನೇ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡಿದ ಅವರು 269 ಎಸೆತಗಳಲ್ಲಿ 19 ಬೌಂಡರಿ ಮತ್ತು 1 ಸಿಕ್ಸರ್ ಸಹಿತ 152 ರನ್ ಬಾರಿಸಿದಲ್ಲದೆ, ಬೌಲಿಂಗ್‌ನಲ್ಲೂ ಕಮಾಲ್ ಮಾಡಿದ ಸುಂದರ್ ಎರಡು ವಿಕೆಟ್ ಕೂಡ ಪಡೆದಿದ್ದಾರೆ.**

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966